ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 307

2–6–2025 ಸೋಮವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 307

# ಭೂ ಗ್ಯಾರಂಟಿ ಯೋಜನೆಯಡಿ ಹಂತ ಹಂತವಾಗಿ ಹಕ್ಕುಪತ್ರ ವಿತರಣೆ: ಸಂಸದೆ ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ:** ರಾಜ್ಯದಲ್ಲಿ ಭೂಮಿ ಹೊಂದಿರುವ ಬಡವರು, ಹಿಂದುಳಿದ ವರ್ಗದವರು, ಆದಿವಾಸಿಗಳು, ದಲಿತರು ಯಾವುದೇ ಕಾರಣಕ್ಕೂ ಮಾಲೀಕತ್ವದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ರಾಜ್ಯ ಸರ್ಕಾರ ಆರನೇ ಗ್ಯಾರಂಟಿಯಾಗಿ ಭೂ ಗ್ಯಾರಂಟಿ ಯೋಜನೆ ಜಾರಿ ಮಾಡಿದೆ ಅದರಂತೆ ಹಂತ ಹಂತವಾಗಿ ಹಕ್ಕುಪತ್ರ ವಿತರಣೆ ಕಾರ್ಯ ಮಾಡಲಾಗುತ್ತಿದೆ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಭಾನುವಾರ ಮಾಯಕೊಂಡ ಕ್ಷೇತ್ರವ್ಯಾಪ್ತಿಯ ಮತ್ತಿ ಗ್ರಾಮ ಪಂಚಾಯಿತಿಗೆ ಸೇರಿದ ಹಾಗೂ ಸರ್ಕಾರ ಕಂದಾಯ ಗ್ರಾಮವನ್ನಾಗಿ ಘೋಷಣೆ ಮಾಡಿದ ದಾಸಪ್ಪನಗರ ಮರು ನಾಮಕಾರಣ ಫಲಕ ಉದ್ಘಾಟನೆಯ ಸಮಾರಂಭದಲ್ಲಿ ಗ್ರಾಮಸ್ಥರಿಗೆ ಹಕ್ಕುಪತ್ರ ವಿತರಿಸಿ ಮಾತನಾಡಿದರು.

ಇತ್ತೀಚೆಗಷ್ಟೆ ಹೊಸಪೇಟೆಯಲ್ಲಿ ರಾಜ್ಯ ಸರ್ಕಾರದ ಸಾಧನಾ ಸಮಾವೇಶ ಜರುಗಿತು. ಈ ವೇಳೆ ಲೋಕಸಭೆಯ ವಿರೋಧ ಪಕ್ಷದ ನಾಯಕರಾದ ರಾಹುಲ್



ಗಾಂಧಿಯವರು ಭೂ ಗ್ಯಾರಂಟಿ ಯೋಜನೆಗೆ ಆದ್ಯತೆ ನೀಡಿದ್ದಾರೆ. ಕರ್ನಾಟಕ ರಾಜ್ಯದಲ್ಲಿ ಹಂತಹಂತವಾಗಿ ಭೂ ಗ್ಯಾರಂಟಿ ಮೂಲಕ ರೈತರಿಗೆ ನೆರವು ನೀಡಲಾಗುವುದು ಎಂದರು.

ಸಾಮಾಜಿಕ ನ್ಯಾಯ ನೀಡುವುದೇ ರಾಜ್ಯ ಸರ್ಕಾರದ ಗುರಿಯಾಗಿದೆ. ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಿಂದ ಜನರು ಆರ್ಥಿಕವಾಗಿ ಸಬಲರಾಗಲು ಸಾಧ್ಯವಾಗಿದೆ. ಕೆಲವು ಗ್ರಾಮೀಣಭಾಗದಲ್ಲಿ ಸರ್ಕಾರಿ ಶಾಲೆಗಳು ಇಂದಿಗೂ ರಿಜಿಸ್ಟರ್ ಆಗಿಲ್ಲ. ಶಾಲೆ ನಡೆಸಲು ಹಿಂದೆ ಹಿರಿಯರು ಸ್ಥಳವನ್ನು ದಾನವಾಗಿ ನೀಡಿರುತ್ತಾರೆ. ಆದರೆ ಸರ್ಕಾರದ ಹೆಸರಿನಲ್ಲಿ ರಿಜಿಸ್ಟರ್ ಆಗಿರುವುದಿಲ್ಲ ಅಂತಹವುಗಳನ್ನು ಗುರುತಿಸಿ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಸಲಹೆ ನೀಡಿದರು. ಸರ್ಕಾರದ ಕೆಲಸ ಏನೆಂದು ಜನರು ಅರ್ಥಮಾಡಿಕೊಳ್ಳಬೇಕು ಹಾಗೂ ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು. ಶಾಮನೂರು ಶಿವಶಂಕರಪ್ಪ ಅವರ ಹೆಸರಿನಲ್ಲಿರುವ ಕೇರ್ ಟ್ರಸ್ಟ್ ಮೂಲಕ ಆರೋಗ್ಯದ ಕಾಳಜಿಯಿಂದ ಮೂರು ಉಚಿತ ಸೇವೆಗಳನ್ನು ಮಾಡಲಾಗುತ್ತಿದೆ. ಡಯಾಲಿಸಿಸ್ ಸೇವೆ,ಹೆರಿಗೆ ಸೇವೆ ಹಾಗೂ ಕಣ್ಣಿನ ಪೊರೆ ಚಿಕಿತ್ಸೆ ಒದಗಿಸಲಾಗಿದೆ. ಆರೋಗ್ಯದ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡಲಾಗುತ್ತಿದೆ. ದಾಸಪ್ಪ ನಗರದ ಗ್ರಾಮಸ್ಥರು ಆರೋಗ್ಯ ಶಿಬಿರ ಆಯೋಜಿಸಲು ಕೋರಿದ್ದಾರೆ. ಮುಂದಿನ ದಿನಗಳಲ್ಲಿ ನಡೆಸಲಾಗುವುದು ಎಂದರು.

ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ ಮಾತನಾಡಿ, ಮಾಯಕೊಂಡ ನಕಾಶೆ ದಾರಿ ಒತ್ತುವರಿ ಮುಕ್ತ ಕ್ಷೇತ್ರವನ್ನಾಗಿಸಲು ಪಣ ತೊಟ್ಟಿದ್ದು, ನಕಾಶೆ ದಾರಿಯನ್ನು ಯಾರೇ ಒತ್ತುವರಿಮಾಡಿದ್ದರೂ ಮುಲಾಜಿಲ್ಲದೆ ಹೊಡೆದು ಹಾಕಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಜ್ಯದಲ್ಲೇ ಅತೀ ಹೆಚ್ಚು ನಕಾಸೆ ದಾರಿಗಳನ್ನು ಹೊಂದಿದ ಕ್ಷೇತ್ರ ಮಾಯಕೊಂಡ ಆಗಿದ್ದು,ನಕಾಸೆ ದಾರಿಗಳನ್ನು ಒತ್ತುವರಿ ಮಾಡಿಕೊಂಡಿರುವುದು ರೈತರು ಹೊಲ–ಮನೆಗಳಿಗೆ ಓಡಾಡುವುದುಸಮಸ್ಯೆ ಆಗಿದೆ. ಈ ನಿಟ್ಟಿನಲ್ಲಿ ತಹಸೀಲ್ದಾರ್‌ಗಳು ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಬೇಕೆಂದರು.

# ಜಿಲ್ಲೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ ಎಸ್ಸೆಸ್ಸೆಂ



**ದಾವಣಗೆರೆ:** ಬೆಂಗಳೂರು ವಿಧಾನಸೌಧದ ಸಭಾ ಭವನದಲ್ಲಿ ಶನಿವಾರ ಸಚಿವ ಸಂಪುಟ ಸಭೆ ನಡೆಯಲಾಗಿ, ಸಭೆಯ ನಂತರ ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಸಿಇಓ ಅವರುಗಳೊಂದಿಗೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಿ, ಜಿಲ್ಲೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕಾ ಮತ್ತು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಪಾಲ್ಗೊಂಡು, ದಾವಣಗೆರೆ ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಯ ಕುರಿತಾಗಿ ಹಾಗೂ ಜಿಲ್ಲೆಯ ಪ್ರಗತಿ ಪರಿಶೀಲನಾ ಅಂಕಿ ಅಂಶದ ಮಾಹಿತಿಯನ್ನು ಮುಖ್ಯಮಂತ್ರಿಗಳಿಗೆ ಒದಗಿಸಿದರು. ಜಿಲ್ಲೆಯ ಅಭಿವೃದ್ಧಿ ಕುರಿತು ಪ್ರಸ್ತಾಪಿಸಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿಗಳು, ಸಚಿವರುಗಳು, ಶಾಸಕರು, ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ನ್ಯಾಯಾಧೀಶರಿಗೆ ಸ್ವಾಗತ ಸಮಾರಂಭ ಇಂದು

**ದಾವಣಗೆರೆ:** ದಾವಣಗೆರೆಯ ಜಿಲ್ಲಾ ನ್ಯಾಯಾಲಯಕ್ಕೆ ವರ್ಗಾವಣೆಯಾಗಿ ಬಂದಿರುವ ಮತ್ತು ವಿವಿಧ ನ್ಯಾಯಾಲಯಗಳಿಗೆ ವರ್ಗಾವಣೆ ಆಗಿರುವ ನ್ಯಾಯಾಧೀಶರಿಗೆ ಸ್ವಾಗತ ಸಮಾರಂಭವನ್ನು ದಾವಣಗೆರೆ ಜಿಲ್ಲಾ ವಕೀಲರ ಸಂಘ ಜೂನ್ 2ರಂದು ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿರುವ ವಕೀಲರ ಸಾಂಸ್ಕೃತಿಕ ಸಭಾ ಭವನದಲ್ಲಿ ಆಯೋಜಿಸಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಡಿ.ಕೆ.ವೇಲಾ, 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ, 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಆರ್.ಎನ್.ಪ್ರವೀಣ್‌ಕುಮಾರ್, ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಎಸ್‌ಟಿಎಫ್‌ಸಿ–1 ಆದ ಶ್ರೀರಾಮ ನಾರಾಯಣ ಹೆಗಡೆ, ಜಿಲ್ಲಾ ಕೌಟುಂಬಿಕ ನ್ಯಾಯಾಲಯದ ಜಿಲ್ಲಾ ನ್ಯಾಯಾಧೀಶರಾದ ಶಿವಪ್ಪ ಗಂಗಪ್ಪ ಸಲಗರೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ, ಪ್ರಧಾನ ಸಿವಿಲ್ ನ್ಯಾಯಾಧೀಶರು, ಜೆಎಂಎಫ್‌ಸಿ ಆದ ಹೆಚ್.ಡಿ.ಗಾಯತ್ರಿ ಆಗಮಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು, ಮುಖ್ಯ ನ್ಯಾಯಿಕ ದಂಡಾಧಿಕಾರಿ ಹೆಚ್.ಕೆ.ರೇಷ್ಮಾ, 1ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು, ಜೆಎಂಎಫ್‌ಸಿ ಆದ ವಿ.ಎಲ್.ಅಮರ್, 2ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು, ಜೆಎಂಎಫ್‌ಸಿ ಆದ ಸಿ.ನಾಗೇಶ್, 3ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು, ಜೆಎಂಎಫ್‌ಸಿ ಆದ ಕೆ.ಲತಾ, 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು, ಜೆಎಂಎಫ್‌ಸಿ ಆದ ಕೆ.ಎನ್.ಕಿಶೋರ್‌ಕುಮಾರ್, 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು, ಜೆಎಂಎಫ್‌ಸಿ ಆದ ಎಂ.ಪದ್ಮಾ, 3ನೇ

# ಸೈಕಲ್ ಬಳಕೆಯಿಂದ ಆರೋಗ್ಯ ಹಾಗೂ ಪರಿಸರ ಸಂರಕ್ಷಣೆ: ಉಮಾ ಪ್ರಶಾಂತ್




**ದಾವಣಗೆರೆ:** ನಿತ್ಯಜೀವನದಲ್ಲಿ ಸೈಕಲ್ ಸವಾರಿಯಿಂದ ಉತ್ತಮ ಆರೋಗ್ಯದ ಜೊತೆಗೆ ಪರಿಸರ ಮಾಲಿನ್ಯವನ್ನು ತಡೆಗಟ್ಟಬಹುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಭಾನುವಾರ ಜಿಲ್ಲಾಡಳಿತ, ಜಿ.ಪಂ., ಜಿಲ್ಲಾ ಪೊಲೀಸ್ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ದಾವಣಗೆರೆಯ ಬೈಸಿಕಲ್ ಕ್ಲಬ್ ಸಹಯೋಗದಲ್ಲಿ ಕ್ವಿಟ್ ಇಂಡಿಯಾ ಕಾರ್ಯಕ್ರಮದಡಿ ವಿಶ್ವ ಬೈಸಿಕಲ್ ದಿನಾಚರಣೆ ಅಂಗವಾಗಿ ಆಯೋಜಿಸಿದ ತಿರಂಗ ಸೈಕಲ್ ರ್‍ಯಾಲಿಯ ಸಮಾರೋಪ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪ್ರಸ್ತುತ ಪ್ರತಿ ಮನೆಯಲ್ಲಿ 2 ರಿಂದ 3 ದ್ವಿಚಕ್ರ ವಾಹನಗಳಿರುತ್ತವೆ. ದ್ವಿಚಕ್ರ ವಾಹನಗಳ ಹೊಗೆಯಿಂದ ಪರಿಸರ ಮಾಲಿನ್ಯವಾಗುತ್ತಿದೆ. ಕನಿಷ್ಟ ವಾರದಲ್ಲಿ ಒಂದು ದಿನವಾದರೂ ಸೈಕಲ್ ಬಳಸಿರಿ. ಹೆಚ್ಚಾಗಿ ಸೈಕಲ್ ಬಳಸುವುದರಿಂದ ಪರಿಸರದ ಜೊತೆಗೆ ಆರೋಗ್ಯದ ರಕ್ಷಣೆ ಮಾಡಿಕೊಳ್ಳಬಹುದಾಗಿದೆ ಎಂದರು.

ಚಿಕ್ಕ ವಯಸ್ಸಿನಿಂದಲೇ ಮಕ್ಕಳಿಗೆ ಸೈಕಲ್ ಕಲಿಸಬೇಕು. ಕ್ವಿಟ್ ಇಂಡಿಯಾ ಕಾರ್ಯಕ್ರಮದಡಿ ಅತೀ ಕಡಿಮೆ ಅವಧಿಯಲ್ಲಿ ಇಂತಹ ಸೈಕಲ್ ರ್‍ಯಾಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮುಂದಿನ ದಿನಗಳಲ್ಲಿ ಹೆಚ್ಚೆಚ್ಚು ಸೈಕಲ್ ರ್‍ಯಾಲಿ ಮೂಲಕ ಜಾಗೃತಿ ಕಾರ್ಯಕ್ರಮಗಳು ನಡೆಯಲಿ ಎಂದು ಅವರು ಆಶಿಸಿದರು.

ಸಂಚಾರಿ ಪೊಲೀಸ್ ವೃತ್ತ ನಿರೀಕ್ಷಕ ಸಿಪಿಐ ನಲವಾಗಲು ಮಂಜುನಾಥ ಹೈಸ್ಕೂಲ್ ಮೈದಾನದಲ್ಲಿ ಸೈಕಲ್ ರ್‍ಯಾಲಿಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ತಹಸೀಲ್ದಾರ್ ಡಾ. ಎಂ.ಬಿ. ಅಶ್ವಥ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶ್ರೀಹರ್ಷ, ಪೊಲೀಸ್ ಅಧಿಕಾರಿ ಎಚ್.ಬಿ. ಸೋಮಶೇಖರಪ್ಪ, ಪೊಲೀಸ್ ಇನ್ಸ್‌ಪೆಕ್ಟರ್ ಮಲ್ಲಮ್ಮ ಚೌಬೆ, ಸಂಚಾರಿ ಪೊಲೀಸ್ ಮಹೇಂದ್ರ, ದಾವಣಗೆರೆ ಬೈಸಿಕಲ್ ಕ್ಲಬ್ ಅಧ್ಯಕ್ಷ ರಾಜೇಂದ್ರ ಪ್ರಸಾದ, ಕಾರ್ಯದರ್ಶಿ ಕೆ.ಎಸ್. ಮಹೇಶ, ಡಾ. ಸುರೇಶ, ಡಾ. ರಾಘವೇಂದ್ರ, ಡಾ. ಮಾಲತೇಶ, ಡಾ. ಸಂತೋಷ, ಕಿರಣ್, ನಾಗರಾಜ, ಹೇಮಂತ್ ಆರಾಧ್ಯ, ಹಿಮಾಲಯನ್ ಅಡ್ವೆಂಚರ್ ಅಂಡ್ ನೇಚರ್ ಅಕಾಡೆಮಿಯ ಎನ್.ಕೆ. ಕೊಟ್ರೇಶ್, ವೀರೇಶ, ಅರುಣ ಇನ್ನಿತರರು ಪಾಲ್ಗೊಂಡಿದ್ದರು. ಸೈಕಲ್ ರ್‍ಯಾಲಿಯು ಇಲ್ಲಿನ ಹೈಸ್ಕೂಲ್ ಮೈದಾನದಿಂದ ಆರಂಭಗೊಂಡು ಮಹಾನಗರ ಪಾಲಿಕೆ, ಗಾಂಧಿ ಸರ್ಕಲ್, ಅಂಬೇಡ್ಕರ್ ಸರ್ಕಲ್, ಹದಡಿ ರಸ್ತೆ, ವಿದ್ಯಾರ್ಥಿ ಭವನ ಸರ್ಕಲ್, ಡೆಂಟಲ್ ಕಾಲೇಜು ರಸ್ತೆ, ಬಾಪೂಜಿ ಆಸ್ಪತ್ರೆ ಮಾರ್ಗವಾಗಿ ಜಿಲ್ಲಾ ಕ್ರೀಡಾಂಗಣ ತಲುಪಿತು.

# ವಾಣಿಜ್ಯ ಎಲ್‌ಪಿಜಿ 24 ರೂ. ಇಳಿಕೆ



**ನವದೆಹಲಿ, ಜೂ.1–** ತೈಲ ಮಾರುಕಟ್ಟೆ ಕಂಪನಿಗಳು ವಾಣಿಜ್ಯ ಎಲ್‌ಪಿಜಿ ಗ್ಯಾಸ್ ಸಿಲಿಂಡರ್‌ಗಳ ಬೆಲೆಯನ್ನು 24 ರೂಪಾಯಿಗಳಷ್ಟು ಕಡಿಮೆ ಮಾಡಿವೆ. ಬೆಲೆ ಏರಿಕೆಯಿಂದ ತತ್ತರಿಸಿದ್ದ ಜನತೆಗೆ ಕೊಂಚ ನಿರಾಳರಾದಂತಾಗಿದೆ.

ಪರಿಷ್ಕೃತ ಬೆಲೆಗಳು 19 ಕೆಜಿ ವಾಣಿಜ್ಯ ಎಲ್ ಪಿಜಿ ಸಿಲಿಂಡರ್‌ಗೆ ಅನ್ವಯಿಸುತ್ತವೆ. ಪರಿಷ್ಕೃತ ಬೆಲೆಗಳು ರೆಸ್ಟೋರೆಂಟ್‌ಗಳು, ಹೋಟೆಲ್‌ಗಳು ಮತ್ತು ಇತರ ವಾಣಿಜ್ಯ ಸಂಸ್ಥೆಗಳಿಗೆ ಪರಿಹಾರವನ್ನು ತರುತ್ತವೆ, ಏಕೆಂದರೆ ಅವುಗಳು ತಮ್ಮ ದೈನಂದಿನ ಕಾರ್ಯಾಚರಣೆಗಾಗಿ 19 ಕೆಜಿ ಎಲ್‌ಪಿಜಿ ಸಿಲಿಂಡರ್‌ಗಳನ್ನು ಹೆಚ್ಚು ಅವಲಂಬಿಸಿರುತ್ತವೆ.

ಹೊಸ ಪರಿಷ್ಕರಣೆಯಲ್ಲಿ ದೆಹಲಿಯಲ್ಲಿ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆ 24 ರೂ. ಇಳಿಕೆಯಾಗಿದೆ. ಇದರ ಪರಿಣಾಮವಾಗಿ ದೆಹಲಿ– 1,723.50 ರೂ. ಕೋಲ್ಕತ್ತಾ 1,826 ರೂ., ಮುಂಬೈನಲ್ಲಿ, ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಈಗ 1,674.50 ರೂ ನಲ್ಲಿ ಲಭ್ಯವಿದೆ.

## ಟ್ಯಾಂಕರ್ ಹರಿದು ಮೂವರ ಸಾವು



**ಬೆಳಗಾವಿ,ಜೂ.1–** ಪುಣೆ–ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯ ಕಿತ್ತೂರು ಬಳಿ ವೇಗವಾಗಿ ಬಂದ ಟ್ಯಾಂಕರ್ ಹರಿದು ಮೂವರು ಕಾರ್ಮಿಕರು ಸ್ಥಳದಲ್ಲೇ ಸಾವನ್ನಪ್ಪಿರುವ ದಾರುಣ ಘಟನೆ ಇಂದು ಬೆಳಿಗ್ಗೆ ನಡೆದಿದೆ.

ಬೆಳಗಾವಿಯ ಪುಣೆ–ಬೆಂಗಳೂರು ರಾಷ್ಟ್ರೀಯ ಹೆದ್ದಾರಿ–4ರಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕರ ಮೇಲೆ ಟ್ಯಾಂಕರ್ ಹರಿದು ಮೂವರು ಕಾರ್ಮಿಕರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಟ್ಯಾಂಕರ್ ಚಾಲಕನ ನಿರ್ಲಕ್ಷ್ಯದಿಂದ ಕಾರ್ಮಿಕರ ಮೇಲೆ ಟ್ಯಾಂಕರ್ ಹರಿದಿದ್ದು, ಈ ವೇಳೆ ಟ್ಯಾಂಕರ್ ಕೂಡ ಪಲ್ಟಿಯಾಗಿದ್ದು, ಚಾಲಕ ಕೂಡ ಗಂಭೀರವಾಗಿ ಗಾಯಗೊಂಡಿದ್ದಾರೆ. ಸುದ್ದಿ ತಿಳಿದ ತಕ್ಷಣವೇ ಸ್ಥಳಕ್ಕೆ ಕಿತ್ತೂರು ಪೊಲೀಸರು ಧಾವಿಸಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

## ‘ಹೇಳಿಕೆ ಸಮರ್ಥನೆ ಮಾಡಿಕೊಳ್ಳಲ್ಲ’: ಕೊನೆಗೂ ಮೌನ ಮುರಿದ ಶಿವಣ್ಣ

**ಬೆಂಗಳೂರು:** ತಮಿಳು ನಟ ಕಮಲ್ ಹಾಸನ್ ಕನ್ನಡ ಕುರಿತ ಹೇಳಿಕೆ ವ್ಯಾಪಕ ವಿವಾದಕ್ಕೀಡಾಗಿರುವಂತೆಯೇ ಇದೇ ಮೊದಲ ಬಾರಿಗೆ ನಟ ಶಿವರಾಜ್ ಕುಮಾರ್ ವಿವಾದದ ಕುರಿತು ಮೌನ ಮುರಿದಿದ್ದಾರೆ.



ಕನ್ನಡ ಭಾಷೆ ಬಗ್ಗೆ ನಟ ಕಮಲ್ ಹಾಸನ್ ನೀಡಿದ ಹೇಳಿಕೆ ವಿವಾದದ ಬಗ್ಗೆ ಕೊನೆಗೂ ನಟ ಶಿವರಾಜ್‌ಕುಮಾರ್ ಮೌನ ಮುರಿದಿದ್ದು, ನಟ ಕಮಲ್ ರ ಹೇಳಿಕೆಯನ್ನು ನಾನು ಸಮರ್ಥನೆ ಮಾಡಿಕೊಳ್ಳುವುದಿಲ್ಲ ಎಂದು ಹೇಳಿದ್ದಾರೆ.

# ಸರ್ಕಾರಿ ಶಾಲೆಗೆ ಕಿಡಿಗೇಡಿಗಳ ಕಾಟ

## ದಾವಣಗೆರೆ ಎಸ್‌ಓಜಿ ಕಾಲೋನಿ ಶಾಲಾ ಕೊಠಡಿಗಳ ಕಾರಿಡಾರ್‌ನಲ್ಲಿ ಗಲೀಜು

**ದಾವಣಗೆರೆ :** ಜ್ಞಾನ ದೇಗುಲವಿದು.... ಕೈ ಮುಗಿದು ಒಳಗೆ ಬಾ.... ಎನ್ನುವ ಶಿಕ್ಷಣ ಇಲಾಖೆಯ ಘೋಷ ವಾಕ್ಯವನ್ನು ತಿಳಿಯದ ಕಿಡಿಗೇಡಿಗಳು ಶಾಲಾ ಕೊಠಡಿಯ ಕಾರಿಡಾರ್‌ನಲ್ಲಿ ಮಲ–ಮೂತ್ರ ವಿಸರ್ಜನೆ ಮಾಡುವ ಮೂಲಕ ತಮ್ಮ ವಿಕೃತಿ ಮೆರೆದಿದ್ದಾರೆ..!

ಹೌದು ನಿಜ... ಇದು ದಾವಣಗೆರೆ 31ನೇ ವಾರ್ಡಿನ ಎಸ್.ಓ.ಜಿ. ಕಾಲೋನಿಯ ಸರ್ಕಾರಿ ಶಾಲೆಯ ಆವರಣದಲ್ಲಿ ಈ ಘಟನೆ ಭಾನುವಾರ ಬೆಳಕಿಗೆ ಬಂದಿದೆ.

ಪ್ರತಿ ನಿತ್ಯ ಈ ಶಾಲಾಂಗಳದಲ್ಲಿ ಮಲ–ಮೂತ್ರ ಮಾಡುವ ಕಿಡಿಗೇಡಿಗಳ ಕೃತ್ಯಕ್ಕೆ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ಸಹಜವಾಗಿ ಕಿರಿ ಕಿರಿಯುಂಟಾಗಿದೆ.

ಪ್ರತಿ ದಿನ ಬೆಳಿಗ್ಗೆ ಶಾಲಾ ಆರಂಭಕ್ಕೂ ಮುನ್ನ ಸ್ವಚ್ಚತೆಗೆ ಸಾಕಷ್ಟು ಸಮಯ ಮೀಸಲಿಡಬೇಕಾಗಿ ಬಂದಿದೆ, ಇದರಿಂದ ಸಿಬ್ಬಂದಿಗೆ ಸ್ವಚ್ಛ ಮಾಡಿ ಸಾಕು ಸಾಕಾಗಿ ಹೋಗಿದೆ.

**(ಏನಿದು ಘಟನೆ:–** ಮೇ29ರಂದು ಶಾಲಾರಂಭಕ್ಕೂ ಮುನ್ನ ರಜಾ ದಿನಗಳಲ್ಲಿ ಕಲುಷಿತಗೊಂಡಿದ್ದ ಶಾಲಾ ಪರಿಸರವನ್ನು ಸ್ವಚ್ಚಗೊಳಿಸಲಾಗಿತ್ತು.ಮರುದಿನ ಶನಿವಾರ ಶಾಲಾ ತರಗತಿಗಳು ಪ್ರಾರಂಭವಾದವು ಅದರೆ ಆಗಲೇ ಭಾನುವಾರ ಶಾಲಾ ಕೊಠಡಿಗಳ ಕಾರಿಡಾರ್‌ನಲ್ಲಿ ಮಣ್ಣು ಹಾಕಿ ಗಲೀಜು ಮಾಡಿರುವುದು ಬೆಳಕಿಗೆ ಬಂದಿದೆ. ವಾಯು ವಿಹಾರಕ್ಕೆ ಬಂದಿದ್ದ ನಾಗರೀಕರು ಈ ಗಲೀಜು ಕಂಡು ಆಕ್ರೋಶಗೊಂಡರು. ಕಿಡಿಗೇಡಿಗಳ ಕೃತ್ಯವನ್ನು ಖಂಡಿಸಿ ಪೊಲೀಸರಿಗೆ ಫೋನಾಯಿಸಿ ಶಾಲಾ ಆವರಣದಲ್ಲಿ ನಡೆದ ಗಲೀಜ್ ಬಗ್ಗೆ ದೂರು ಹೇಳಿಕೊಂಡರು. ಸ್ಥಳಕ್ಕೆ ಧಾವಿಸಿ ಬಂದ ಪೊಲೀಸರು ಕಿಡಿಗೇಡಿಗಳ ಪತ್ತೆಹಚ್ಚಿ ಕಾನೂನು ಕ್ರಮ ಜರುಗಿಸುವ ಭರವಸೆ ನೀಡಿದರು.

ದಾವಣಗೆರೆ ಸ್ಮಾರ್ಟ್ ಸಿಟಿ ಅಬ್ಬರದಲ್ಲಿ ಬಡವರು, ಕೂಲಿಕಾರ್ಮಿಕರು ವಾಸಿಸುವ ಎಸ್.ಓ.ಜಿ ಕಾಲೋನಿಯಲ್ಲಿ ಈ ಸರ್ಕಾರಿ ಶಾಲೆ ಗುಣಮಟ್ಟದ ಶಿಕ್ಷಣದಲ್ಲಿ ತನ್ನದೇ ಆದ ಛಾಪು ಮೂಡಿಸಿದೆ. ದುಬಾರಿ ಹಣಕೊಟ್ಟು ಖಾಸಗಿ ಶಾಲೆಗಳಲ್ಲಿ ಓದಿಸಲಾಗದ ಬಡವರಿಗೆ ಈ ಶಾಲೆ ಅಕ್ಷರಶಃ ವರದಾನವಾಗಿದೆ.

ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆ ಸರ್ಕಾರಿ ಪ್ರೌಢಶಾಲೆ ಒಂದೇ ಸೂರಿನಡಿ





ಕಾರ್ಯನಿರ್ವಹಿಸುತ್ತಿದ್ದು, ದಾಖಲಾತಿಗೆ ಕೊರತೆ ಏನಿಲ್ಲ. ವಿದ್ಯಾರ್ಥಿಗಳ ಸಂಖ್ಯೆ ಸಾಕಷ್ಟಿದೆ ಉತ್ತಮ ಗುಣಮಟ್ಟದ ಬೋಧನೆಗೇನು ಕಮ್ಮಿಯಿಲ್ಲ, ಶಾಲಾ ಆವರಣ, ಕಾಂಪೌಂಡು ಇತ್ಯಾದಿ ಮೂಲಭೂತ ಸೌಲಭ್ಯಗಳಿವೆ ಆದರೆ ಈ ಶಾಲೆಗೆ ಕಿಡಿಗೇಡಿಗಳ ಕಾಟ ಶುರುವಾಗಿದೆ.

ಸಂಜೆ ಶಾಲೆ ಬಿಡುತ್ತಿದ್ದಂತೆ ಕಾಂಪೌಂಡು ಹಾರಿ ಶಾಲಾಂಗಳಕ್ಕೆ ಡಾಂಗುಡಿ ಇಡುವ ಕಿಡಿಗೇಡಿಗಳ ಗುಂಪು ಗುಟ್ಕಾ ಜಗಿದು ಉಗುಳುವುದು ಬೀಡಿ–ಸಿಗರೇಟ್ ಸೇದುವುದು ಮದ್ಯಪಾನ ಮಾಡುವುದು ಮಧ್ಯರಾತ್ರಿವರೆಗೂ ಇಲ್ಲಿ ಮಾಮೂಲಿಯಾಗಿಬಿಟ್ಟಿದೆ. ಮದ್ಯದ ಅಮಲು ನೆತ್ತಿಗೆ ಏರುತ್ತಿದ್ದಂತೆ ಮಲಮೂತ್ರ ವಿಸರ್ಜನೆ ಮಾಡುತ್ತಿರುವುದರಿಂದ ಕೊಠಡಿಯ ಮುಂಭಾಗದ ಕಾರಿಡಾರ್ ಗಬ್ಬೆದ್ದು ಹೋಗಿದೆ.

ಕಿಡಿಗೇಡಿಗಳ ದಿನನಿತ್ಯದ ಆವಾಂತರಕ್ಕೆ ಕೊನೆಯಾಡಲು ಶಾಲಾ ಶಿಕ್ಷಕರು ಎಸ್‌ಡಿಎಂಸಿ ಮತ್ತು ಶಿಕ್ಷಣ ಇಲಾಖೆಯ ಅಧಿಕಾರಿಗಳ ಗಮನಕ್ಕೆ ತಂದರೂ ಪ್ರಯೋಜನವಾಗಿಲ್ಲವಂತೆ. ಸಂಬಂಧಪಟ್ಟ ಪೊಲೀಸ್ ಇಲಾಖೆ ಈ ಶಾಲೆಯ ಆವರಣದಲ್ಲಿ ನಡೆಯುವ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕಿದೆ ಎಂದು ವಾಯುವಿಹಾರಿಗಳ ಒತ್ತಾಯವಾಗಿದೆ.





# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಇದು ಮತ್ತೊಂದು ಚೈತನ್ಯದಾಯಕ ದಿನವಾಗಿರುತ್ತದೆ ಮತ್ತು ಅನಿರೀಕ್ಷಿತ ಲಾಭಗಳನ್ನು ನಿರೀಕ್ಷಿಸಬಹುದು. ನಿಮ್ಮ ವಿಪರೀತ ಶಕ್ತಿ ಮತ್ತು ಪ್ರಚಂಡ ಉತ್ಸಾಹ ಅನುಕೂಲಕರ ಫಲಿತಾಂಶಗಳನ್ನು ತರುತ್ತದೆ ಹಾಗೂ ಮನೆಯ ಉದ್ವಿಗ್ನತೆಗಳನ್ನು ಶಮನ ಕಾಣಿಸುತ್ತದೆ ನೀವು ಇಂದು ನೈಸರ್ಗಿಕ ಸೌಂದರ್ಯದಿಂದ ವಿಸ್ಮಯಗೊಳ್ಳುವ ಸಾಧ್ಯತೆಯಿದೆ. ನೀವು ಕೆಲಸ ಮಾಡುವ ಬಗ್ಗೆ ಖಚಿತವಾಗಿಲ್ಲದಿದ್ದರೆ ಯಾವ ಭರವಸೆಯನ್ನೂ ನೀಡಬೇಡಿ.

### ವೃಷಭ ರಾಶಿ

ನೀವು ಇದು ಒಳ್ಳೆಯ ಆರೋಗ್ಯ ಹೊಂದಿರುವುದರಿಂದ ಅದು ನಿಮಗೆ ಯಶಸ್ಸು ನೀಡುವ ಸಾಧ್ಯತೆಯಿದೆ. ಆದರೆ ನಿಮ್ಮ ಶಕ್ತಿಯನ್ನು ನಾಶಪಡಿಸುವ ಎಲ್ಲವನ್ನೂ ನೀವಿಂದು ತಪ್ಪಿಸಬೇಕು. ಈ ರಾಶಿಚಕ್ರಕ್ಕೆ ಸಂಬಂಧಿಸಿದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ವಿಷಯದ ಬಗ್ಗೆ ಹಣವನ್ನು ಖರ್ಚುಮಾಡಬಹುದು ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಯಾರಾದರೂ ನಿಮ್ಮನ್ನು ಶ್ಲಾಘಿಸಬಹುದು. ಇದು ಒಂದು ಅನುಕೂಲಕರವಾದ ದಿನ, ಕೆಲಸದಲ್ಲಿ ಇದನ್ನು ಸೂಕ್ತವಾಗಿ ಬಳಸಿಕೊಳ್ಳಿ.

### ಮಿಥುನ ರಾಶಿ

ನಿಮ್ಮ ಸಂಗಾತಿಯ ಅಹ್ಲಾದಕರ ಮನಸ್ಥಿತಿ ನಿಮ್ಮ ದಿನವನ್ನು ಉಜ್ವಲವಾಗಿಸಬಹುದು. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು. ಇಂದು ಪ್ರಣಯದ ಯಾವುದೇ ಆಸೆಯಿಲ್ಲ ವೃತ್ತಿಪರ ರಂಗದಲ್ಲಿ ಜವಾಬ್ದಾರಿ ಹೆಚ್ಚಾಗುವ ಸಾಧ್ಯತೆಯಿದೆ.

### ಕರ್ಕ ರಾಶಿ

ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ವೈಯಕ್ತಿಕ ಜೀವನದ ಜೊತೆಗೆ ಕೆಲವು ಧರ್ಮಾರ್ಥ ಕಾರ್ಯಗಳಲ್ಲೂ ನಿಮ್ಮನ್ನು ತೊಡಗಿಸಿಕೊಳ್ಳಿ. ಇದು ವೈಯಕ್ತಿಕ ಜೀವನವನ್ನು ಘಾಸಿಗೊಳಿಸದೇ ನಿಮಗೆ ಮಾನಸಿಕ ಶಾಂತಿ ನೀಡುತ್ತದೆ. ನೀವು ಎರಡಕ್ಕೂ ಸಮನಾದ ಗಮನ ನೀಡಬೇಕು ನಿಮ್ಮ ಪ್ರಿಯತಮೆಯ ಜೊತೆ ಇಂದು ಸಭ್ಯತೆಯಿಂದ ವರ್ತಿಸಿ.

### ಸಿಂಹ ರಾಶಿ

ಕಿರಿಕಿರಿ ನಿಮ್ಮ ಮಾನಸಿಕ ಶಾಂತಿಗೆ ತೊಂದರೆ ತಂದರೂ ಒಬ್ಬ ಸ್ನೇಹಿತರು ನಿಮ್ಮ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಅಪಾರವಾದ ಸಹಾಯ ಮಾಡುತ್ತಾರೆ. ಒತ್ತಡ ತೊಡೆದುಹಾಕಲು ಹಿತವಾದ ಸಂಗೀತವನ್ನು ಆಲಿಸಿ. ದಿನದಆರಂಭವು ಚೆನ್ನಾಗಿ ಅಗಿದರು, ಸಂಜೆಯ ಸಮಯದಲ್ಲಿ ಯಾವುದೇ ಕಾರಣದಿಂದ ನಿಮ್ಮ ಹಣ ಖರ್ಚಾಗಬಹುದು. ಇದರಿಂದ ನೀವು ತೊಂದರೆಗೊಳಗಾಗಬಹುದು. ಮನೆಯಲ್ಲಿ ಧರ್ಮಕಾರ್ಯಗಳನ್ನು ನಡೆಸಲಾಗುವುದು. ನಿಮ್ಮ ಕರೆಯನ್ನು ಮುಂದುವರಿಸುವ ಮೂಲಕ ನಿಮ್ಮ ಪ್ರಣಯದ ಸಂಗಾತಿಯನ್ನು ಚುಡಾಯಿಸುತ್ತೀರಿ.

### ಕನ್ಯಾ ರಾಶಿ

ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದದ್ದೇನಾದರೂ ಸಾಧಿಸುತ್ತೀರಿ. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಜಮೇಲ್ಮೆಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ. ನೀವು ಸ್ನೇಹಿತರೊಂದಿಗೆ ಒಳ್ಳೆಯ ಸಮಯ ಹೊಂದಿದ್ದರೂ ವಾಹನ ಚಾಲನೆ ಮಾಡುವಾಗ ಹೆಚ್ಚುವರಿ ಆರೈಕೆಯನ್ನು ಹೊಂದಿಕೊಳ್ಳಿ.

### ತುಲಾ ರಾಶಿ

ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಸಾಮಾಜಿಕ ಸಮಾರಂಭಗಳು ಪ್ರಭಾವಿ ಮತ್ತು ಪ್ರಮುಖ ಜನರೊಡನೆ ನಿಮ್ಮ ಬಾಂಧವ್ಯವನ್ನು ಸುಧಾರಿಸಲು ಒಂದು ಪರಿಪೂರ್ಣ ಅವಕಾಶವಾಗಿರುತ್ತದೆ. ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ಸಂತೋಷವಾಗಿರಿಸಲು ಕೆಲಸಗಳನ್ನು ಮಾಡುತ್ತಾರೆ. ಬಾಕಿಯಿರುವ ಯೋಜನೆಗಳು ಅಂತಿಮ ರೂಪ ಪಡೆಯುತ್ತವೆ.

### ವೃಶ್ಚಿಕ ರಾಶಿ

ಹೆಚ್ಚು ಆಶಾವಾದಿಗಳಾಗಿರಲು ನಿಮ್ಮನ್ನು ನೀವೇ ಪ್ರೇರೇಪಿಸಿಕೊಳ್ಳಿ. ಇದು ವಿಶ್ವಾಸ ಮತ್ತು ನಮ್ಯತೆಯನ್ನು ಹೆಚ್ಚಿಸುತ್ತದಾದರೂ ಅದೇಸಮಯದಲ್ಲಿ ಭಯ, ದ್ವೇಷ, ಅಸೂಯೆ, ಸೇಡಿನಂಥ ನಕಾರಾತ್ಮಕ ಭಾವನೆಗಳನ್ನು ಹಿಂದೆ ಬಿಡಲು ಸಿದ್ಧವಾಗಿ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಕೌಟುಂಬಿಕ ಒತ್ತಡ ನಿಮ್ಮ ಗಮನ ಬೇರೆಡೆಗೆ ಸೆಳೆಯದಿರಲಿ. ಕೆಟ್ಟ ಸಮಯಗಳು ನಮಗೆ ಇನ್ನೂ ಹೆಚ್ಚನ್ನು ನೀಡುತ್ತವೆ.

### ಧನು ರಾಶಿ

ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ. ನಿಮ್ಮ ಮಕ್ಕಳೂ ಕೂಡ ಮನೆಯಲ್ಲಿನ ಶಾಂತಿ ಸಾಮರಸ್ಯದ ವಾತಾವರಣವನ್ನು ಆವಾಹಿಸಿಕೊಳ್ಳುತ್ತಾರೆ. ಇದು ಪರಸ್ಪರ ಸಂಪರ್ಕದಲ್ಲಿ ನಿಮ್ಮ ಮಾತುಕತೆಗೆ ನಿಮಗೆ ಹೆಚ್ಚಿನ ಸ್ವಾಭಾವಿಕತೆ ಮತ್ತು ಸ್ವಾತಂತ್ರ್ಯ ನೀಡುತ್ತದೆ.

### ಮಕರ ರಾಶಿ

ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ.

### ಕುಂಭ ರಾಶಿ

ನಿಮ್ಮ ನಗು ಖಿನ್ನತೆಯ ವಿರುದ್ಧ ಕೆಲಸ ಮಾಡುತ್ತದೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಇಂದು ನಿಮ್ಮ ಯಾವುದೇ ಭರವಸೆಯನ್ನು ಪೂರೈಸಲು ಸಾಧ್ಯವಾಗುವುದಿಲ್ಲ.

### ಮೀನ ರಾಶಿ

ಉತ್ತಮ ಆರೋಗ್ಯ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಲು ನಿಮ್ಮನ್ನು ಸಕ್ರಿಯಗೊಳಿಸುತ್ತದೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಕುಟುಂಬದ ಸದಸ್ಯರೊಂದಿಗೆ ನಿಮ್ಮ ಸಮಸ್ಯೆಗಳನ್ನು ಹಂಚಿಕೊಂಡು ನೀವು ಒಳೆಯದನ್ನು ಅನುಭವಿಸಬಹುದು ಆದರೆ ಕೊಲವೊಮ್ಮೆ ನೀವು ನಿಮ್ಮ ಅಹಂಕಾರವನ್ನು ಮುಂದೆ ಇಟ್ಟುಕೊಂಡು ಕುಟುಂಬ ಸದಸ್ಯರಿಗೆ ಪ್ರಮುಖ ವಿಷಯಗಳನ್ನು ಹೇಳುವುದಿಲ್ಲ.

### ವಿಶ್ವ ತಂಬಾಕು ರಹಿತ ದಿನಾಚರಣೆಯಲ್ಲಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ವೇಲಾ ಡಿ.ಕೆ ಸಲಹೆ

# ದುಶ್ಚಟಗಳಿಂದ ದೂರವಿರಿ, ಓದುವ ಹವ್ಯಾಸ ರೂಢಿಸಿಕೊಳ್ಳಿ

**ದಾವಣಗೆರೆ:** ಇತ್ತೀಚಿನ ದಿನಗಳಲ್ಲಿ ಯುವ ಜನತೆ ಹೆಚ್ಚಾಗಿ ದುಶ್ಚಟಗಳಿಗೆ ಬಲಯಾಗುತ್ತಿದ್ದಾರೆ. ಇದು ಸ್ಪರ್ಧಾತ್ಮಕ ಯುಗ. ಇಂತಹ ಯುಗದಲ್ಲಿ ದುಶ್ಚಟಗಳಿಗೆ ಬಲಿಯಾದಲ್ಲಿ ತಮ್ಮ ಪೋಷಕರ ಆಸೆ, ಆಕಾಂಕ್ಷೆಗಳನ್ನೀಡೇರಿಸಲು ಹಾಗೂ ನಮ್ಮ ಗುರಿ ತಲುಪಲು ಸಾಧ್ಯವಿಲ್ಲ. ಆದ್ದರಿಂದ ದುಶ್ಚಟಗಳಿಗೆ ಬಲಿಯಾಗದೇ, ಜೀವನದಲ್ಲಿ ಓದುವ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು ಎಂದು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಡಿ.ಕೆ.ವೇಲಾ ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, , ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಕಚೇರಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ತಪೋವನ ಆಯುರ್ವೇದ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ, ತಪೋವನ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ ಹಾಗೂ ತಪೋವನ ಸ್ಕೂಲ್ ಆಫ್ ನರ್ಸಿಂಗ್ ಸಹಯೋಗದಲ್ಲಿ "ಆಕರ್ಷಕ ಉತ್ಪನ್ನಗಳು: ಕರಾಳ ಉದ್ದೇಶಗಳು" ಎಂಬ ಘೋಷವಾಕ್ಯದೊಂದಿಗೆ ಆಯೋಜಿಸಲಾಗಿದ್ದ, ವಿಶ್ವ ತಂಬಾಕು ರಹಿತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಓದುವ ಹವ್ಯಾಸಗಳಿಂದ ಮಾನಸಿಕ ಭೌದ್ಧಿಕ ಬುದ್ಧಿಮತ್ತೆ ಬೆಳವಣಿಗೆಯಾಗುತ್ತದೆ. ಮಾನವ ಜೀವನ ಅಮೂಲ್ಯವಾದುದು. ಪುನಃ ಈ ಜೀವನ ಸಿಗುವುದಿಲ್ಲ. ಆದ್ದರಿಂದ ಸಮಯವನ್ನು ಸರಿಯಾದ ರೀತಿಯಲ್ಲಿ ಬಳಸಿಕೊಂಡು ಉತ್ತಮವಾದ ಜೀವನ ಕಂಡುಕೊಳ್ಳಬೇಕು. ಪ್ರತಿಯೊಬ್ಬರೂ ಉತ್ತಮ ಗುಣಮಟ್ಟದ ವಸ್ತುಗಳು, ವೈದ್ಯರು ಹೀಗೆ ಸೂಕ್ತವಾಗಿರುವುದನ್ನೇ ಆಯ್ಕೆ ಮಾಡಿಕೊಳ್ಳಲು ಬಯಸುತ್ತಾರೆ. ಆದರೆ ಜೀವನದಲ್ಲಿ ಏನೂ ಬೇಕು ಏನೂ ಬೇಡ ಎಂಬ ಆಯ್ಕೆಯೂ ನಿಮ್ಮ ಮುಂದೆಯೇ ಇದೇ ಆದ್ದರಿಂದ ತಂಬಾಕು, ಗುಟ್ಕಾದಂತಹ ದುಶ್ಚಟಗಳಿಗೆ ಬಲಿಯಾಗದೇ ಉತ್ತಮವಾದ ಜೀವನ ಶೈಲಿಯನ್ನು ಆಯ್ಕೆ ಮಾಡಿಕೊಳ್ಳುವುದರ ಜತೆಗೆ ಮಾನವೀಯ ಮೌಲ್ಯಗಳನ್ನು ರೂಢಿಸಿಕೊಳ್ಳಬೇಕು. ಪೋಷಕರಿಗೆ ಮೋಸ ಮಾಡದೇ ಅವರಿಗೆ ಪ್ರೀತಿ ಪಾತ್ರರಾಗುವ ಮೂಲಕ ಸಮಾಜದಲ್ಲಿ ಉತ್ತಮ ನಾಗರೀಕರಾಗಿ ಬಾಳಬೇಕು ಎಂದು ಸಲಹೆ ನೀಡಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ಮಾತನಾಡಿ, ಸರ್ಕಾರವು ತಂಬಾಕು ಬಳಕೆ, ಸೇವನೆ ನಿಯಂತ್ರಿಸಲು ಕೋಟ್ಪಾ ಕಾಯ್ದೆಯಡಿ ಹಲವು ಕಾನೂನುಗಳನ್ನು ರೂಪಿಸಿದೆ. ಇದರ ಜತೆಗೆ ತಂಬಾಕು ನಿಯಂತ್ರಿಸುವಲ್ಲಿ ನಾಗರೀಕರಾಗಿ ನಮ್ಮ ಜವಾಬ್ದಾರಿಯೂ ಅಗತ್ಯವಾಗಿದೆ. ನಿಸರ್ಗದಲ್ಲಿ ಕಾನೂನು ಉಲ್ಲಂಘನೆ ಮಾಡಿದಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು. ವ್ಯವಹಾರಿಕ ದೃಷ್ಠಿಯಿಂದ ತಂಬಾಕು ಉತ್ಪನ್ನಗಳನ್ನು ಅತ್ಯಾಕರ್ಷಕವಾಗಿ ಸೇವನೆ ಮಾಡುವಂತೆ ಹಾಗೂ ಬಳಸುವಂತೆ ಪ್ರೇರೇಪಿಸಲಾಗುವುದು. ಅದಷ್ಟೇ ಅಲ್ಲದೇ ಸಮಾಜಕ್ಕೆ ಒಳ್ಳೆಯ ಸಂದೇಶ ನೀಡಬೇಕಾದ ಚಲನಚಿತ್ರ ನಟರು ಜಾಹೀರಾತುಗಳ ಮೂಲಕ ಯುವಕರನ್ನು ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಆದ್ದರಿಂದ ಯುವಕರು ಇದರಿಂದ ಪ್ರೇರೇಪಿತರಾಗದೇ ಇಂತಹ ಘಟನೆಗಳು ಸಾರ್ವಜನಿಕವಾಗಿ ಕಂಡುಬಂದಲ್ಲಿ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಅಧ್ಯಕ್ಷತೆ ವಹಿಸಿ ಮಾತನಾಡಿದ ಡಾ.ಶಶಿಕುಮಾರ್ ವಿ. ಮೆಹರ್ವಾಡೆ ಮಾತನಾಡಿ, ವೈದ್ಯವಿದ್ಯಾರ್ಥಿಗಳಾಗಿ ಭವಿಷ್ಯದಲ್ಲಿ ಸಾರ್ವಜನಿಕರಿಗೆ, ಅನಕ್ಷರಸ್ತ ನಾಗರೀಕರಿಗೆ ಸೂಕ್ತ ರೀತಿಯಲ್ಲಿ ಮಾರ್ಗದರ್ಶನ ನೀಡಬೇಕು. ಪ್ರಕೃತಿಯಲ್ಲಿ ಪ್ರಾಣಿ, ಪಕ್ಷಿಗಳಿಗೆ ಜ್ಞಾನವಿಲ್ಲದಿದ್ದರೂ, ತನಗೆ ಬೇಕಾದ ಆಹಾರವನ್ನಷ್ಟೇ ಸೇವಿಸುತ್ತದೆ. ಆದರೆ ಮನುಷ್ಯನಗೆ ಎಲ್ಲಾ ರೀತಿಯ ತಿಳುಳುಕೆ ಇದ್ದರೂ ಸಹ ಇಂತಹ ದುಶ್ಚಟಗಳಿಗೆ ಬಲಿಯಾಗುತ್ತಿರುವುದು ವಿಪರ್ಯಾಸ. ಇಂತಹ ದುಶ್ಚಟಗಳಿಂದ ದೂರವಿರುವ ಮೂಲಕ ನಮ್ಮ ಸುತ್ತಲಿನ ಸಮಾಜವನ್ನು ತಂಬಾಕು ಬಳಕೆ ಸೇವನೆಗಳಿಂದ ಮುಕ್ತಗೊಳಿಸುವ ಜವಾಬ್ದಾರಿ ನಮ್ಮ ಮೇಲಿದೆ ಎಂದರು.

ಇದೇ ಸಂದರ್ಭದಲ್ಲಿ ತಂಬಾಕು ನಿಯಂತ್ರಣ ಕುರಿತು ಭಿತ್ತಿಪತ್ರ ಬಿಡುಗಡೆಗೊಳಿಸಿದರು. ದ್ವಿತೀಯ ವರ್ಷದ ವಿದ್ಯಾರ್ಥಿಗಳಿಂದ ತಂಬಾಕು ನಿಯಂತ್ರಣ ಕುರಿತು ಕಿರು ನಾಟಕ ಪ್ರದರ್ಶಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಮಮತಾ ಹೊಸಗೌಡರ್, ತಂಬಾಕು ನಿಯಂತ್ರಣಕೋಶ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಜಿ.ಡಿ.ರಾಘವನ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಹಾಗೂ ತಂಬಾಕು ನಿಯಂತ್ರಣಕೋಶದ ಕಾರ್ಯದರ್ಶಿ ಡಾ. ಎಸ್.ಷಣ್ಮುಖಪ್ಪ, ತಪೋವನ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಮೆಡಿಕಲ್ ಕಾಲೇಜ್ ಮತ್ತು ಆಸ್ಪತ್ರೆಯ ಪ್ರಾಂಶುಪಾಲೆ ಡಾ.ಸುಮನಾ ಭಟ್ ಸೇರಿದಂತೆ ಕಾಲೇಜಿನ ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು.

## ಜಾಗೃತ ಮಹಿಳಾ ಸಂಘದಲ್ಲಿ ವಚನ ದಾಸೋಹ-ದತ್ತಿ ಉಪನ್ಯಾಸ

**ದಾವಣಗೆರೆ:** ಕದಳಿ ಮಹಿಳಾ ವೇದಿಕೆಯಿಂದ167ನೇ ಕದಳಿ ಕಮ್ಮಟ, ವಚನದಾಸೋಹ, ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ನಗರದ ಜಾಗೃತ ಮಹಿಳಾ ಸಂಘದ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.




ನಿವೃತ್ತ ಪ್ರಾಚಾರ್ಯೆ ಕಸ್ತೂರ ಬಾ ಸಮಾಜದ ಅಧ್ಯಕ್ಷೆ ಶಕುಂತಲಾ ಗುರುಸಿದ್ದಯ್ಯ ವಚನಗಳಲ್ಲಿ ಕೌಟುಂಬಿಕ ಸಾಮರಸ್ಯ ವಿಷಯ ಕುರಿತು ಮಾತನಾಡಿ, ಗತಕಾಲದ ಜೀವನಶೈಲಿಯಿಂದ ಇಂದಿನ ವೈಜ್ಞಾನಿಕ ಕಾಲದ ಜೀವನ ಶೈಲಿಯ ವರೆಗೂ ಅರ್ಥಸಹಿತ ನಡೆ-ನುಡಿಗಳು ಶರಣರ ವಚನಗಳಲ್ಲಿ ಒಳಗೊಂಡಿವೆ. ವಚನಗಳು ಬರಿ ಅಕ್ಷರವಾಗಿರದೇ ಜೀವನೋತ್ಸಾಹ ಒಳಗೊಂಡಿವೆ ಎಂದರು.

ಕದಳಿ ಮಹಿಳಾ ವೇದಿಕೆ ಜಿಲ್ಲಾಧ್ಯಕ್ಷೆ ಮಮತಾ ನಾಗರಾಜ ಅಧ್ಯಕ್ಷತೆ ವಹಿಸಿ ಮಾತನಾಡಿ, ವಚನಗಳು ಎಲ್ಲರ ಬಾಳಿಗೆ ಬೆಳಕಾಗಿವೆ. ಯಾವುದೇ ಸಮಸ್ಯೆಗೆ ವಚನಗಳಲ್ಲಿ ಪರಿಹಾರವಿದೆ. ಕದಳಿ ಮಹಿಳಾ ವೇದಿಕೆಯಿಂದ ಜಾಗೃತ ಮಹಿಳಾ ಸಂಘಕ್ಕೆ ಎಲ್ಲ ರೀತಿಯ ಸಹಕಾರ ನೀಡುವುದಾಗಿ ತಿಳಿಸಿದರು.

ದತ್ತಿ ದಾನಿಗಳಾದ ಶಾಂಭವಿ, ಕೆ.ಜಿ.ಸದಾಶಿವಪ್ಪ ಮತ್ತು ಸಹೋದರರು, ಜಾಗೃತ ಮಹಿಳಾ ಸಂಘದ ಅಧ್ಯಕ್ಷೆ ಶಾಂತಮ್ಮ ದಿಳ್ಳೆಪ್ಪ, ಕಾರ್ಯದರ್ಶಿ ಅಮೀನಾ ಬಾನು, ಸತ್ಯಭಾಮಾ ಮಂಜುನಾಥ್, ಕದಳಿ ಮಹಿಳಾ ವೇದಿಕೆಯ ತಾಲ್ಲೂಕು ಘಟಕದ ಅಧ್ಯಕ್ಷೆ ನಿರ್ಮಲಾ ಶಿವಕುಮಾರ, ಮಂಜುಳ ಚಂದ್ರಶೇಖರ, ರತ್ನರೆಡ್ಡಿ, ಪಲ್ಲವಿಪಾಟೀಲ್, ಕೆ.ಆರ್.ವಸಂತ, ಪೂರ್ಣಿಮ ಪ್ರಸನ್ನ, ವಿಜಯ ಚಂದ್ರಶೇಖರ, ಸೌಮ್ಯ ಸತೀಶ, ನಂದಿನಿ ಗಂಗಾಧರ ಇನ್ನಿತರರು ಭಾಗವಹಿಸಿದ್ದರು. ಇದೇ ವೇಳೆ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

## ಸರ್ಕಾರಿ ಶಾಲೆಗಳಿಗೆ ಮಕ್ಕಳ ದಾಖಲಾತಿ ಮಾಡಿ



**ಹಾಸನ :** ಪೋಷಕರುತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆದಾಖಲು ಮಾಡುವ ಮೂಲಕ ಸರ್ಕಾರಿ ಶಾಲೆಗಳನ್ನು ಉಳಿಸಲು ಸಹಕರಿಸುವಂತೆ ಶಾಸಕರಾದ ಸ್ವರೂಪ್ ಪ್ರಕಾಶ್‌ಅವರು ಮನವಿ ಮಾಡಿದ್ದಾರೆ.

ನಗರದ ವಾಣಿವಿಲಾಸ ಶಾಲೆಯಲ್ಲಿಂದು ಏರ್ಪಡಿಸಿದ್ದ ಶಾಲಾ ಪ್ರಾರಂಭೋತ್ಸವಕಾಯ ರ್ಕ್ರಮದಲ್ಲಿ ಭಾಗವಹಿಸಿ ಮಾತನಾಡಿದಅವರು ನಮ್ಮ ಸರ್ಕಾರಿ ಶಾಲೆಗಳು ಯಾವುದೇ ಖಾಸಗಿ ಶಾಲೆಗಳಿಗಿಂತ ಕಡಿಮೆಯಿಲ್ಲ ಶಿಕ್ಷಕರು ಮಕ್ಕಳ ದಾಖಲಾತಿಗಾಗಿ ಮನೆ ಮನೆಗೆ ಭೇಟಿ ನೀಡಿ ಸರ್ಕಾರಿ ಶಾಲೆಗಳ ಉಳುವಿಗೆ ಶ್ರಮ ವಹಿಸುತ್ತಿದ್ದಾರೆಎಂದು ತಿಳಿಸಿದರು.

ನಗರದ ಹೃದಯ ಭಾಗದಲ್ಲಿರುವ ಈ ಶಾಲೆ 125 ವರ್ಷಗಳನ್ನು ಪೂರೈಸಿದೆ. ಈ ಹಳೇಯ ಶಾಲೆಯನ್ನು ಉಳಿಸುವ ಜವಾಬ್ದಾರಿಎಲ್ಲರ ಮೇಲಿದೆಎಂದ ಶಾಸಕರು ಶಾಲೆಗಳ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿಗಾಗಿಅನುದಾನಒದಗಿಸಲು ಸರ್ಕಾರಕ್ಕೆ ಮನವಿ ಮಾಡುವುದಾಗಿ ತಿಳಿಸಿದರು.

ಪೂರ್ವಜರು ಶಾಲೆಗಳಿಗೆ ದಾನವಾಗಿ ನೀಡಿರುವ ಜಾಗಗಳು ಅತ್ಯಂತ ಬೆಲೆ ಬಾಳು ವುದರಿಂದ ಮೊಮ್ಮಕ್ಕಳು ಸದರಿ ಜಾಗಗಳನ್ನು ಮರುಪಡೆಯಲು ಪ್ರಯತ್ನಿಸುತ್ತಿದ್ದಾರೆ. ಶಾಲೆಗಳ ಹೆಸರಿಗೆಖಾತೆ ಮಾಡುವ ಮೂಲಕ ಆಸ್ತಿಯನ್ನು ಸಂರಕ್ಷಣೆ ಮಾಡಬೇಕು ಈ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ವಹಿಸುವಂತೆ ತಿಳಿಸಿದರು.

ಶಾಲಾ ಮಕ್ಕಳಿಗೆ ಗುಲಾಬಿ ಹೂ , ಶಾಲಾ ಸಮವಸ್ತ್ರ ಹಾಗೂ ಪಠ್ಯ ಪುಸ್ತಕಗಳನ್ನು ವಿತರಿಸಿ ಶುಭ ಹಾರೈಸಿದರು.

ಅಪರಜಿಲ್ಲಾಧಿಕಾರಿ ಕೆ.ಟಿ.ಶಾಂತಲಾಅವರು ಮಾತನಾಡಿ ಮಕ್ಕಳು ಓದಿನ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ತೊಡಗಿಸಿಕೊಳ್ಳಿ ಎಂದಅವರು ಶಾಲಾ ಅವಧಿಯನ್ನು ಖುಷಿಯಿಂದ ಅನುಭವಿಸಿ ಎಂದು ತಿಳಿಸಿದರು.

ವಿದ್ಯೆಯನ್ನುಕಲಿತು ಬುದ್ದಿವಂತರಾಗಿ, ಮಾನವೀಯ ಮೌಲ್ಯಗಳನ್ನು ಮೈಗೂಡಿಸಿ ಕೊಂಡುಉತ್ತಮ ಭವಿಷ್ಯ ರೂಪಿಸಿಕೊಳ್ಳುವುದರ ಜೊತೆಗೆಉತ್ತಮ ನಾಗರೀಕರಾಗಿಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದಚಂದ್ರಶೇಖರ್‌ಅವರು ಮಾತನಾಡಿ ಸರ್ಕಾರದಆದೇಶದಂತೆ 2025-26 ನೇ ಶೈಕ್ಷಣಿಕ ಸಾಲಿನ ಶಾಲಾ ಪ್ರಾರಂಭೋತ್ಸವವನ್ನುಇಂದುಜಿಲ್ಲಾದ್ಯಂತಎಲ್ಲಾ ಶಾಲೆಗಳಲ್ಲಿ ಆಚರಿಸಲಾಗುತ್ತದೆಎಂದು ತಿಳಿಸಿದರು.

ಸರ್ಕಾರಿ ಶಾಲೆಗಳಿಗೆ ಮಕ್ಕಳ ದಾಖಲಾತಿಗಾಗಿಆಂದೋಲನ ನಡೆಸಲಾಗುತ್ತಿದೆ. ಸರ್ಕಾರ ಬಜೆಟ್ ನಲ್ಲಿ ಶಿಕ್ಷಣಕ್ಕೆ 43 ಸಾವಿರಕೋಟಿ ರೂಗಳನ್ನು ಮೀಸಲಿಟ್ಟು, ಕಲಿಕೆ ಸರ್ಕಾರಿ ಶಾಲೆಗಳಿಗೆ ಮಕ್ಕಳ ದಾಖಲಾತಿಗಾಗಿಆಂದೋಲನ ನಡೆಸಲಾಗುತ್ತಿದೆ. ಸರ್ಕಾರ ಬಜೆಟ್ ನಲ್ಲಿ ಶಿಕ್ಷಣಕ್ಕೆ 43 ಸಾವಿರಕೋಟಿ ರೂಗಳನ್ನು ಮೀಸಲಿಟ್ಟು, ಕಲಿಕೆ ಉತ್ತಮಪಡಿಸಲು ವಿವಿಧ ಚಟುವಟಿಕೆಗಳನ್ನು ನಡೆಸುತ್ತದೆಎಂದು ತಿಳಿಸಿದರು.

ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆಇದಕ್ಕೆಉದಾಹರಣೆ 48 ಸರ್ಕಾರಿ ಶಾಲೆಗಳು ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಶೇ.100 ರಷ್ಟು ಫಲಿತಾಂಶ ಪಡೆದಿವೆ. ಪೋಷಕರುತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲು ಮಾಡಿ ಶೈಕ್ಷಣಿಕಅಭಿವೃದ್ಧಿಗೆ ಕೈಜೋಡಿಸಿ ಎಂದು ಮನವಿ ಮಾಡಿದರು.

ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಕಡ್ಡಾಯ ಶಿಕ್ಷಣ ನೀಡುವಉಚಿತ ಸಮವಸ್ತ್ರ, ಪಠ್ಯ ಪುಸ್ತಕ ಹಾಗೂ ಬಿಸಿಯೂಟ ನೀಡಲಾಗುತ್ತದೆ. ಶಿಕ್ಷಕರಿಂದ ಗುಣಮಟ್ಟದಬೋಧನೆ ನೀಡಲಾಗುತ್ತದೆ ಪೋಷಕರಿಗೆತಮ್ಮ ಮಕ್ಕಳ ಕಲಿಕೆ ಬಗ್ಗೆ ಗ್ಯಾರಂಟಿ ನೀಡಲಾಗುವುದುತಾವು ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸಿ ಸಹಕರಿಸುವಂತೆಕೋರಿದರು.

ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೃಷ್ಣ ಮೂರ್ತಿಅವರು ಮಾತನಾಡಿ ಪ್ರಾಥಮಿಕ ಹಂತದಿಂದಲೆ ಮಕ್ಕಳು ಕಲಿಕೆಗೆ ಹೆಚ್ಚಿನ ಆಸಕ್ತಿ ವಹಿಸಬೇಕು. ತಮ್ಮ ಶೈಕ್ಷಣಿಕಉಜ್ವಲ ಭವಿಷ್ಯಕ್ಕೆ ಹೊಸ ಹೊಸ ಕನಸುಗಳನ್ನು ಕಾಣುವುದರ ಮೂಲಕ ಸಾಕಾರಗೊಳಿಸಿಕೊಳ್ಳುವಂತೆ ತಿಳಿಸಿದರು.

ಶಿಕ್ಷಕರು ಮಕ್ಕಳಲ್ಲಿರುವ ಪ್ರತಿಭೆ ಗುರುತಿಸಿ ಉತ್ತೇಜನ ನೀಡಿ ಬೆಳೆಯಲು ಅವಕಾಶ ಕಲ್ಪಿಸಿ ಎಂದು ತಿಳಿಸಿದರು.ಕ್ಷೇತ್ರ ಶಿಕ್ಷಣಾಧಿಕಾರಿ ಮಂಜುಳಾ ಅವರು ಪ್ರಾಸ್ತಾವಿಕವಾಗಿ ಮಾತನಾಡಿತಾಲೂಕಿನಎಲ್ಲಾ ಶಾಲೆಗಳಲ್ಲಿ ಇಂದು ಮಕ್ಕಳನ್ನು ಸಂತೋಷದಿಂದ ಶಾಲೆಗೆ ಬರ ಮಾಡಿಕೊಳ್ಳಲಾಗುತ್ತಿದೆ ಮಕ್ಕಳಿಗೆ ಉಚಿತ ಸಮವಸ್ತ್ರ, ಪಠ್ಯ ಪುಸ್ತಕ, ಬಿಸಿಯೂಟ ಜೊತೆಗೆ ವಾರದಲ್ಲಿ 6 ದಿನ ಮೊಟ್ಟೆ ನೀಡಲಾಗುವುದು ಎಂದು ತಿಳಿಸಿದರು.ಮಹೇಶ್, ಜಿಲ್ಲಾ ನೌಕರರ ಸಂಘದ ಪದಾಧಿಕಾರಿಗಳಾದ ರವೀಂದ್ರ, ಅಕ್ಷರದಾಸೋಹಅಧಿಕಾರಿ ಮಂಜು ನಾಯಕ್, ಶಾಲಾ ಅಭಿವೃದ್ಧಿ ಸಮಿತಿಅಧ್ಯಕ್ಷೆ ಮತ್ತಿತರರು ಉಪಸ್ಥಿತರಿದ್ದರು.

## ಕೀರ್ತಿಶೇಷ ಡಾ. ಹೆಚ್.ಎಸ್. ವೆಂಕಟೇಶಮೂರ್ತಿ ಯವರಿಗೆ ಕಲಾಕುಂಚದಿಂದ ಶ್ರದ್ಧಾಂಜಲಿ

**ದಾವಣಗೆರೆ:** ನಾಡಿನ ಸುಪ್ರಸಿದ್ಧ ಸಾಹಿತ್ಯದ ವಿದ್ವಾಂಸ ಡಾ. ಹೆಚ್. ಎಸ್. ವೆಂಕಟೇಶಮೂರ್ತಿಯವರು ಇತ್ತಿಚಿಗೆ ಸ್ವರ್ಗಸ್ಥರಾಗಿದ್ದು ಕನ್ನಡ ನಾಡಿಗೆ ವಿಷಾದದ ಸಂಗತಿ. ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಕನ್ನಡ ಮಕ್ಕಳ ಕಾರ್ಯಕ್ರಮಕ್ಕೆ ಆಗಮಿಸಿ ಸಂಸ್ಥೆಯ ಈ ಕಾರ್ಯಕ್ರಮ ಉದ್ಘಾಟಿಸಿ ಕರ್ನಾಟಕ ಸರ್ಕಾರ, ಕನ್ನಡ ಸಂಸ್ಕೃತಿ ಇಲಾಖೆ, ಶಿಕ್ಷಣ ಇಲಾಖೆ ಮಾಡದೇ ಇರುವಂತಹ ಈ ಕನ್ನಡ ಮಕ್ಕಳ ಕಾರ್ಯಕ್ರಮ ದಾವಣಗೆರೆಯ ಕಲಾಕುಂಚ ವಿಜೃಂಭಣೆಯಿಂದ ಮಾಡುತ್ತಿರುವುದು ಶ್ಲಾಘನೀಯ ಎಂದು ತಮ್ಮ ಮನದಾಳದ ಮಾತು ವ್ಯಕ್ತಪಡಿಸಿದರು. ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್‌ಶೆಣೈ ಸೇರಿದಂತೆ ಸಂಸ್ಥೆಯ ಪದಾಧಿಕಾರಿಗಳು, ಸರ್ವ ಸದಸ್ಯರು ಶ್ರದ್ಧಾಂಜಲಿ ಅರ್ಪಿಸಿದರು.

## ಅರ್ಜಿ ಆಹ್ವಾನ

**ಶಿವಮೊಗ್ಗ:** ರೈಲ್ವೇ ಇಲಾಖೆಯು ಸೆಕ್ಯೂರಿಟಿ ಹುದ್ದೆಗಳಿಗೆ ಗುತ್ತಿಗೆ ಆಧಾರದಲ್ಲಿ ಮಾಜಿ ಸೈನಿಕರುಗಳನ್ನು ಭರ್ತಿ ಮಾಡಿಕೊಳ್ಳುತ್ತಿದ್ದು, ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಯ ಆಸಕ್ತ ಮಾಜಿ ಸೈನಿಕರುಗಳಿಂದ ಅರ್ಜಿ ಆಹ್ವಾನಿಸಿದ್ದು, ಈವರೆಗೆ 48 ಮಾಜಿ ಸೈನಿಕರು ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿದ್ದು, ನೋಂದಾಯಿತರ ಪಟ್ಟಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಹಾಕಲಾಗಿದೆ.ಈ ಪಟ್ಟಿಗೆ ಆಕ್ಷೇಪಣೆಗಳೇನಾದರೂ ಇದ್ದರೆ ಮೇ 30 ಒಳಗೆ ಈ ಕಛೇರಿಯಲ್ಲಿ ಸಲ್ಲಿಸಬಹುದಾಗಿದೆಯೆಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಹೊಸಕುಂದವಾಡದ ಸರ್ಕಾರಿ ಶಾಲೆಯಲ್ಲಿ ಮಕ್ಕಳಿಗೆ ಗೌರವ ಪೂರ್ವಕ ಸ್ವಾಗತ




**ದಾವಣಗೆರೆ :** ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕೇಂದ್ರ ದಾವಣಗೆರೆ ದಕ್ಷಿಣ ವಲಯ ಹಾಗೂ ಹೊಸಕುಂದವಾಡದ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಸಂಯುಕ್ತಾಶ್ರಯದಲ್ಲಿ ಹೊಸ ಕುಂದವಾಡದ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳನ್ನು ಗೌರವ ಪೂರ್ವಕವಾಗಿ ಸಂಭ್ರಮದಿಂದ ಬರಮಾಡಿಕೊಳ್ಳಲಾಯಿತು.

ಎರಡು ವರ್ಷ ಶಿಕ್ಷಣದಲ್ಲಿ ಹರುಷ 2025-26 ಎಂಬ ಶೀರ್ಷಿಕೆಯಡಿ ರಾಜ್ಯದಲ್ಲಿ ಶಾಲಾ ಪ್ರಾರಂಭೋತ್ಸವಗೊಂಡಿದ್ದು, ದಾಖಲಾತಿ ಆಂದೋಲನವನ್ನೂ ನಡೆಸಲಾಗುತ್ತಿದೆ.

ಅಂತೆಯೇ ಈ ಹಿನ್ನೆಲೆಯಲ್ಲಿ ಹೊಸ ಕುಂದವಾಡದ ಈ ಸರ್ಕಾರಿ ಶಾಲೆಯಲ್ಲಿ ಮಕ್ಕಳಿಗೆ ಗುಲಾಬಿ ಹೂವು ನೀಡಿ ಗೌರವ ಪೂರ್ವಕವಾಗಿ ಸ್ವಾಗತಿಸಲಾಯಿತು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರು, ಸಿಬ್ಬಂದಿ ವರ್ಗ, ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಪದಾಧಿಕಾರಿಗಳು, ಗ್ರಾಮದ ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ವಿದ್ಯಾರ್ಥಿನಿಲಯಕ್ಕೆ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ಪ್ರವೇಶ ಬಯಸುವ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಹಾಗೂ ಪ್ರವರ್ಗ-1, 2ಎ, 2ಬಿ, 3ಬಿ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಆನ್ ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಪಿ.ಯು.ಸಿ ಮತ್ತು ಪಿ.ಯು.ಸಿ ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ಪಡೆಯಬಹುದು. https://swd.karnataka.gov.in/ ಆನ್ ಲೈನ್‌ನಲ್ಲಿ ಆಗಸ್ಟ್ 31 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂಖ್ಯೆ: 9482300400 ಸಂಪರ್ಕಿಸಬಹುದೆಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# 'ಸುಮಾ ದಿ ಫ್ಲವರ್' ಚಿತ್ರಕ್ಕೆ ಫಾಲ್ಕೆ ಪ್ರಶಸ್ತಿಯ ಗರಿ

**ಬೆಂಗಳೂರು :** ರಶ್ಮಿ ಎಸ್ (ಸಾಯಿ ರಶ್ಮಿ) ನಿರ್ದೇಶನದ 'ಸುಮಾ ದಿ ಫ್ಲವರ್' ಚಿತ್ರಕ್ಕೆ ಮುಂಬೈನಲ್ಲಿ ನಡೆದ ಪ್ರತಿಷ್ಠಿತ "ದಾದಾ ಸಾಹೇಬ್ ಫಾಲ್ಕೆ ಫಿಲಂ ಪುರಸ್ಕಾರ್ ಆಫ್ ಇಂಡಿಯಾ" ದಲ್ಲಿ ಪ್ರಶಸ್ತಿ ಲಭಿಸಿದೆ.

ಮಹಿಳಾ ಕಥಾಹಂದರ ಹೊಂದಿದ್ದು ನಮ್ಮ ನಡುವೆ ಇರುವ ಹುಡುಗಿಯೊಬ್ಬಳ ಅಂತರಂಗದ ಕಥೆಯಾಗಿದ್ದು, ಅತೀ ಸೂಕ್ಷ್ಮ ವಿಷಯವನ್ನು ಈ ಚಿತ್ರವು ಒಳಗೊಂಡಿದೆ. ಪ್ರತಿಯೊಬ್ಬ ಭಾರತೀಯ ಮಹಿಳೆಯರು ತಪ್ಪದೇ ನೋಡಲೇ ಬೇಕಾದ ಚಿತ್ರ ಇದಾಗಿದೆ. ಈಗಾಗಲೇ ಹಲವು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಗಳಲ್ಲಿ ಭಾಗವಹಿಸಿ ಅನೇಕ ಪ್ರಶಸ್ತಿಗಳನ್ನು ತನ್ನದಾಗಿಸಿಕೊಂಡಿದೆ.

ಯುವ ಮಹಿಳಾ ನಿರ್ದೇಶಕಿಯಾಗಿ ಕನ್ನಡ ಚಿತ್ರರಂಗದಲ್ಲಿ ಗುರುತಿಸಿಕೊಂಡಿರುವ ರಶ್ಮಿ ಎಸ್ (ಸಾಯಿ ರಶ್ಮಿ) ಅವರು ಈ ಹಿಂದೆ ಶ್ರೀ ಕಬ್ಬಾಳಮ್ಮನ ಮಹಿಮೆ, ಮನೆ, ಬ್ಯಾಂಕ್‌ಲೋನ್, ಸುಳಿ ಎಂಬ



ವಿಭಿನ್ನ ಕಥೆಯನ್ನು ಸಿನಿಮಾಗಳ ನಂತರ 'ಸುಮಾ ದಿ ಫ್ಲವರ್' ಚಿತ್ರಕ್ಕೆ ಕಥೆ ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನವನ್ನು ಮಾಡಿದ್ದಾರೆ.

ಮುಖ್ಯ ಪಾತ್ರದಲ್ಲಿ ಮಾನ್ಯತಾ ನಾಯ್ಡು, ಪ್ರದೀಪ್ ಗೌಡ, ಅಭಿನಯಿಸಿದ್ದು ಉಳಿದಂತೆ ಜೋ ಸೈಮನ್, ಬಲರಾಜವಾಡಿ, ವಿಜಯಲಕ್ಷ್ಮಿ ಉಪಾಧ್ಯಾಯ, ಕಾವ್ಯ ಪ್ರಕಾಶ್, ಪವಿತ್ರ, ಮುರಳೀಧರ್ ಡಿ ಆರ್, ಅವಿನಾಶ್ ಗಂಜಿಹಾಳ, ಸಿದ್ದು ಮಂಡ್ಯ, ಭೈರವಿ, ಹರಿಹರನ್ ಬಿ ಪಿ, ಶಿವಕುಮಾರ್ ಆರಾಧ್ಯ, ವಿಶೇಷ ಪಾತ್ರದಲ್ಲಿ ಡಾ.ವಿ ನಾಗೇಂದ್ರಪ್ರಸಾದ್ ಅಭಿನಯಿಸಿದ್ದಾರೆ. ದೇವೂ ಮತ್ತು ಗಗನ್ ಆರ್ ಛಾಯಾಗ್ರಾಹಣವಿದೆ. ವೇದಾಂತ್ ಅತಿಶಯ್ ಜೈನ ಸಂಗೀತ ಮತ್ತು ಹಿನ್ನೆಲೆ ಸಂಗೀತ, ಯೋಗಶ್ರೀ ಹಿನ್ನೆಲೆ ಗಾಯನ, ಮುತ್ತು ರಾಜು.ಟಿ ಸಂಕಲನ, ಕಾರ್ತಿಕ್ ಸುಧನ್, ಡಾ ಪ್ರಭು ಗಂಜಿಹಾಳ , ಡಾ ವೀರೇಶ್ ಹಂಡಿಗಿ ಪತ್ರಿಕಾ ಸಂಪರ್ಕ ಚಿತ್ರಕ್ಕಿದ್ದು, ಓಂ ಸಾಯಿ ಸಿನಿಮಾಸ್ ಸಂಸ್ಥೆಯ ಜೊತೆಗೆ ರಂಗಸ್ವಾಮಿ ಟಿ (ರವಿ) ಅವರು ಸಹ ನಿರ್ಮಾಪಕರಾಗಿದ್ದಾರೆ. ಪ್ರಶಸ್ತಿಯ ಖುಷಿಯಲ್ಲಿರುವ ರಶ್ಮಿ ಎಸ್ ಮತ್ತೊಂದು ಹೊಸ ಚಿತ್ರವನ್ನು ಸಧ್ಯದಲ್ಲೇ ನಿರ್ದೇಸಿಸಲು ಅಣಿಯಾಗಿದ್ದಾರೆ.

# ಸಾಹಿತ್ಯ ಪರಿಷತ್ತು ಸೃಜನಶೀಲ ಚಿಂತನೆಗೆ ವೈಚಾರಿಕ ಚರ್ಚೆಗೆ ವೇದಿಕೆಯಾಗಬೇಕು–ಮಧು ಬಂಗಾರಪ್ಪ

**ಶಿವಮೊಗ್ಗ : ಮೇ 28 :** ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲೆಯಲ್ಲಿನ ಸಾಹಿತ್ಯಾಸಕ್ತ ಮನಸ್ಸುಗಳಿಗೆ, ಅವರ ಸೃಜನಶೀಲ ಚಿಂತನೆಗೆ, ವೈಚಾರಿಕ ಚರ್ಚೆಗೆ ವೇದಿಕೆ ಕಲ್ಪಿಸುವಂತಾಗಬೇಕು ಎಂದು ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧು ಬಂಗಾರಪ್ಪ ಅವರು ಹೇಳಿದರು.

ಅವರು ಇಂದು ಕನ್ನಡ ಸಾಹಿತ್ಯ ಪರಿಷತ್ತು ಚಾಲುಕ್ಯ ನಗರದ ಸಾಹಿತ್ಯ ಗ್ರಾಮದಲ್ಲಿ ಸಾಹಿತ್ಯ ಪ್ರೇಮಿ ಹಾಗೂ ಮಾಜಿ ಮುಖ್ಯಮಂತ್ರಿ ಎಸ್. ಬಂಗಾರಪ್ಪ ಅವರ ಸ್ಮರಣಾರ್ಥ ಆರಂಭಿಸಲಾದ ನೂತನ ಗ್ರಂಥಾಲಯವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಈ ಗ್ರಂಥಾಲಯದ ಚಟುವಟಿಕೆಗೆ ವೈಯಕ್ತಿಕವಾಗಿ ತಮ್ಮ ವೇತನದಿಂದ ಈಗಾಗಲೇ ಐದು ಲಕ್ಷ ರೂಪಾಯಿಗಳನ್ನು ನೀಡಿರುವುದಾಗಿ ತಿಳಿಸಿದ ಅವರು ಪರಿಷತ್ ಕಟ್ಟಡದ ಮುಂದುವರೆದ ಕಾಮಗಾರಿಗಳಿಗೆ ಅಗತ್ಯವಿರುವ ಎರಡೂವರೆ ಕೋಟಿ ರೂಪಾಯಿಗಳನ್ನು ನೀಡುವಂತೆ ನಾಳೆ



ಮಾನ್ಯ ಮುಖ್ಯಮಂತ್ರಿಗಳಲ್ಲಿ ಕೋರಲಾಗುವುದು ಎಂದರು.

ಅತ್ಯಪರೂಪದ ಸಾಹಿತ್ಯ ಗ್ರಾಮದ ಪರಿಕಲ್ಪನೆಯೊಂದಿಗೆ ನಿರ್ಮಾಣಗೊಂಡ ರಾಜ್ಯದ ಮೊದಲ ಪರಿಷತ್ ಕಟ್ಟಡ ಇದಾಗಿದ್ದು, ಇದನ್ನು ಇನ್ನಷ್ಟು ಮಾದರಿಯಾಗಿ ನಿರ್ಮಿಸುವ ಅಗತ್ಯವಿದೆ. ಅಲ್ಲದೆ ಸಾಹಿತ್ಯಗ್ರಾಮ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲೂ ಆರಂಭಿಸಬೇಕಾದ ಅಗತ್ಯವಿದೆ ಎಂದರು.

ನಾಡಿನ ಭವ್ಯ ಸಂಸ್ಕೃತಿ ಮತ್ತು ಪರಂಪರೆಯ ಮುಂದುವರಿಕೆಗೆ ಸಾಹಿತ್ಯಸಕ್ತ ಯುವ ಮನಸುಗಳು ಅಗತ್ಯ. ಯುವ ಚಿಂತಕರನ್ನು ಒಂದೆಡೆ ಕೂಡುವ ಕೂಟಗಳು ನಿರ್ಮಾಣಗೊಳ್ಳಬೇಕು. ಪಠ್ಯಕ್ರಮ ರಚಿಸುವಲ್ಲಿಯೂ ಸಮಾಜಮುಖಿ ಚಿಂತಕರ ಅಗತ್ಯವಿದೆ. ಹೊಸ ತಲೆಮಾರಿನ ಹಾಗೂ ಉದಯೋನ್ಮುಖ ಬರಹಗಾರರಿಗೆ ಅಗತ್ಯ ಸೌಲಭ್ಯ, ವೇದಿಕೆಗಳನ್ನು ಒದಗಿಸಿಕೊಡುವಂತಾಗಬೇಕು ಎಂದವರು ಆಶಿಸಿದರು.

ಪ್ರಸಕ್ತ ಸಾಹಿತ್ಯ ಗ್ರಾಮಕ್ಕೆ ಕುವೆಂಪು ಸಾಹಿತ್ಯ ಗ್ರಾಮ ಎಂದು ಮರುನಾಮಕರಣ ಮಾಡಿದಲ್ಲಿ ಅದರ ಮಹತ್ವ ಮತ್ತು ಖ್ಯಾತಿ ಹೆಚ್ಚಲಿದೆ. ಈ ಬಗ್ಗೆ ಪರಿಷತ್ ಸದಸ್ಯರು ಪರಿಶೀಲಿಸಿ ಎಂದರು.ಮಹಾತ್ಮ ಗಾಂಧೀಜಿ ಅವರು ರಾಜ್ಯಕ್ಕೆ ಭೇಟಿ ನೀಡಿ ಅಧಿವೇಶನ ನಡೆಸಿದ ಸವಿನೆನಪಿಗಾಗಿ 2024ರ ಅಕ್ಟೋಬರ್ 02 ರಿಂದ 2025ರ ಅಕ್ಟೋಬರ್ 02 ರವರೆಗೆ ಸರ್ಕಾರದ ವತಿಯಿಂದ ಶತಮಾನೋತ್ಸವ ಸಂಭ್ರಮ ಆಚರಿಸಲಾಗುತ್ತಿದೆ ಎಂದರು.

ಕಾರ್ಯಕ್ರದಲ್ಲಿ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಡಿ. ಮಂಜುನಾಥ್ ಅವರು ಮಾತನಾಡಿ, ಪ್ರೋ. ನಿಸಾರ್ ಅಹ್ಮದ್ ಅವರ ಅಧ್ಯಕ್ಷತೆಯಲ್ಲಿ ಶಿವಮೊಗ್ಗದಲ್ಲಿ ನಡೆದ ಸಾಹಿತ್ಯ ಸಮ್ಮೇಳನದ ಸವಿನೆನಪಿಗಾಗಿ ವಿಶಾಲ ಪ್ರದೇಶದಲ್ಲಿ ಸಾಹಿತ್ಯ ಗ್ರಾಮ ನಿರ್ಮಾಣಗೊಂಡಿದ್ದು, ಹಲವಾರು ಸಾಹಿತ್ಯಾತ್ಮಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಇಲ್ಲಿನ ಗ್ರಂಥಾಲಯ ಅಧ್ಯಯನಶೀಲರಿಗೆ, ಸಂಶೋಧನಾರ್ಥಿಗಳಿಗೆ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಭಾಗವಹಿಸುವವರಿಗೆ ಅತ್ಯುಪಯುಕ್ತ ಗ್ರಂಥಾಲಯ ನಿರ್ಮಿಸುವ ಉದ್ದೇಶ ಹೊಂದಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ರಾಜ್ಯ ಭೋವಿ ನಿಗಮದ ಅಧ್ಯಕ್ಷ ರವಿಕುಮಾರ್, ಅಲೆಮಾರಿ ಅಭಿವೃದ್ಧಿ ನಿಗಮದ ರಾಜ್ಯ ಅಧ್ಯಕ್ಷೆ ಶ್ರೀಮತಿ ಪಲ್ಲವಿ, ಡಾ. ವಿಜಯಾದೇವಿ, ಹೆಚ್. ಎಸ್. ರಘು, ಕೆ. ಎಸ್. ಹುಚ್ಚಾಯಪ್ಪ ಸೇರಿದಂತೆ ಕನ್ನಡ ಸಾಹಿತ್ಯ ಪರಿಷತ್ತಿನ ಎಲ್ಲಾ ತಾಲೂಕುಗಳ ಅಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಮಕ್ಕಳ ಬೆಳವಣಿಗೆಗೆ ಬೇಸಿಗೆ ಶಿಬಿರಗಳು ಸಹಕಾರಿ: ನ್ಯಾ. ಎಂ.ಎಸ್.ಸಂತೋಷ್

**ಶಿವಮೊಗ್ಗ :** ಮಕ್ಕಳು ತಮ್ಮ ಬೆಳವಣಿಗೆಗೆ ಪೂರಕವಾದ ಹೊಸ ವಿಷಯಗಳನ್ನು ತಿಳಿದುಕೊಳ್ಳುವುದು ಅತಿ ಅಗತ್ಯವಾಗಿದ್ದು, ಮಕ್ಕಳ ಬೆಳವಣಿಗೆಗೆ ಇಂತಹ ಬೇಸಿಗೆ ಶಿಬಿರಗಳು ಸಹಕಾರಿಯಾಗಲಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಂ.ಎಸ್.ಸಂತೋಷ್ ಹೇಳಿದರು.

ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲಭವನ ಸಮಿತಿ ಇವರ ಸಹಯೋಗದಲ್ಲಿ ಕಾಶಿಪುರದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ 5 ರಿಂದ 16 ವರ್ಷದೊಳಗಿನ ಮಕ್ಕಳಿಗೆ ಆಯೋಜಿಸಿದ್ದ ಉಚಿತ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭವನ್ನು ಸೋಮವಾರ ಸರ್ಕಾರಿ ವೀಕ್ಷಣಾಲಯದಲ್ಲಿ ಚಂಡೆ ಬಾರಿಸುವ ಹಾಗೂ ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು

ಮಕ್ಕಳು ತಮ್ಮ ದಿನಚರಿಯನ್ನು ಸರಿಯಾದ ಕ್ರಮದಲ್ಲಿ ನಿಭಾಯಿಸಬೇಕು. ಅದನ್ನು ಬದುಕಿಗೆ ಸೂತ್ರದಂತೆ ಅವಳಡಿಸಿಕೊಳ್ಳಬೇಕು. ಆಗ ಮಾತ್ರ ಬದುಕಿನಲ್ಲಿ ಉನ್ನತ ಮಟ್ಟಕ್ಕೆ ಹೋಗಲು ಸಾಧ್ಯ. ಎ.ಪಿ.ಜೆ ಅಬ್ದುಲ್ ಕಲಾಂ ಅವರನ್ನು ಮಾದರಿಯಾಗಿ ತೆಗೆದುಕೊಳ್ಳಬೇಕು. ಅವರಂತೆ ನೀವೆಲ್ಲಾ ಉತ್ತುಂಗಕ್ಕೆ ಏರಬೇಕು ಎಂದರು.

ಜಿ.ಪಂ. ಉಪ ಕಾರ್ಯದರ್ಶಿಯಾದ ಶ್ರೀಮತಿ ಸುಜಾತ ಮಾತನಾಡಿ, ಮಕ್ಕಳ ಮನೋವಿಕಾಸಕ್ಕೆ ಬೇಸಿಗೆ ಶಿಬಿರ ಅತ್ಯಗತ್ಯ. ಮೊದಲೆಲ್ಲಾ ಬೇಸಿಗೆ ರಜೆ ಬಂದ ಕೂಡಲೇ ಅಜ್ಜಿ ಮನೆಗೆ ಹೋಗಿ ಅಲ್ಲಿನ ವಾತಾರಣದಲ್ಲಿದ್ದು, ಅಲ್ಲಿನ ದೇಸಿ ಆಟಗಳನ್ನು ಆಡುತ್ತಾ ಕಾಲ ಕಳೆಯುತ್ತಿದ್ದೆವು. ಆದರೆ ಇಂದಿನ ಮಕ್ಕಳು ಹೆಚ್ಚಾಗಿ ಮೊಬೈಲ್, ಟಿವಿಯ ಬಳಕೆಯಲ್ಲೆ ಮುಳುಗಿ ಹೋಗಿದ್ದಾರೆ. ಇದರಿಂದ ಸರಿಯಾಗಿ ಊಟ ಮತ್ತು ನಿದ್ರೆ ಮಾಡುವುದಿಲ್ಲ. ಮಕ್ಕಳಿಗೆ ಮಾನಸಿಕ ಸಮಸ್ಯೆಗಳು ಉಂಟಾಗುತ್ತಿವೆ



ಎಂದರು.

ಬೇಸಿಗೆ ಶಿಬಿರದಲ್ಲಿ ಯೋಗ, ಧ್ಯಾನ, ಶ್ಲೋಕ, ಚಿತ್ರಕಲೆ, ಕರಕುಶಲತೆ, ಸಮೂಹ ನೃತ್ಯ, ಸಂಗೀತ, ರಂಗಕಲೆ, ಅಬಾಕಸ್‌ನಂತಹ ಸಕಾರಾತ್ಮಕ ಕಲಿಕೆಗಳು ಒಳಗೊಂಡಿದ್ದು, ಮಕ್ಕಳು ಇದರಲ್ಲಿ ಭಾಗವಹಿಸುವುದರಿಂದ ಮನೋವಿಕಾಸಕ್ಕೆ ಸಹಕಾರಿಯಾಗುತ್ತದೆ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಬಿ.ಹೆಚ್. ಕೃಷ್ಣಪ್ಪ ಮಾತನಾಡಿ, ಬೇಸಿಗೆ ಶಿಬಿರದಲ್ಲಿ ಮಕ್ಕಳಿಗೆ ಉಪಯೋಗವಾಗುವಂತಹ ಐದು ಚಟುವಟಿಕೆಗಳನ್ನು 15 ದಿನಗಳ ಕಾಲ ನಡೆಸಲಾಯಿತು. ಶಿಬಿರದಲ್ಲಿ 108 ಮಕ್ಕಳು ನೋಂದಣಿಯಾಗಿದ್ದು, ಚಿತ್ರಕಲೆ, ಕರಕುಶಲತೆ, ಸಮೂಹ ನೃತ್ಯ, ಸಂಗೀತ, ರಂಗ ಕಲೆ, ಫೈನ್ ಮೋಟಾರ್ ಮುಂತಾದ ವಿಷಯಗಳಿಗೆ ಸಂಬಂಧಿಸಿದಂತೆ ವಿವಿಧ ರೀತಿಯ ಚಟುವಟಿಕೆಗಳನ್ನು ಆಯೋಜಿಸಲಾಗಿತ್ತು. ಸರ್ಕಾರಿ ಶಾಲೆಯ ಮಕ್ಕಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ರಾಜ್ಯ ಬಾಲಭವನ ಸೊಸೈಟಿ ಬೆಂಗಳೂರು ವತಿಯಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು, ಆ ಮೂಲಕ ಎಲ್ಲಾ ಮಕ್ಕಳಿಗೆ ಇದರ ಸದುಪಯೋಗ ಮಾಡಿಕೊಳ್ಳಲು ಸಹಾಯಕವಾಯಿತು ಎಂದರು.

ಜಿಲ್ಲಾ ಬಾಲ ಭವನ ಸಮಿತಿಯ ಕಾರ್ಯಕ್ರಮ ಸಂಯೋಜಕರಾದ ಆರ್. ಮಂಜುಳಾರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಸಂದರ್ಭದಲ್ಲಿ ಮಕ್ಕಳು "ಮೊಬೈಲ್ ಬಿಡಿ ಪುಸ್ತಕ ಹಿಡಿ" ಎನ್ನುವ ಕಿರು ನಾಟಕವನ್ನು ಪ್ರದರ್ಶಿಸಿದರು. ಶಿಬಿರದಲ್ಲಿ ಭಾಗವಹಿಸಿದ್ದ ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಹೆಚ್. ಉಮೇಶ್ , ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ರೇಖ್ಯಾನಾಯಕ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶಶಿರೇಖಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮೈತ್ರಿಕುಮಾರಿ, ಮುಖ್ಯೋಪಾಧ್ಯಾರಾದ ಹಾಲ ನಾಯಕ್, ಚಿತ್ರಕಲಾ ಹಾಗೂ ಕರಕುಶಲ ಕಲೆ ಶಿಕ್ಷಕ ಕೆ.ಎ.ವಿಶಾಲ್, ಸಂಗೀತ ಶಿಕ್ಷಕ ಅರುಣ್ ಎಸ್ ಘಾಟೆ, ನೃತ್ಯ ಶಿಕ್ಷಕಿ ಜೆ.ಕವಿತಾ ರಾಣಿ, ರಂಗಕಲೆ ಶಿಕ್ಷಕ ಯೋಗೇಶ್ ಹಾಜರಿದ್ದರು.

# ಸಿಎಂ ಸಿದ್ದರಾಮಯ್ಯ ನಡೆಗೆ ಪ್ರತಿಪಕ್ಷದ ನಾಯಕ ಅಶೋಕ್ ವ್ಯಂಗ್ಯ



**ಬೆಂಗಳೂರು :** ಭ್ರಷ್ಟಾಚಾರದ ಪಿತಾಮಹ ಎನಿಸಿಕೊಂಡಿರುವ ಕಾಂಗ್ರೆಸ್ ಪಕ್ಷದ ವಿರುದ್ಧ ಜೀವನವೆಲ್ಲಾ ಹೋರಾಟ ಮಾಡಿ, ನಂತರ ಅಧಿಕಾರಕ್ಕಾಗಿ ಅದೇ ಹುತ್ತದಲ್ಲಿ ಸೇರಿಕೊಂಡಿರುವ ಮಹಾನುಭಾವರು, ಭ್ರಷ್ಟಾಚಾರದ ಬಗ್ಗೆ ಮಾತನಾಡುವುದು ಈ ಶತಮಾನದ ಅತ್ಯಂತ ದೊಡ್ಡ ವಿಪರ್ಯಾಸ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಆಶೋಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಡೆಗೆ ವ್ಯಂಗ್ಯವಾಡಿದ್ದಾರೆ.

ಈ ಕುರಿತು ತಮ ಸಾಮಾಜಿಕ ಜಾಲ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಮೂಡಾದಲ್ಲಿ ಅಕ್ರಮವಾಗಿ ಕೋಟ್ಯಾಂತರ ರೂಪಾಯಿ ಬೆಲೆ ಬಾಳುವ 14 ಸೈಟು ಕಬಳಿಸಿ ಸಿಕ್ಕಿಬಿದ್ದಾಗ ವಾಪಸ್ಸುಕೊಟ್ಟ ಮಹಾನುಭಾವರು, ಮಹರ್ಷಿ ವಾಲೀಕಿ ಅಭಿವೃದ್ಧಿ ನಿಗಮದಲ್ಲಿ ನೂರಾರು ಕೋಟಿ ರೂ.ಅವ್ಯವಹಾರ ಆಗಿದೆ ಎಂದು ವಿಧಾನಸಭೆಯ ಅಧಿವೇಶನದಲ್ಲಿ ಸ್ವತಃ ಒಪ್ಪಿಕೊಂಡ ಮೇಲೂ ಅಧಿಕಾರದಲ್ಲಿ ಮುಂದುವರೆಯುತ್ತಿರುವ ಮಹಾನುಭಾವರು ಎಂದು ಕುಹಕವಾಡಿ ದ್ದಾರೆ.

ಸಿಎಂ ಸಿದ್ದರಾಮಯ್ಯನವರೇ, ತಮ ಆಡಳಿತದಲ್ಲಿ ಕರ್ನಾಟಕ ಭ್ರಷ್ಟಾಚಾರದಲ್ಲಿ ನಂಬರ್ 1 ಆಗಿದೆ ಎಂದು ನಾವಲ್ಲ, ಸ್ವತಃ ತಮ ಕಾಂಗ್ರೆ ಪಕ್ಷದ ಹಿರಿಯ ಶಾಸಕರು, ತಮ ಆರ್ಥಿಕ ಸಲಹೆಗಾರರೂ ಆದ ಬಸವರಾಜ ರಾಯರೆಡ್ಡಿ ಅವರು ತಮಗೆ ಸರ್ಟಿಫಿಕೇಟ್ ಕೊಟ್ಟಿದ್ದಾರೆ. ಅಂಗೈ ಹುಣ್ಣಿಗೆ ಕನ್ನಡಿ ಬೇಕೆ? ಎಂದು ಪ್ರಶ್ನೆ ಮಾಡಿದ್ದಾರೆ.

ಅದೆಲ್ಲ ಹೋಗಲಿ ಬಿಡಿ. 2013ರಲ್ಲಿ ತಾವು ಮೊದಲ ಬಾರಿಗೆ ಮುಖ್ಯಮಂತ್ರಿ ಆದಾಗ ಆಗಾಗಲೇ 6 ಬಾರಿ ಶಾಸಕರಾಗಿದ್ದ ಹಾಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ತಮ ಸಂಪುಟಕ್ಕೆ ಯಾಕೆ ಸೇರಿಸಿಕೊಳ್ಳಲಿಲ್ಲ ಡಿ.ಕೆ.ಶಿವಕುಮಾರ್ ಅವರು ಭ್ರಷ್ಟರು ಎಂಬ ಕಾರಣಕ್ಕೋ? ಎಂದು ಪ್ರಶ್ನಿಸಿರುವ ಅವರು, ಈ ಬಗ್ಗೆ ಸ್ಪಷ್ಟನೆ ನೀಡಿ ಎಂದು ಒತ್ತಾಯಿಸಿದ್ದಾರೆ.

# ಬೇಡ ಜಂಗಮ ಪ್ರಮಾಣ ಪತ್ರ ನೀಡಿಕೆಗೆ ವಿರೋಧ

**ದಾವಣಗೆರೆ :** ವೀರಶೈವ ಜಂಗಮರು ಬೇಡ ಜಂಗಮರೆಂದು ಪ್ರಮಾಣ ಪತ್ರ ಪಡೆಯುವುದನ್ನು ವಿರೋಧಿಸಿ, ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮಕ್ಕೆ ಆಗ್ರಹಿಸಿ ಎಸ್ಸಿ, ಎಸ್ಟಿ ವಕೀಲರು ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಇಂದು ಮನವಿ ಸಲ್ಲಿಸಿದರು.

ರಾಜ್ಯದಲ್ಲಿ ಒಳ ಮೀಸಲಾತಿ ಸಮೀಕ್ಷೆ ನಡೆ–ಯುತ್ತಿದ್ದು, ಇದೇ ಸಂದರ್ಭವನ್ನು ಉಪಯೋಗಿಸಿಕೊಂಡು ವೀರಶೈವ ಜಂಗಮರು ನಾವೇ ಬೇಡ ಜಂಗಮರೆಂದು ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರ್ಪಡೆಯಾಗುವ ಮೂಲಕ ಒಳ ಮೀಸಲಾತಿ ಕಬಳಿಸಲು ಯತ್ನಿಸುತ್ತಿದ್ದಾರೆಂದು ಪ್ರತಿಭಟನಾ ನಿರತ ಎಸ್ಸಿ, ಎಸ್ಟಿ ವಕೀಲರು ಆರೋಪಿಸಿದರು.

ಮೂಲತಃ ಬೇಡ ಜಂಗಮರು ಅಲೆಮಾರಿಗಳು, ಮಾಂಸಾಹಾರಿಗಳಾಗಿದ್ದು, ಜೀವನ ನಿರ್ವಹಣೆಗಾಗಿ ಊರೂರು, ನಗರ, ಪಟ್ಟಣಗಳಲ್ಲಿ ಭಿಕ್ಷಾಟನೆ ಮಾಡುವವರಾಗಿದ್ದಾರೆ. ಆಂಧ್ರಪ್ರದೇಶಕ್ಕೆ ಹೊಂದಿಕೊಂಡಂತಹ ಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ



ಇವರು ನೆಲೆಸಿದ್ದಾರೆ. ಇವರು ಮಾತ್ರ 101 ಪರಿಶಿಷ್ಟ ಜಾತಿ ಪಟ್ಟಿಯಲ್ಲಿದ್ದು, ಎಸ್ಸಿ ಮೀಸಲಾತಿ ಪಡೆಯಲು ಅರ್ಹರಿದ್ದಾರೆ. ಆದರೆ ಕರ್ನಾಟಕದ ವೀರಶೈವ ಜಂಗಮರು ಎಸ್ಸಿ ಮೀಸಲಾತಿ ಕಬಳಿಸಲು ಹೊರಟಿರುವುದು ಖಂಡನೀಯ ಎಂದು ಹೇಳಿದರು.

ನಮ್ಮಲ್ಲಿರುವ ವೀರಶೈವ–ಲಿಂಗಾಯತ ಜಂಗಮರು ಬೇಡ ಜಂಗಮರಲ್ಲ. ಶಾಲೆಗಳಲ್ಲೂ ಸಹ ಮಕ್ಕಳಿಗೆ ಬೇಡ ಜಂಗಮರೆಂದು ದಾಖಲೆಗಳಲ್ಲಿ ಸೇರ್ಪಡೆ ಮಾಡುತ್ತಿರುವುದು ಗಮನಕ್ಕೆ ಬಂದಿದ್ದು, ಸರ್ಕಾರ ಈ ಕೂಡಲೇ ಪರಿಶೀಲಿಸಿ, ಸುಳ್ಳು ಪ್ರಮಾಣ ಪತ್ರ ನೀಡಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಬಿ.ಎಂ.ಹನುಮಂತಪ್ಪ, ವಿ.ಗೋಪಾಲ್, ಮಂಜಪ್ಪ ಹಲಗೇರಿ, ಎಸ್.ರಾಜಪ್ಪ, ಪಿ.ಡಿ.ಪ್ರಕಾಶ್. ಹೆಚ್. ದಾನಪ್ಪ, ಎನ್.ಟಿ. ರಾಜು, ಚೌಡಪ್ಪ, ಎಸ್.ಬಿ. ನಾಗರಾಜ್, ಎ.ಕೆ.ಹಾಲಪ್ಪ, ವೈ. ಕೃಷ್ಣಾ ನಾಯ್ಕ, ಕೆ.ಹೆಚ್.ಹೊನ್ನಪ್ಪ, ಕೆ. ವೀರೇಶ್, ಎಸ್. ಕುಮಾರ್, ಹನುಮಂತಪ್ಪ, ಷಣ್ಮುಗಂ, ಎನ್. ರಂಗಸ್ವಾಮಿ, ಎಸ್. ಸಂತೋಷ್, ಎನ್.ಬಿ. ನಾಗರಾಜ್, ವರದರಾಜ್, ಮಲ್ಲಿಕಾರ್ಜುನ್, ಮಾರುತಿ, ಬಿ.ಟಿ. ಬಸವರಾಜ್, ಎಸ್.ಕಿರಣ್, ಟಿ.ಆರ್.ಕರಿಯಪ್ಪ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಅಬ್ದುಲ್ ಹತ್ಯೆ ಖಂಡನೀಯ; ಮಂಗಳೂರಿನ ಈ ಕೆಟ್ಟ ಪರಿಸ್ಥಿತಿಗೆ ಬಿಜೆಪಿ, ಆರ್‌ಎಸ್‌ಎಸ್ ಕಾರಣ

**ಶಿವಮೊಗ್ಗ:** ಮಂಗಳೂರಿನ ಕೊಳತ್ತಮಜಲು ಬಳಿ ಅಬ್ದುಲ್ ರಹಿಮಾನ್ ಎಂಬ ವ್ಯಕ್ತಿಯ ಹತ್ಯೆ ಖಂಡನೀಯ. ಘಟನೆಗೆ ನೈಜ ಕಾರಣ ತಿಳಿದಿಲ್ಲ. ಈ ಸಂಬಂಧ ಈಗಾಗಲೇ ಗೃಹ ಸಚಿವರಾದ ಜಿ ಪರಮೇಶ್ವರ ಹಾಗೂ ಕಾನೂನು ಸುವ್ಯವಸ್ಥೆ ಎಡಿಜಿಪಿ ಜೊತೆ ಮಾತಾಡಿದ್ದೇನೆ ಎಂದು ದಕ್ಷಿಣ ಕನ್ನಡ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅವರು ಬುಧವಾರ ಹೇಳಿದ್ದಾರೆ.

ಇಂದು ಶಿವಮೊಗ್ಗದಲ್ಲಿ ಮುಸ್ಲಿಂ ಯುವಕನ ಹತ್ಯೆಗೆ ಪ್ರತಿಕ್ರಿಯಿಸಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು, ಇದು ಅತ್ಯಂತ ನೋವಿನ ಸಂಗತಿ. ಮಂಗಳೂರಿನ ಈ ಕೆಟ್ಟ ಪರಿಸ್ಥಿತಿಗೆ ಬಿಜೆಪಿ ಹಾಗೂ ಸಂಘ ಪರಿವಾರದವರು ಕಾರಣ. ಅವರದ್ದು ವಿಷ, ಕೊಳಕು ತುಂಬಿದ ಮನಸ್ಸು. ಅವರಿಗೆ ಮಾನವೀಯತೆ, ಮನುಷ್ಯತ್ವ ಯಾವುದು ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಬಿಜೆಪಿ ಹಾಗೂ ಸಂಘ ಪರಿವಾರದವರಿಗೆ ಒಂದು ಶವ ಸಿಕ್ಕರೂ ಅದರ ಮೇಲೆ ರಾಜಕೀಯ ಮಾಡುತ್ತಾರೆ. ಬಿಜೆಪಿಯವರಿಗೆ ಮುಸ್ಲಿಮರ ಬಗ್ಗೆ ಕೆಟ್ಟ ಅಭಿಪ್ರಾಯ ಇದೆ ಎಂದು ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಮಂಗಳೂರಿನಲ್ಲಿ ಸರಣಿ ಹತ್ಯೆ ಆಗುತ್ತಿರುವುದು ಜಿಲ್ಲೆ ಹಾಗೂ ರಾಜ್ಯಕ್ಕೂ ಕೆಟ್ಟ ಹೆಸರು. ಪೊಲೀಸರಿಗೆ ಪ್ರಾಥಮಿಕ ಸುಳಿವು ಸಿಕ್ಕಿದ ಶೀಘ್ರದಲ್ಲೇ ಆರೋಪಿಗಳನ್ನು ಬಂಧಿಸಲಾಗುವುದು ಎಂದರು. ದಕ್ಷಿಣ.ಕನ್ನಡ ಜಿಲ್ಲೆಯ ಶಾಂತಿ ಹಾಳು ಮಾಡುವ ದುಷ್ಪಯತ್ನವೊಂದು ವ್ಯವಸ್ಥಿತವಾಗಿ ನಡೆಯುತ್ತಿದೆ. ಈ ಘಟನೆಯು ಇದರ ಒಂದು ಭಾಗದಂತೆ ಕಾಣಿಸುತ್ತಿದೆ. ಜಿಲ್ಲೆಯ ಕಾನೂನು ಸುವ್ಯವಸ್ಥೆ ಕಾಪಾಡಲು ಜಿಲ್ಲಾಡಳಿತಕ್ಕೆ ಕಠಿಣ ಸೂಚನೆ ನೀಡಿದ್ದೇನೆ. ಜನರು ಯಾವುದೇ ವದಂತಿಗಳಿಗೆ ಕಿವಿಗೊಡಬಾರದು ಎಂದು ಸಚಿವರು ಮನವಿ ಮಾಡಿದರು.

ದಕ್ಷಿಣ ಕನ್ನಡದಲ್ಲಿ ಸ್ಪೆಷಲ್ ಟಾಸ್ಕ್ ಫೋರ್ಸ್ ರಚನೆಯ ಬಗ್ಗೆ ಗೃಹ ಸಚಿವರು ಈ ಹಿಂದೆಯೇ ಹೇಳಿದ್ದಾರೆ. ಟಾಸ್ಕ್ ಫೋರ್ಸ್ ರಚನೆಗೆ ಎಲ್ಲಾ ವ್ಯವಸ್ಥೆ ನಡೀತಿದೆ. ಅಲ್ಲದೇ, ಆ?ಯಂಟಿ ಕಮ್ಯೂನಲ್ ಫೋರ್ಸ್ ಅನ್ನು ಮಾಡಬೇಕಾಗುತ್ತದೆ ಎಂದರು.

ಕೋಮುವಾದ ಸಮಾಜವನ್ನು ವಿಭಜನೆ ಮಾಡುತ್ತದೆ. ಕೋಮುವಾದದ ವಿರುದ್ಧ ಕಾನೂನು ಹಾಗೂ ಸಾಮಾಜಿಕ ಹೋರಾಟ ಮಾಡಬೇಕಾಗುತ್ತದೆ. ಪ್ರತಿ ಮನೆಯ ಹತ್ತಿರ ಪೊಲೀಸರು ಇರೋಕೆ ಆಗಲ್ಲ. ಮೊನ್ನೆ ಪ್ರಚೋದನಕಾರಿಯಾಗಿ ಕೆಲವರು ಭಾಷಣ ಮಾಡಿದ್ದರು. ಅವರ ಮೇಲೂ ಸಹ ಕೇಸ್ ಆಗಿದೆ. ಉದ್ರೇಕಕಾರಿ ಭಾಷಣವನ್ನು ಸಂಘ–ಪರಿವಾರದವರು ಹೆಚ್ಚಾಗಿ ಮಾಡುತ್ತಿದ್ದಾರೆ ಎಂದರು.

ಇದೇ ವೇಳೆ ಶರಣ್ ಪಂಪ್‌ವೆಲ್ ಬಂದ್ ಗೆ ಕರೆ ಕೊಟ್ಟ ವಿಚಾರವಾಗಿ ಪ್ರತಿಕ್ರಿಯಿಸಿದ ಸಚಿವರು, ಪ್ರಚೋದನೆ ಮಾಡುವವರಿಗೆ ಇದೇ ಕೆಲಸ. ಹಿಂದುತ್ವದ ಅಡಿಯಲ್ಲಿ ರಕ್ಷಣೆ ತೆಗೆದುಕೊಳ್ಳುತ್ತಾರೆ. ಒಬ್ಬರನ್ನು ಸಾಯಿಸಿದರೆ ಧರ್ಮದ ಬೆಂಬಲವಿದೆ ಅಂದು ಕೊಳ್ಳುತ್ತಾರೆ. ಹಿಂದುತ್ವವನ್ನು ಉಪಯೋಗಿಸಿಕೊಂಡು, ಮಾಡಬಾರದ ಕೆಲಸ ಮಾಡುತ್ತಾರೆ. ಮರಳು ದಂಧೆ ಮಾಡುವವರು, ರೌಡಿಗಳನ್ನೂ ಸಹ ಉಪಯೋಗಿಸಿಕೊಳ್ಳುತ್ತಾರೆ. ಇದು ನಿಜವಾದ ವಸ್ತುಸ್ಥಿತಿ ಎಂದರು.

# ರೈಲ್ವೆ ಇಲಾಖೆಯಲ್ಲಿ ಮಾಜಿ ಸೈನಿಕರಿಗೆ ಉದ್ಯೋಗಾವಕಾಶ

**ಚಿತ್ರದುರ್ಗ :** ರೈಲ್ವೆ ಇಲಾಖೆಯ ಸೆಕ್ಯೂರಿಟಿ ಹುದ್ದೆಗಳಿಗೆ ಗುತ್ತಿಗೆ ಆಧಾರದಲ್ಲಿ ಮಾಜಿ ಸೈನಿಕರನ್ನು ಭರ್ತಿ ಮಾಡಿಕೊಳ್ಳುತ್ತಿದ್ದು, ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಯ ಆಸಕ್ತ ಮಾಜಿ ಸೈನಿಕರಿಗೆ ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕರ ಕಚೇರಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಲು ಮೇ 27ರವರಗೆ ಕಾಲಾವಕಾಶ ನೀಡಲಾಗಿತ್ತು. ಒಟ್ಟು 48 ಮಾಜಿ ಸೈನಿಕರು ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿರುತ್ತಾರೆ. ನೋಂದಾಯಿತರ ಪಟ್ಟಿಯನ್ನು ಕಚೇರಿಯ ಸೂಚನಾ ಫಲಕದಲ್ಲಿ ಹಾಕಲಾಗಿದ್ದು, ಈ ಪಟ್ಟಿಗೆ ಆಕ್ಷೇಪಣೆಗಳೇನಾದರೂ ಇದ್ದರೆ ಇದೇ ಮೇ30 ಒಳಗೆ ಕಚೇರಿಯಲ್ಲಿ ಸಲ್ಲಿಸಬಹುದು ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

# ಕೋವಿಡ್ ಮುಂಜಾಗ್ರತೆ ಕ್ರಮಕೈಗೊಳ್ಳಿ

**ಚಿತ್ರದುರ್ಗ:** ರಾಜ್ಯದಲ್ಲಿ ಕರೋನಾ ವೈರಸ್ ಸೋಂಕಿತರ ಸಂಖ್ಯೆ ಹೆಚ್ಚಾಗುತ್ತಿದ್ದು, ಈ ಕುರಿತು ಸರ್ಕಾರದಿಂದ ಕಟ್ಟುನಿಟ್ಟಾಗಿ ಮಾರ್ಗಸೂಚಿ ಹೊರಡಿಸಿದ್ದು, ಕೋವಿಡ್ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಬಿ.ಆನಂದ್ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿಯ ಮೊದಲನೇ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮುಂಗಾರು ಉತ್ತಮ ರೀತಿಯಲ್ಲಿ ಆಗಿದ್ದು, ರೈತರಿಗೆ ಯಾವುದೇ ತೊಂದರೆ ಆಗದಂತೆ ಉತ್ತಮ ಗುಣಮಟ್ಟದ ಬಿತ್ತನೆ ಬೀಜ ವಿತರಿಸಲು ಕೃಷಿ ಇಲಾಖೆ ವತಿಯಿಂದ ಅಗತ್ಯ ಕ್ರಮವಹಿಸಲು ತಿಳಿಸಿದರು.

ತೋಟಗಾರಿಕೆ ಇಲಾಖೆ, ರೇಷ್ಮೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಪಶುಪಾಲನಾ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದರು.

ಸಭೆಯಲ್ಲಿ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವೈ.ರವಿಕುಮಾರ್, ಯೋಜನಾಧಿಕಾರಿ ರಾಘವೇಂದ್ರ, ಲೆಕ್ಕಾಧಿಕಾರಿ ಕೆಂಚಪ್ಪ ಸೇರಿದಂತೆ ವಿವಿಧ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ಶರಣ್ ಪಂಪ್‌ವೆಲ್ ಬಂಧನಕ್ಕೆ ಆಕ್ಷೇಪ; ಕಾಂಗ್ರೆಸ್ ಸರ್ಕಾರ ಹಿಂದೂ ಕಾರ್ಯಕರ್ತರಿಗೆ ಕಿರುಕುಳ ನೀಡುತ್ತಿದೆ– ಬಿಜೆಪಿ

**ಮಂಗಳೂರು:** ವಿಶ್ವ ಹಿಂದೂ ಪರಿಷತ್ (ವಿಎಚ್‌ಪಿ) ನಾಯಕ ಶರಣ್ ಪಂಪ್‌ವೆಲ್ ಬಂಧನಕ್ಕೆ ಕರ್ನಾಟಕ ಬಿಜೆಪಿ ಆಕ್ಷೇಪ ವ್ಯಕ್ತಪಡಿಸಿದ್ದು, ಹಿಂದೂ ಕಾರ್ಯಕರ್ತರನ್ನು ಬಂಧಿಸುವ ಪ್ರವೃತ್ತಿ ಮುಂದುವರಿದರೆ ಅದರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದೆ.

ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣದ ಬೆನ್ನಲ್ಲೇ ಮಂಗಳೂರಿನಲ್ಲಿ ಬಂದ್‌ಗೆ ಕರೆ ನೀಡಿದ್ದ ಆರೋಪದ ಮೇಲೆ ಶರಣ್ ಪಂಪ್‌ವೆಲ್ ಅವರನ್ನು ಮಂಗಳವಾರ ಪೊಲೀಸರು ಬಂಧಿಸಿದ್ದರು. ಶರಣ್ ಅವರನ್ನು ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಗಿದ್ದು, ವಿಚಾರಣೆ ನಡೆಸಿದ ನ್ಯಾಯಾಧೀಶರು ಶರಣ್ ಪಂಪ್‌ವೆಲ್‌ಗೆ ಜಾಮೀನು ನೀಡಿದ ನಂತರ ಬಿಡುಗಡೆ ಮಾಡಿದ್ದಾರೆ.

'ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆಯ ನಂತರ ಬಂದ್‌ಗೆ ಕರೆ ನೀಡಿದ್ದಕ್ಕಾಗಿ ವಿಶ್ವ ಹಿಂದೂ ಪರಿಷತ್ ನಾಯಕ ಶರಣ್ ಪಂಪ್‌ವೆಲ್ ಅವರನ್ನು ಬಂಧಿಸಲು ಮಂಗಳೂರು ಪೊಲೀಸರು ತೆಗೆದುಕೊಂಡ ಕ್ರಮ ಅತ್ಯಂತ ಖಂಡನೀಯ' ಎಂದು ಬಿಜೆಪಿ ರಾಜ್ಯಾಧ್ಯಕ್ಷ



ಬಿವೈ ವಿಜಯೇಂದ್ರ ಹೇಳಿದ್ದಾರೆ. 'ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಹಿಂದೂಗಳಿಗೆ ಸೂಕ್ತ ರಕ್ಷಣೆ ಸಿಗುತ್ತಿಲ್ಲ. ಬದಲಾಗಿ, ಈ ಸರ್ಕಾರ ಪೊಲೀಸರ ಮೂಲಕ ಹಿಂದೂ ಕಾರ್ಯಕರ್ತರನ್ನು ಬೆದರಿಸಿ ಕಿರುಕುಳ ನೀಡುತ್ತಿದೆ. ಕ್ಷುಲ್ಲಕ ಕಾರಣಗಳಿಗೆ ಅವರನ್ನು ಬಂಧಿಸಿ ಸುಳ್ಳು ಪ್ರಕರಣಗಳನ್ನು ದಾಖಲಿಸುವುದು ಅವರನ್ನು ಮೌನಗೊಳಿಸುವ ಪ್ರಯತ್ನದಂತೆ ತೋರುತ್ತದೆ. ಕಾಂಗ್ರೆಸ್ ಸರ್ಕಾರವು ತುಷ್ಟೀಕರಣ ರಾಜಕಾರಣ ಮಾಡುತ್ತಿದೆ. ಪದೇ ಪದೆ ದೇಶ ವಿರೋಧಿ ಮತ್ತು ಜಿಹಾದಿ ಶಕ್ತಿಗಳಿಗೆ ಆಶ್ರಯ ನೀಡುವ ಈ ಸರ್ಕಾರವು ಈಗ ಹಿಂದೂ ಕಾರ್ಯಕರ್ತರು ಮತ್ತು ನಾಯಕರನ್ನು ಗುರಿಯಾಗಿಸಿಕೊಂಡಿದೆ. ಕರ್ನಾಟಕ ಬಿಜೆಪಿ ಇದನ್ನು ಸಹಿಸುವುದಿಲ್ಲ' ಎಂದು ಎಚ್ಚರಿಸಿದರು.

ರಾಜ್ಯ ಸರ್ಕಾರಕ್ಕೆ ನಾನು ಎಚ್ಚರಿಕೆ ನೀಡುತ್ತೇನೆ. ಇಂತಹ ಬಂಧನಗಳು ಮುಂದುವರಿದರೆ, ಅದರ ಪರಿಣಾಮಗಳಿಗೆ ಸರ್ಕಾರವೇ ಹೊಣೆಯಾಗುತ್ತದೆ ಎಂದು ಹೇಳಿದರು.

ಸುಹಾಸ್ ಶೆಟ್ಟಿ ಹತ್ಯೆಯ ನಂತರ ದ್ವೇಷ ಭಾಷಣ ಮಾಡಿದ್ದಕ್ಕಾಗಿ ಹಿಂದೂ ಕಾರ್ಯಕರ್ತರನ್ನು ಬಂಧಿಸಬೇಕೆಂದು ಒತ್ತಾಯಿಸಿ ಮುಸ್ಲಿಂ ಸಮುದಾಯದ ಸದಸ್ಯರು ಮತ್ತು ಮುಖಂಡರು ನಡೆಸಿದ ಪ್ರತಿಭಟನೆಯ ನಂತರ ಕದ್ರಿ ಪೊಲೀಸರು ಶರಣ್ ಪಂಪ್‌ವೆಲ್ ಅವರನ್ನು ಬಂಧಿಸಿದರು. 20 ದಿನಗಳ ಹಿಂದೆ ಸುಹಾಸ್ ಶೆಟ್ಟಿ ಹತ್ಯೆಯನ್ನು ಖಂಡಿಸಿ ಬಂದ್‌ಗೆ ಕರೆ ನೀಡಿದ್ದಕ್ಕಾಗಿ ಶರಣ್ ಪಂಪ್‌ವೆಲ್ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿತ್ತು. ಆದರೆ, ಈಗ ಅವರನ್ನು ಬಂಧಿಸಿರುವುದನ್ನು ಹಿಂದೂ ಕಾರ್ಯಕರ್ತರು ಪ್ರಶ್ನಿಸಿದರು ಮತ್ತು ಮುಸ್ಲಿಂ ಸಮುದಾಯವನ್ನು ಸಮಾಧಾನಪಡಿಸಲು ಬಂಧಿಸಲಾಗಿದೆ ಎಂದು ಆರೋಪಿಸಿದರು.

ಪಂಪ್‌ವೆಲ್ ಬಂಧನದ ನಂತರ, ನೂರಾರು ಹಿಂದೂ ಕಾರ್ಯಕರ್ತರು ಪೊಲೀಸ್ ಠಾಣೆಯ ಮುಂದೆ ಜಮಾಯಿಸಿ ಅವರನ್ನು ತಕ್ಷಣ ಬಿಡುಗಡೆ ಮಾಡುವಂತೆ ಒತ್ತಾಯಿಸಿದರು.

# ಯಾತ್ರಿ ನಿವಾಸ ಹಸ್ತಾಂತರ: ಅರ್ಜಿ ಆಹ್ವಾನ

**ಚಿತ್ರದುರ್ಗ :** ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಹನುಮನಕಟ್ಟೆ ಕೆಂಚಾಂಬ ದೇವಸ್ಥಾನದ ಬಳಿ, ಸಾಸಲು ಭೂತಪ್ಪ ದೇವಸ್ಥಾನದ ಬಳಿ ಹಾಗೂ ದುಮ್ಮಿಗೊಲ್ಲರಹಟ್ಟಿ ಜುಂಜಪ್ಪನ ದೇವಸ್ಥಾನದ ಬಳಿ ಯಾತ್ರಿ ನಿವಾಸ ನಿರ್ಮಿಸಲಾಗಿರುತ್ತದೆ. ಪ್ರತಿ ಯಾತ್ರಿ ನಿವಾಸಕ್ಕೆ ತಲಾ ರೂ.25 ಲಕ್ಷ ವೆಚ್ಚ ಭರಿಸಲಾಗಿರುತ್ತದೆ. ಯಾತ್ರಿ ನಿವಾಸ ಕಟ್ಟಡಗಳನ್ನು ಯಾರಾದರೂ ನಿರ್ವಹಣೆ ಮಾಡಲು ಇಚ್ಛಿಸಿದ್ದಲ್ಲಿ ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಚಿತ್ರದುರ್ಗ ಕಚೇರಿಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಸಹಾಯಕ ನಿರ್ದೇಶಕರ ಕಚೇರಿ, ಕೋಟೆ ಸಮೀಪ, ಕಾಮನಬಾವಿ ಬಡಾವಣೆ, ಚಿತ್ರದುರ್ಗ ಇವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಕರ್ನಾಟಕದ ಮಲೆನಾಡಿನಲ್ಲಿ ಮಳೆ ಆರ್ಭಟ

## ಜಲಾಶಯಗಳಿಗೆ ಒಳಹರಿವು ಹೆಚ್ಚಳ – ಗಾಜನೂರು ತುಂಗಾ ಡ್ಯಾಂ ಬಹುತೇಕ ಭರ್ತಿ



**ಶಿವಮೊಗ್ಗ:** ವಾಯುಭಾರ ಕುಸಿತದ ಪರಿಣಾಮ ಒಂದು ವಾರದಿಂದ ಸುರಿಯುತ್ತಿರುವ ಮಳೆಯು ವೈಶಾಖದಲ್ಲೇ ಆಷಾಢ ಮಾಸವನ್ನು ಸೃಷ್ಟಿಸಿದೆ. ಶಿವಮೊಗ್ಗ ಜಿಲ್ಲೆಯ ಜಲಾಶಯಗಳಿಗೆ ಒಳಹರಿವು ಹೆಚ್ಚಳವಾಗಿದ್ದು, ಗಾಜನೂರಿನ ತುಂಗಾ ಜಲಾಶಯ ಬಹುತೇಕ ಭರ್ತಿಯಾಗಿದೆ.

ಆಷಾಢ ಮಾಸವೆಂದರೆ ಜೋರು ಮಳೆಯಾಗಿ ಇಳೆಯು ತಂಪುಗೊಂಡು ಥಂಡಿ ಗಾಳಿ ಬೀಸುವ ಸಮಯ. ಆಷಾಢ ಆಗಮನಕ್ಕೆ ಇನ್ನೂ ತಿಂಗಳು ಇರುವಾಗಲೆ ಮಲೆನಾಡಿನಲ್ಲಿಆಷಾಢದ ವಾತಾವರಣ ಸೃಷ್ಟಿಯಾಗಿದೆ. ಜಿಲ್ಲೆಯ ಪಶ್ಚಿಮಘಟ್ಟ ವ್ಯಾಪ್ತಿಯ ಮಲೆನಾಡು ಪ್ರದೇಶದಲ್ಲಿ ಎರಡು ದಿನಗಳಿಂದ ಜೋರು ಗಾಳಿಯೊಂದಿಗೆ ಬಿರುಸಿನ ಮಳೆ ಸುರಿಯುತ್ತಿದೆ. ಅರೆಮಲೆ ನಾಡಿನ ತಾಲೂಕುಗಳಲ್ಲಿ ದಟ್ಟ ಮೋಡ ಕವಿದು ಆಗಾಗ್ಗೆ ಸೋನೆ ಸುರಿಯುತ್ತಿದೆ. (ಕರ್ನಾಟಕದಲ್ಲಿ ವ್ಯಾಪಕ ಮಳೆ)

ಸಾಮಾನ್ಯವಾಗಿ ಜಿಲ್ಲೆಯ ನದಿಗಳಿಗೆ ಜೂನ್ ಮಧ್ಯದಲ್ಲಿ ಹೊಸ ನೀರು ಬರುತ್ತದೆ. ಆದರೆ, ಈ ಬಾರಿ ನೈಋತ್ಯ ಮಾನ್ಸೂನ್ ಆಗಮನದ ಮುನ್ನವೇ ಮಲೆನಾಡಿನ ಹಳ್ಳ ಮತ್ತು ನದಿಗಳಿಗೆ ಹೊಸ ನೀರು ಬಂದಿದೆ. ಲಿಂಗನಮಕ್ಕಿ ಜಲಾಶಯಕ್ಕೆ ಮಂಗಳವಾರದಿಂದ ಒಳಹರಿವು ಆರಂಭವಾಗಿದೆ. ಶನಿವಾರ ಬೆಳಗ್ಗೆ ಜಲಾಶಯದ ಒಳಹರಿವು 7145 ಕ್ಯೂಸೆಕ್ ಇತ್ತು. ಈ ವರ್ಷ ಮೊದಲ ಬಾರಿಗೆ ನೀರಿನ ಮಟ್ಟ ಶನಿವಾರ ಎರಡು ಇಂಚು ಏರಿಕೆ ಕಂಡಿದೆ. (ಹಾಸನದ ಯುಗಾಚಿ ಜಲಾಶಯ ಭರ್ತಿ)

ಶಿವಮೊಗ್ಗ ಜಿಲ್ಲೆಯ ಅತಿಸಣ್ಣ ಜಲಾಶಯವಾದ ಗಾಜನೂರು (ತುಂಗಾ) ಜಲಾಶಯಕ್ಕೆ ನಾಲ್ಕು ದಿನಗಳಿಂದ ಒಳಹರಿವು ಏರಿಕೆಯಾಗಿದೆ. 3 ಟಿ ಎಂ ಸಿ ಸಾಮರ್ಥ್ಯದ ಜಲಾಶಯದಲ್ಲಿಸದಾ 1.50 ಟಿಎಂಸಿ ನೀರು ಸಂಗ್ರಹ ಇರುತ್ತದೆ. ಹೀಗಾಗಿ, ಜಲಾಶಯ ತುಂಬುವ ಹಂತಕ್ಕೆ ತಲುಪಿದ್ದು ಇನ್ನೆರಡು ದಿನ ಇದೇ ರೀತಿ ಮಳೆ ಮುಂದುವರಿದಲ್ಲಿ ಯಾವುದೇ ಕ್ಷಣದಲ್ಲಿಕ್ರಸ್ಟ್‌ಗೇಟ್‌ಗಳ ಮೂಲಕ ಹೆಚ್ಚುವರಿ ನೀರನ್ನು ಹೊರಹರಿಸುವ ಸಾಧ್ಯತೆ ಇದೆ ಎಂದು ಕರ್ನಾಟಕ ನೀರಾವರಿ ನಿಗಮದ ಪ್ರಕಟಣೆ ತಿಳಿಸಿದೆ. (ಕರ್ನಾಟಕಕ್ಕೆ ಮುಂಗಾರು ಆಗಮನ)

ಶನಿವಾರ ಬೆಳಗ್ಗೆ 8ಗಂಟೆಗೆ ಅಂತ್ಯವಾದಂತೆ ಕಳೆದ 24 ಗಂಟೆಗಳಲ್ಲಿ ಜಿಲ್ಲೆಯಲ್ಲಿಸರಾಸರಿ 24 ಮಿ.ಮೀ. ಮಳೆಯಾಗಿದೆ. ತಾಲೂಕುವಾರು ಸರಾಸರಿಯಂತೆ ಸಾಗರ 38.6 ಮಿ.ಮೀ., ಹೊಸನಗರ 35.8, ತೀರ್ಥಹಳ್ಳಿ 28.8 ಮಿ.ಮೀ ಸೊರಬ 11.9 ಮಿ.ಮೀ ಶಿವಮೊಗ್ಗ 9.8 ಮಿ.ಮೀ ಶಿಕಾರಿಪುರ 7.4 ಮಿ.ಮೀ ಭದ್ರಾವತಿಯಲ್ಲಿ3.6 ಮಿ.ಮೀ. ಮಳೆಯಾಗಿದೆ. ಮಾಸ್ತಿಕಟ್ಟೆಯಲ್ಲಿ ಅತಿ ಹೆಚ್ಚು 145ಮಿ.ಮೀ., ಹುಲಿಕಲ್‌ನಲ್ಲಿ 139 ಮಿ.ಮೀ, ಆಗುಂಬೆ 80 ಮಿ.ಮೀ ಲಿಂಗನಮಕ್ಕಿಯಲ್ಲಿ52 ಮಿ.ಮೀ. ಮಳೆಯಾಗಿದೆ.

## ವಿಧಾನಸೌಧ ರಾಜ್ಯದ ಪ್ರಜಾಪ್ರಭುತ್ವದ ಜೀವಂತ ಕಥೆ;

# ಸಾರ್ವಜನಿಕ ಪ್ರವೇಶ ನಿರ್ಧಾರ ಸ್ವಾಗತಿಸಿದ ಹೆಚ್.ಕೆ.ಪಾಟೀಲ್



**ಬೆಂಗಳೂರು:** ವಿಧಾನಸೌಧವು ನಮ್ಮ ರಾಜ್ಯದ ಪ್ರಜಾಪ್ರಭುತ್ವದ ಜೀವಂತ ಕಥೆ–ಯಾಗಿದ್ದು, ಇದನ್ನು ಸಾರ್ವಜನಿಕರಿಗೆ ತೆರೆದಿರುವುದು ಪಾರದರ್ಶಕತೆ, ಪರಂಪರೆ ಮತ್ತು ನಾಗರಿಕ ಹೆಮ್ಮೆಯ ಕಾರ್ಯಕ್ರಮವಾಗಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ.ಪಾಟೀಲ್ ಸಂತಸ ವ್ಯಕ್ತಪಡಿಸಿದ್ದಾರೆ.

ಇಂದು (ಮೇ 25–ಭಾನುವಾರ) ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಪ್ರವಾಸೋದ್ಯಮ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹಾಗೂ ಕರ್ನಾಟಕ ವಿಧಾನಸಭೆಯ ಸಚಿವಾಲಯದ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾದ ಮಾರ್ಗದರ್ಶಿ ನಡಿಗೆ ಪ್ರವಾಸ (Walking Guided Tour) ಕಾರ್ಯಕ್ರಮಕ್ಕೆ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿ ಹೆಚ್‌ಕೆ ಪಾಟೀಲ್ ಮಾತನಾಡಿದರು.

ವಿಧಾನಸೌಧವು ಇನ್ನು ಮುಂದೆ ಸಾರ್ವಜನಿಕರಿಗೂ ಮುಕ್ತವಾಗಲಿದೆ. ಕಲಾಕೌಶಲ್ಯದ ವಿರಳ ದಾಖಲೆಯಾಗಿ ಇತಿಹಾಸದಲ್ಲಿ ದಾಖಲಾಗಿರುವ ಆಡಳಿತ ಸೌಧವನ್ನು ದೂರದಿಂದಲೇ ನೋಡಿ ಫೋಟೋ ತೆಗೆದು ಸಂತಸ ಪಡುತ್ತಿದ್ದ ಜನರಿಗೆ, ಈಗ ಇದನ್ನ ಹತ್ತಿರದಿಂದ ನೋಡುವ ಸದವಕಾಶ ಲಭ್ಯವಿದೆ ಎಂದು ಹೆಚ್‌ಕೆ ಪಾಟೀಲ್ ಹೇಳಿದರು.

ಇದು ಕೇವಲ ಕಟ್ಟಡವಲ್ಲ. ಜಗತ್ತಿನ ಅತ್ಯಂತ ಸುಂದರವಾದ ಕಟ್ಟಡ, ವಿದ್ಯಾರ್ಥಿಗಳಿಗೆ, ಆಸಕ್ತರಿಗೆ ಇದರ ದರ್ಶನ ಮಾಡಿಸುವ ದೃಷ್ಟಿಯಿಂದ ಅವಕಾಶವನ್ನು ಕಲ್ಪಿಸಿಕೊಡಲಾಗುತ್ತಿದೆ. ಇಲ್ಲಿಯವರಿಗೆ ಕೇವಲ ಆಡಳಿತ ಕಾರ್ಯಗಳಿಗಷ್ಟೇ ಸೀಮಿತವಾಗಿದ್ದ ವಿಧಾನಸೌಧವು, ಇನ್ನು ಮುಂದೆ ಪ್ರವಾಸಿ, ಪ್ರೇಕ್ಷಣೀಯ ಸ್ಥಳದ ಸಾಲಿಗೆ ಸೇರ್ಪಡೆಯಾಗಲಿದೆ. ಜೂನ್ 1ರಿಂದ ಸೀಮಿತ ದಿನಗಳಲ್ಲಿ ವಿಧಾನಸೌಧವು ಸಾರ್ವಜನಿಕ ವೀಕ್ಷಣೆಗೆ ಲಭ್ಯವಾಗಲಿದೆ ಎಂದು ಕಾನೂನು ಸಚಿವರು ತಿಳಿಸಿದರು.

ವಿಧಾನಸೌಧ ಪ್ರವಾಸ ಕಾರ್ಯಕ್ರಮವು ಮನೋರಂಜನೆಯ ಪ್ರವಾಸವಾಗಬಾರದು, ಶೈಕ್ಷಣಿಕ ಅಧ್ಯಯನದ ಪ್ರವಾಸವಾಗಬೇಕು. ಪ್ರಜಾಪ್ರಭುತ್ವದ ಮಹತ್ವವನ್ನು ಸಾರ್ವಜನಿಕರು ತಿಳಿದುಕೊಳ್ಳುವಂತಾಗಬೇಕು. ವಿದ್ಯಾರ್ಥಿಗಳು ಮುಂದೆ ರಾಜಕೀಯ ಕ್ಷೇತ್ರಕ್ಕೂ ಬರಬೇಕು, ಉತ್ತಮ ರಾಜಕೀಯ ಪಟುಗಳಾಗಲು ಶಕ್ತಿಸೌಧ ಸ್ಫೂರ್ತಿ ನೀಡುವಂತಾಗಬೇಕು ಎಂದು ಹೆಚ್‌ಕೆ ಪಾಟೀಲ್ ಇದೇ ವೇಳೆ ಸಲಹೆ ನೀಡಿದರು.

ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ.ಖಾದರ್ ಮಾತನಾಡಿ ವಿಧಾನಸೌಧದ ಕಟ್ಟಡದಲ್ಲಿ ಓಡಾಡಿದರೆ, ಅನೇಕ ಪಾರಂಪರಿಕ ಕಟ್ಟಡಗಳು ಕಣ್ಣಿಗೆ ಕಟ್ಟುವಂತೆ ಮಾಡಲಿದೆ. 75 ವರ್ಷಗಳ ಕಾಲ ವಿಧಾನಸೌಧದ ಒಳಗೆ ಯಾರನ್ನೂ ಬಿಟ್ಟಿರಲಿಲ್ಲ. ಸಾರ್ವಜನಿಕರು ಪಾಸ್ ಪಡೆದುಕೊಂಡು ಬರಬೇಕಿತ್ತು. ಆದರೆ ಈಗ ಕರ್ನಾಟಕ ಮಾತ್ರವಲ್ಲ ದೇಶದ ಜನತೆ ಕೂಡ ವಿಧಾನಸೌಧವನ್ನು ಸೀಮಿತ ದಿನಗಳಲ್ಲಿ ನೋಡಬಹುದಾಗಿದೆ ಎಂದು ಹೇಳಿದರು.

ಮಾರ್ಗದರ್ಶಿ ಪ್ರವಾಸದ ಮೂಲಕ ವಿದ್ಯಾರ್ಥಿಗಳಿಗೆ ನಮ್ಮ ನಾಡಿನ ಇತಿಹಾಸ ಅರ್ಥಮಾಡಿಸುವ ಕೆಲಸವಾಗಲಿದೆ. ವಿದ್ಯಾರ್ಥಿಗಳು ಹಾಗೂ ಯುವ ಸಮುದಾಯದವರು ದೇಶದ ಇತಿಹಾಸವನ್ನು ಅರ್ಥ ಮಾಡಿಕೊಳ್ಳಬೇಕು. ವಿಧಾನಸೌಧ ನಮ್ಮದು ಎಂಬ ಭಾವನೆಯನ್ನು ನಮ್ಮ ರಾಜ್ಯದ ಜನರಲ್ಲಿ ಮೂಡುವಂತೆ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದು ಯುಟಿ ಖಾದರ್ ಇದೇ ವೇಳೆ ಮಾಹಿತಿ ನೀಡಿದರು.

ವಿಧಾನಸೌಧ ಬೆಂಗಳೂರಿನ ಪ್ರಮುಖ ಐತಿಹಾಸಿಕ ಮತ್ತು ಆಡಳಿತದ ಸಂಕೇತವಾಗಿದ್ದು, ಮಾರ್ಗದರ್ಶಿ ಪ್ರವಾಸಿ ನಡಿಗೆಯು ಈ ಕಟ್ಟಡದ ಐತಿಹಾಸಿಕದ ಮಹತ್ವ, ಶಿಲ್ಪಕಲೆಯ ವೈಭವ ಮತ್ತು ಅದರ ಪ್ರಮುಖ ಭಾಗಗಳನ್ನು ಪರಿಚಯಿಸುತ್ತದೆ. ಸಾರ್ವಜನಿಕರು ಇದರ ವೀಕ್ಷಣೆ ಮಾಡಬಹುದಾಗಿದೆ. ನುರಿತ ಗೈಡ್‌ಗಳು ವಿಧಾನಸೌಧ ಆವರಣದ ಕುರಿತು ಸಮಗ್ರ ಪರಿಚಯ ಸಹಿತ ಮಾಹಿತಿಯನ್ನು ಪ್ರವಾಸಿಗರಿಗೆ ಒದಗಿಸಲಿದ್ದಾರೆ ಎಂದು ಹೆಚ್‌ಕೆ ಪಾಟೀಲ್

ರಾಜಕೀಯ ಅಕಾಡೆಮಿ ತೆರೆಯಲು ಚಿಂತಿಸಲಾಗುತ್ತಿದೆ. ರಾಜಕೀಯ ಕಾಲೇಜು ಆರಂಭಿಸಿ ತರಬೇತಿ ನೀಡುವ ಬಗ್ಗೆ ಕಾನೂನಾತ್ಮಕವಾಗಿ ಚರ್ಚಿಸಿ ಅನುಷ್ಠಾನದ ಬಗ್ಗೆ ನಿರ್ಧಾರ ಮಾಡಲಾಗುವುದು ಎಂದು ಹೆಚ್‌ಕೆ ಪಾಟೀಲ್ ಮಾಹಿತಿ ನೀಡಿದರು.

# ಬೆಂಗಳೂರು ಸಂಪೂರ್ಣ ಸಿಟಿ ಸೌಂದರ್ಯ ತೋರಿಸುವ ಸ್ಕೈ ಡೆಕ್ ಯೋಜನೆಗೆ ಕೆಂಗೇರಿ ಸ್ಥಳ ಆಯ್ಕೆ: ಡಿಕೆ ಶಿವಕುಮಾರ್



**ಬೆಂಗಳೂರು:** ಬಹು ಚರ್ಚಿತ ಸ್ಕೈ ಡೆಕ್ ಯೋಜನೆಯನ್ನು ಕೆಂಗೇರಿ ಬಳಿಯ ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ನಿರ್ಮಿಸಲು ಕರ್ನಾಟಕ ಸರ್ಕಾರ ನಿರ್ಧರಿಸಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

ಸ್ಕೈಡೆಕ್ ಯೋಜನೆಯು 250 ಮೀಟ–ರ್ ಎತ್ತರವಿರಲಿದ್ದು, ನಗರದ ವಿಹಂಗಮ ನೋಟವನ್ನು ನೀಡುತ್ತದೆ. ಪ್ರವಾಸಿಗರನ್ನು ಆಕರ್ಷಿಸುವ ಗುರಿಯನ್ನು ಹೊಂದಿದೆ, ಬ್ರ್ಯಾಂಡ್ ಬೆಂಗಳೂರು ಅಭಿವೃದ್ಧಿಯ ಭಾಗವಾಗಿ ಇದನ್ನು ಜಾರಿ ಮಾಡಲಾಗ್ತಿದೆ. ಮೊದಲಿಗೆ ಈ ಯೋಜನೆಯನ್ನು ಹೆಮ್ಮಿಗೆಪುರದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿತ್ತು. ಆದರೆ ವಿಮಾನ ನಿಲ್ದಾಣದ 20 ಕಿಲೋಮೀಟರ್ ವ್ಯಾಪ್ತಿಯಲ್ಲಿ ಎತ್ತರದ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ. ಹಾಗೆಯೇ ನಂದಿ ಇನ್ಫ್ರಾಸ್ಟ್ರಕ್ಚರ್ ಕಾರಿಡಾರ್ ಎಂಟರ್‌ಪ್ರೈಸಸ್ (NICE)ಗೆ ಸೇರಿದ ಜಮೀನನ್ನು ಸ್ವಾಧೀನಪಡಿಸಿಕೊಳ್ಳುವುದು ಕಷ್ಟಕರವಾಗಿತ್ತು. ಆದ್ದರಿಂದ ಸ್ಥಳವನ್ನು ಬದಲಾಯಿಸಲಾಗಿದೆ ಎಂದು ಶಿವಕುಮಾರ್ ತಿಳಿಸಿದರು.

"ಕೆಂಪೇಗೌಡ ಬಡಾವಣೆಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ (BDA) ಸೇರಿದ ಜಾಗದಲ್ಲಿ ಸ್ಕೈ ಡೆಕ್ ನಿರ್ಮಾಣವಾಗಲಿದೆ. ಈ ಪ್ರದೇಶಕ್ಕೆ ಭವಿಷ್ಯದಲ್ಲಿ ಮೆಟ್ರೋ ಸಂಪರ್ಕ ದೊರೆಯುವ ನಿರೀಕ್ಷೆಯಿದೆ. ಆದ್ದರಿಂದ ಅಧಿಕಾರಿಗಳಿಗೆ ಮುಂದಕ್ಕೆ ಹೋಗಲು ಸೂಚಿಸಿದ್ದೇನೆ" ಎಂದು ಅವರು ಹೇಳಿದರು. ಬಿಡಿಎ ಅಧಿಕಾರಿಗಳು ತಿಳಿಸಿರುವಂತೆ, ಬಡಾವಣೆಯೊಳಗೆ 25 ಎಕರೆ ಜಾಗವನ್ನು ಗುರುತಿಸಲಾಗಿದೆ. ಈ ಸ್ಕೈ ಡೆಕ್ 250 ಮೀಟರ್ ಎತ್ತರವಿರಲಿದ್ದು, ನಗರದ ಸುಂದರ ನೋಟವನ್ನು ಕಣ್ತುಂಬಿಕೊಳ್ಳಲು ಸಹಾಯ ಮಾಡುತ್ತದೆ. ಇದು ಪ್ರವಾಸಿಗರನ್ನು ಆಕರ್ಷಿಸುವ ನಿರೀಕ್ಷೆಯಿದೆ

ನಗರದ ಪಾದಚಾರಿ ಮಾರ್ಗಗಳಲ್ಲಿರುವ ಅಂಗಡಿಗಳನ್ನು ತೆರವುಗೊಳಿಸಲಾಗುವುದು ಎಂದು ಶಿವಕುಮಾರ್ ತಿಳಿಸಿದ್ದಾರೆ. ಬೀದಿಬದಿ ವ್ಯಾಪಾರವನ್ನು ಹಂತ ಹಂತವಾಗಿ ಸುವ್ಯವಸ್ಥಿತಗೊಳಿಸಲಾಗುವುದು. ಬಿಬಿಎಂಪಿ ಈಗಾಗಲೇ ಬೀದಿಬದಿ ವ್ಯಾಪಾರಿಗಳ ಸಮೀಕ್ಷೆಯನ್ನು ಪೂರ್ಣಗೊಳಿಸಿದೆ. ಶೀಘ್ರದಲ್ಲೇ ವ್ಯಾಪಾರ ವಲಯಗಳನ್ನು ಗುರುತಿಸಲಾಗುವುದು ಎಂದು ಅವರು ಹೇಳಿದರು.

"ಕಾನೂನಿನಲ್ಲಿ ಪಾದಚಾರಿ ಮಾರ್ಗಗಳಲ್ಲಿ ಅಂಗಡಿಗಳನ್ನು ನಡೆಸಲು ಅವಕಾಶವಿಲ್ಲ. ಬಿಬಿಎಂಪಿ ಸಮೀಕ್ಷೆಯಲ್ಲಿ 27,665 ವ್ಯಾಪಾರಿಗಳನ್ನು ಗುರುತಿಸಲಾಗಿದೆ. ನೋಂದಾಯಿತ ವ್ಯಾಪಾರಿಗಳಿಗೆ ಪುಶ್‌ಕಾರ್ಟ್‌ಗಳನ್ನು ನೀಡಲು ನಾವು ಸಿದ್ಧರಿದ್ದೇವೆ. ವ್ಯಾಪಾರ ವಲಯಗಳನ್ನು ಗುರುತಿಸಲಾಗುವುದು. ವ್ಯಾಪಾರಿಗಳು ಆ ವಲಯಗಳಲ್ಲಿ ಪುಶ್‌ಕಾರ್ಟ್‌ಗಳಲ್ಲಿ ತಮ್ಮ ಸರಕುಗಳನ್ನು ಮಾರಾಟ ಮಾಡಬಹುದು. ಸಂಜೆ ವ್ಯಾಪಾರದ ಸಮಯ ಮುಗಿದ ನಂತರ ಆ ಜಾಗವನ್ನು ಖಾಲಿ ಮಾಡಬೇಕು" ಎಂದು ಡಿಸಿಎಂ ಹೇಳಿದರು.

ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು, ಮೆಟ್ರೋ ಕಾಮಗಾರಿ ನಡೆಯುತ್ತಿರುವ ಕಡೆಗಳಲ್ಲಿ ಸರ್ವಿಸ್ ರಸ್ತೆಗಳನ್ನು ಮುಖ್ಯ ರಸ್ತೆಗಳೊಂದಿಗೆ ವಿಲೀನಗೊಳಿಸಿ ಸಂಚಾರ–ಕ್ಕೆ ಮುಕ್ತಗೊಳಿಸಬೇಕು ಎಂದು ಶಿವಕುಮಾರ್ ಸಲಹೆ ನೀಡಿದ್ದಾರೆ. "ಸಂಚಾರ ದಟ್ಟಣೆಯನ್ನು ತಡೆಯಲು, ಸರ್ವಿಸ್ ರಸ್ತೆಗಳನ್ನು ವಿಲೀನಗೊಳಿಸಲು ನಾನು ಸೂಚಿಸಿದ್ದೇನೆ. ಈ ಬಗ್ಗೆ ಬೆಂಗಳೂರು ಸಂಚಾರ ಪೊಲೀಸರೊಂದಿಗೆ (BTP) ಚರ್ಚಿಸಿದ್ದೇನೆ. ಅವರು ಶೀಘ್ರದಲ್ಲೇ ಕ್ರಿಯಾ ಯೋಜನೆಯೊಂದಿಗೆ ಬರುತ್ತಾರೆ" ಎಂದು ಅವರು ಹೇಳಿದರು.

ನಗರದ ರಸ್ತೆಗಳಲ್ಲಿರುವ ಎಲ್ಲಾ ಕೈಬಿಟ್ಟ ವಾಹನಗಳನ್ನು ತೆರವುಗೊಳಿಸಲು ಸಂಚಾರ ಪೊಲೀಸ್ ಸಿಬ್ಬಂದಿಗೆ ನಿರ್ದೇಶನ ನೀಡಲಾಗಿದೆ. ಸರ್ಕಾರವು ದೊಡ್ಡ ಪ್ರದೇಶವನ್ನು ಗುರುತಿಸಲಿದೆ. ಅಲ್ಲಿ ಈ ವಾಹನಗಳನ್ನು ಹಾಕಬಹುದು. "ಅಧಿಕಾರಿಗಳು 'ನೋ ಪಾರ್ಕಿಂಗ್' ವಲಯಗಳನ್ನು ಸಹ ಗುರುತಿಸುತ್ತಾರೆ" ಎಂದು ಅವರು ಹೇಳಿದರು.

# ಕೈವ್ ನಗರದ ಮೇಲೆ ರಷ್ಯಾದಿಂದ ಭಾರೀ ವೈಮಾನಿಕ ದಾಳಿ;

## ಬೆಂಕಿಯಲ್ಲಿ ಬೆಂದ ಉಕ್ರೇನ್ ರಾಜಧಾನಿ!



**ಕೈವ್:** ಉಕ್ರೇನ್ ರಾಜಧಾನಿ ಕೈವ್ ನಗರದ ಮೇಲೆ ರಷ್ಯಾದಿಂದ ಭಾರಿ ವೈಮಾನಿಕ ದಾಳಿ ನಡೆದಿದೆ. ಯುದ್ಧ ಕೈದಿಯನ್ನು ವಿನಿಮಯ ಮಾಡಿಕೊಂಡ ಬಳಿಕ, ರಷ್ಯಾ ಕೈವ್ ನಗರದ ಮೇಲೆ ವಾಯುದಾಳಿ ನಡೆಸಿರುವುದು ಭಾರೀ ಆಕ್ರೋಶಕ್ಕೆ ಕಾರಣವಾಗಿದೆ. ರಷ್ಯಾ ತನ್ನ ಕ್ಷಿಪಣಿ ಮತ್ತು ಡ್ರೋನ್‌ಗಳನ್ನು ಬಳಸಿ ಕೈವ್ ನಗರದ ಮೇಲೆ ಏರ್‌ಸ್ಟ್ರೈಕ್ ನಡೆಸಿದೆ

ಯುದ್ಧ ಕೈದಿನಗಳ ವಿನಿಮಯ ರಷ್ಯಾ ಮತ್ತು ಉಕ್ರೇನ್ ನಡುವೆ ಶಾಂತಿ ಸ್ಥಾಪನೆಗೆ ಇಟ್ಟ ಮೊದಲ ಹೆಜ್ಜೆ ಎಂದು ಬಣ್ಣಿಸಲಾಗಿತ್ತು. ಆದರೆ ವಿನಿಮಯ ಪ್ರಕ್ರಿಯೆ ಪೂರ್ಣಗೊಳ್ಳುತ್ತಿದ್ದಂತೇ ಕೈವ್ ನಗರದ ಮೇಲೆ ರಷ್ಯಾ ವೈಮಾನಿಕ ದಾಳಿ ಮಾಡಿರುವುದನ್ನು, ಶಾಂತಿ ಸ್ಥಾಪನೆಯ ಪ್ರಯತ್ನಕ್ಕೆ ಬಲವಾದ ಹೊಡೆತ ಎಂದು ವಿಶ್ಲೇಷಿಸಲಾಗಿದೆ.

ಕೈವ್ ನಗರದ ಮೇಲೆ ರಷ್ಯಾ ನಡೆಸಿದ ವಾಯುದಾಳಿಯಲ್ಲಿ ಕನಿಷ್ಠ 12 ಜನರು ಮೃತಪಟ್ಟಿದ್ದಾರೆ. ಪೂರ್ವ ಭಾಗದಲ್ಲಿ ರಷ್ಯಾ ಸೇನೆ ನಿಧಾನವಾಗಿ ಮುನ್ನುಗ್ಗುತ್ತಿದ್ದು, ಡೊನೆಟ್ಸ್ಕ ಪ್ರದೇಶದಲ್ಲಿ ಎರಡು ಹಳ್ಳಿಗಳನ್ನು ಹಾಗೂ ಸುಮಿ ಪ್ರದೇಶದಲ್ಲಿ ಒಂದು ಹಳ್ಳಿಯನ್ನು ವಶಪಡಿಸಿಕೊಂಡಿದೆ. ಉಕ್ರೇನ್‌ನ ವಾಯುಸೇನೆ ಪ್ರಕಾರ, ರಷ್ಯಾ 298 ಡ್ರೋನ್ ಮತ್ತು 69 ಕ್ಷಿಪಣಿಗಳನ್ನು ಕೈವ್ ನಗರದ ಮೇಲೆ ಉಡಾಯಿಸಿದೆ.


ಈ ಪೈಕಿ 266 ಡ್ರೋನ್ ಮತ್ತು 45 ಕ್ಷಿಪಣಿಗಳನ್ನು ಉಕ್ರೇನ್ ವಾಯುಸೇಣೆ ಹೊಡೆದುರುಳಿದೆ. ಆದರೆ ಉಳಿದ ಕ್ಷಿಪಣಿ ಮತ್ತು ಡ್ರೋನ್‌ಗಳು ಕೈವ್ ನಗರದ ಖಾರ್ಕಿವ್, ಮೈಕೋಲೈವ್ ಮತ್ತು ಟೆರ್ನೋಪಿಲ್ ಸೇರಿದಂತೆ ಹಲವು ಪ್ರದೇಶಗಳಲ್ಲಿ ಭಾರೀ ಹಾನಿಯನ್ನುಂಟು ಮಾಡಿದೆ. ರಷ್ಯಾದ ಈ ವಾಯುದಾಳಿಯಿಂದಾಗಿ ಕೈವ್ ನಗರದ ಅಕ್ಷರಶಃ ಬೆಂಕಿಯಲ್ಲಿ ಬೆಂದಿದೆ.

ಈ ಕುರಿತು ಮಾಹಿತಿ ನೀಡಿರುವ ಉಕ್ರೇನ್ ಒಳಾಡಳಿತ ಸಚಿವ ಇಹೋರ್ ಕ್ಲೈಮೆಂಕೊ, "ರಷ್ಯಾ ನಡೆಸಿದ ಏರ್‌ಸ್ಟ್ರೈಕ್ ಸುಮಾರು 12 ಜನರನ್ನು ಬಲಿ ಪಡೆದಿದ್ದು, 60ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಇದು ಕೈವ್ ನಗರದ ಮೇಲೆ ರಷ್ಯಾ ನಡೆಸಿದ ಅತ್ಯಂತ ದೊಡ್ಡ ಮತ್ತು ಭೀಕರ ವಾಯುದಾಳಿ" ಎಂದು ಹೇಳಿದ್ದಾರೆ.

ಇನ್ನು ಯುದ್ಧ ಕೈದಿನಗಳ ವಿನಿಮಯದ ಬಳಿಕ ರಷ್ಯಾ ಕೈವ್ ನಗರವನ್ನು ಗುರಿಯಾಗಿಸಿಕೊಂಡು ವಾಯುದಾಳಿ ನಡೆಸಿರುವುದನ್ನು, ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ತೀವ್ರವಾಗಿ ಖಂಡಿಸಿದ್ದಾರೆ. ಮಾಸ್ಕೋ ಮೇಲೆ ಹೆಚ್ಚಿನ ನಿರ್ಬಂಧಗಳನ್ನು ಹೇರಬೇಕು ಎಂದು ಜಾಗತಿಕ ವೇದಿಕೆಗೆ ಮನವಿ ಮಾಡಿರುವ ಅವರು, ರಷ್ಯಾಗೆ ಯುದ್ಧವನ್ನು ಅಂತ್ಯಗೊಳಿಸುವ ಇಚ್ಛಾಶಕ್ತಿ ಇಲ್ಲ ಎಂದು ಹರಿಹಾಯ್ದಿದ್ದಾರೆ.

ಟರ್ಕಿ ರಾಜಧಾನಿ ಇಸ್ತಾನ್‌ಬುಲ್‌ನಲ್ಲಿ ನಡೆದ ಮಾತುಕತೆಯಲ್ಲಿ, ಯುದ್ಧ ಕೈದಿಗಳನ್ನು ವಿನಿಮಯ ಮಾಡಿಕೊಳ್ಳುವ ಬಗ್ಗೆ ರಷ್ಯಾ ಮತ್ತು ಉಕ್ರೇನ್ ನಡುವೆ ಒಪ್ಪಂದವಾಗಿತ್ತು.

## ಅಮೆರಿಕ ತಲುಪಿದ ಸರ್ವಪಕ್ಷ ನಿಯೋಗ; ಶಶಿ ತರೂರ್ ವಾದ ಕೇಳಿದವರಿಂದ ಪಾಕಿಸ್ತಾನಕ್ಕೆ ಹಿಡಿಶಾಪ!



**ನ್ಯೂಯಾರ್ಕ್ ಸಿಟಿ:** ಪಹಲ್ಗಾಮ್ ಭೀಕರ ಭಯೋತ್ಪಾದಕ ದಾಳಿ, ಅದಕ್ಕೆ ಪ್ರತಿಯಾಗಿ ಭಾರತದ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಮತ್ತು ಭಯೋತ್ಪಾದನೆಗೆ ಪಾಕಿಸ್ತಾನದ ಬೆಂಬಲವನ್ನು ಜಗತ್ತಿಗೆ ತೋರಿಸಲು ರಚಿಸಲಾದ ಒಟ್ಟು ಏಳು ಸರ್ವಪಕ್ಷ ಸಂಸದೀಯ ನಿಯೋಗ, ತಮ್ಮ

ಗಮ್ಯ ಸ್ಥಾನಗಳನ್ನು ತಲುಪಿವೆ. ಸಂಸದರು ಮತ್ತು ರಾಜತಾಂತ್ರಿಕರು ಭಾರತದ ವಾದವನ್ನು ಜಗತ್ತಿನ ಮುಂದೆ ಸಮರ್ಥವಾಗಿ ಮಂಡಿಸುತ್ತಿದ್ದಾರೆ.

ಅದರಂತೆ ಅಮೆರಿಕದ ನ್ಯೂಯಾರ್ಕ್ ತಲುಪಿರುವ ಕಾಂಗ್ರೆಸ್ ಸಂಸದ ಶಶಿ ತರೂರ್ ನೇತೃತ್ವದ ಸಂಸದೀಯ ನಿಯೋಗ, ಭಯೋತ್ಪಾದನೆಗೆ ಪಾಕಿಸ್ತಾನ ನೀಡುತ್ತಿರುವ ಬೆಂಬಲವನ್ನು ಅಮೆರಿಕನ್ನರಿಗೆ ಮನದಟ್ಟು ಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದೆ. ನ್ಯೂಯಾರ್ಕ್ ಸಿಟಿಯಲ್ಲಿ ಮಾತನಾಡಿದ ಶಶಿ ತರೂರ್, ಭಯೋತ್ಪಾದನೆ ವಿರುದ್ಧದ ಭಾರತದ ಹೋರಾಟವನ್ನು ಎಳೆಎಳೆಯಾಗಿ ಬಿಚ್ಚಿಟ್ಟರು.

ಶಶಿ ತರೂರ್ ಅವರು ಭಾರತದ ದೃಷ್ಟಿಕೋನವನ್ನು ಜಗತ್ತಿಗೆ ತಿಳಿಸಲು ಅಮೆರಿಕಕ್ಕೆ ನಿಯೋಗದೊಂದಿಗೆ ಬಂದಿದ್ದಾರೆ. ಈ ನಿಯೋಗವು ಅಮೆರಿಕದಲ್ಲಿರುವ ರಾಜಕೀಯ ನಾಯಕರನ್ನು ಮತ್ತು ವಿದೇಶಾಂಗ ನೀತಿ ತಜ್ಞರನ್ನು ಭೇಟಿಯಾಗಲಿದೆ. ಮಾಧ್ಯಮದವರೊಂದಿಗೆ ಮತ್ತು ಸಾರ್ವಜನಿಕರೊಂದಿಗೆ ಈ ನಿಯೋಗ ಮಾತನಾಡಲಿದೆ. ಇತ್ತೀಚೆಗೆ ನಡೆದ ಪಹಲ್ಗಾಮ್ ಭಯಾನಕ ಭಯೋತ್ಪಾದಕ ದಾಳಿಯ ಬಗ್ಗೆ ಜಗತ್ತಿಗೆ ತಿಳಿಸುವುದು ಈ ನಿಯೋಗದ ಮುಖ್ಯ ಉದ್ದೇಶವಾಗಿದೆ.

ನ್ಯೂಯಾರ್ಕ್‌ನಲ್ಲಿ ನಡೆದ ಸಭೆಯನ್ನುದ್ದೇಶಿಸಿ ಮಾತನಾಡಿದ ಶಶಿ ತರೂರ್, "ಭಯೋತ್ಪಾದನೆಯ ವಿರುದ್ಧ ಜಗತ್ತು ಒಟ್ಟಾಗಿ ಹೋರಾಡುವ ಸಮಯ ಬಂದಿದೆ. ಭಯೋತ್ಪಾದನೆಗೆ ಬೆಂಬಲ ನೀಡುವ ರಾಷ್ಟ್ರಗಳನ್ನು ಗುರುತಿಸಿ, ಅವುಗಳನ್ನು ಜಾಗತಿಕ ವೇದಿಕೆಯಿಂದ ದೂರ ಇಡುವುದು ಇಂದಿನ ತುರ್ತು ಅಗತ್ಯ" ಎಂದು ಪಾಕಿಸ್ತಾನದ ವಿರುದ್ಧ ವಾಗ್ದಾಳಿ ನಡೆಸಿದರು. ಭಾರತದ ಸರ್ವಪಕ್ಷ ಸಂಸದೀಯ ನಿಯೋಗ ರಚನೆ ನಿರ್ಧಾರ ಪಾಕಿಸ್ತಾನದ ನಿದ್ದೆಗೆಡಿಸಿದೆ.

## ಚಿಕ್ಕಮಗಳೂರಲ್ಲಿ ಬಾಗಿನ ನಿರಾಕರಿಸಿದ ಲಕ್ಷ್ಮೀ ಹೆಬ್ಬಾಳ್ಕರ್!



**ಚಿಕ್ಕಮಗಳೂರು:** ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರೊಂದಿಗೆ ಬೆಳಗಾವಿ ಅಧಿವೇಶನದಲ್ಲಿ ನಡೆದ ಜಟಾಪಟಿ ಬಳಿಕ ಮೊದಲ ಬಾರಿಗೆ ಚಿಕ್ಕಮಗಳೂರು ನಗರಕ್ಕೆ ಭೇಟಿ ನೀಡಿದ್ದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಬಿಜೆಪಿ ಮಹಿಳಾ ಮೋರ್ಚಾ ಕಾರ್ಯಕರ್ತೆಯರು ಬಾಗಿನ ನೀಡಲು ಮುಂದಾದರು. ಈ ವಿಷಯ ತಿಳಿದ ಲಕ್ಷ್ಮೀ ಹೆಬ್ಬಾಳ್ಕರ್ ಅವರು, ಕಾರು ನಿಲ್ಲಿಸದೆ ತೆರಳುವ ಮೂಲಕ ಬಾಗಿನ ನಿರಾಕರಿಸಿದರು.

ಶನಿವಾರ ನಗರದಲ್ಲಿ ವೀರಶೈವ ಲಿಂಗಾಯುತ ಸಮಾಜ ಆಯೋಜಿಸಿದ್ದ ಬಸವಣ್ಣ ಹಾಗೂ ರೇಣುಕಾಚಾರ್ಯ ಜಯಂತಿ ಮತ್ತು ಗ್ಯಾರಂಟಿ ಫಲಾನುಭವಿಗಳ ಸಮಾವೇಶದಲ್ಲಿ ಭಾಗವಹಿಸಲು ಸಚಿವರು ಬಂದಿದ್ದರು. ಈ ವೇಳೆ ಬಿಜೆಪಿ ಮಹಿಳಾ ಕಾರ್ಯಕರ್ತೆಯರು ಅರಿಶಿನ–ಕುಂಕುಮ, ಹೂ, ಕಾಯಿ, ಎಲೆ, ಅಕ್ಕಿ–ಬೆಲ್ಲ, ಬಾಳೆಹಣ್ಣು, ಲಕ್ಷ್ಮಿ ವಿಗ್ರಹ ಹಿಡಿದು ಪ್ರವಾಸಿ ಮಂದಿರದ ಗೇಟ್ ಬಳಿ ಒಂದು ಗಂಟೆಗೂ ಹೆಚ್ಚು ಕಾಲ ಕಾದಿದ್ದರು. ಅದೇ ಮಾರ್ಗದಲ್ಲಿ ಸಾಗಿದ ಸಚಿವರು, ಕಾರು ನಿಲ್ಲಿಸಲಿಲ್ಲ.

ಇದರಿಂದ ಅಸಮಾಧಾನಗೊಂಡ ಬಿಜೆಪಿ ಮಹಿಳಾ ಕಾರ್ಯಕರ್ತೆಯರು, ನಮ್ಮೂರಿಗೆ ಬಂದ ಹೆಣ್ಣು ಮಗಳಿಗೆ ಹಿಂದೂ ಸಂಪ್ರದಾಯದ ಪ್ರಕಾರ ಅರಿಶಿನ–ಕುಂಕುಮ ನೀಡಲು ಹೋಗಿದ್ದೆವು. ಆದರೆ, ಅವರು ಬಾಗಿನ ಬಿಟ್ಟು ಹೋಗಿದ್ದು ಇದು ಅವರಿಗೆ ಶೋಭೆ ತರುವುದಿಲ್ಲ ಎಂದರು. ಈ ವಿಚಾರಕ್ಕೆ ಪ್ರತಿಕ್ರಿಯಿಸಿದ ಲಕ್ಷ್ಮಿ ಹೆಬ್ಬಾಳ್ಕರ್, ಸದನದಲ್ಲಿ ಮರ್ಯಾದೆ ಕಳೆದು, ಮಾಡಬಾರದ ಅವಮಾನ ಮಾಡಿದ್ದಾರೆ. ಈಗ ಸೋಗಿನ ಬಾಗಿನದ ಅವಶ್ಯಕತೆ ನನಗೆ ಇಲ್ಲ ಎಂದರು.

ಬೆಳಗಾವಿ ವೈದ್ಯಕೀಯ ವಿದ್ಯಾರ್ಥಿನಿ ಮೇಲಿನ ಅತ್ಯಾಚಾರವನ್ನು ಖಂಡಿಸುತ್ತೇನೆ. ಇದು ಕ್ಷಮೆ ಇಲ್ಲದ ತಪ್ಪು. ಆರೋಪಿಗಳಿಗೆ ಕಠಿಣ ಶಿಕ್ಷೆಯಾಗಬೇಕು. ಈಗಾಗಲೇ ಮೂವರನ್ನು ಪೊಲೀಸರು ಬಂಧಿಸಿದ್ದಾರೆ.

## ಮೀನುಗಾರಿಕೆ ಇಲಾಖೆ: ಮನೆ ನಿರ್ಮಾಣಕ್ಕೆ ಸಹಾಯಧನ ಪಡೆಯಲು ಅರ್ಜಿ ಆಹ್ವಾನ

**ಬಳ್ಳಾರಿ:** ಮೀನುಗಾರಿಕೆ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನ ವಸತಿರಹಿತ ಮೀನುಗಾರರಿಗೆ ಸರ್ಕಾರದ ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳನ್ನು ನಿರ್ಮಿಸಲು ಸಹಾಯಧನ ನೀಡಲಾಗುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಬಳ್ಳಾರಿ ಜಿಲ್ಲೆಯ ಕಂಪ್ಲಿ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ, ಸಿರುಗುಪ್ಪ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ, ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಕ್ಷೇತ್ರ–ಕ್ಕೆ 25 ಮನೆ, ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರ–ಕ್ಕೆ 25 ಮನೆ ಮತ್ತು ಸಂಡೂರು ವಿಧಾನಸಭಾ ಕ್ಷೇತ್ರಕ್ಕೆ 25 ಮನೆಗಳು ಸೇರಿ ಒಟ್ಟು ಜಿಲ್ಲೆಗೆ 125 ಮನೆಗಳನ್ನು ಹಂಚಿಕೆ ಮಾಡಲಾಗಿದೆ. ಅರ್ಜಿಗಳನ್ನು ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ (ಬಳ್ಳಾರಿ, ಸಿರುಗುಪ್ಪ, ಕಂಪ್ಲಿ ವಿಧಾನಸಭಾ ಕ್ಷೇತ್ರ) ಮತ್ತು ಸಂಡೂರು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗಳಲ್ಲಿ ಪಡೆದುಕೊಳ್ಳಬಹುದು.

ಭರ್ತಿ ಮಾಡಿ ಅರ್ಜಿಗಳಲ್ಲಿ ಇದೇ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದೆ ಎಂದು ಮೀನುಗಾರಿಕೆ ಉಪ ನಿರ್ದೇಶಕ ಶಿವಣ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಳಿತಪ್ಪಿದ ವಾಸ್ಕೋಡಾಗಾಮಾ ಯಶವಂತಪುರ ರೈಲಿನ ಬೋಗಿ: ಹಲವು ರೈಲು ಸಂಚಾರದಲ್ಲಿ ವ್ಯತ್ಯಯ



ಹಾಸನ: ಜಿಲ್ಲೆಯಲ್ಲಿ ಪೂರ್ವ ಮುಂಗಾರು ಮಳೆ ಅಬ್ಬರ ಜೋರಾಗಿದ್ದು, ಎಲ್ಲೆಡೆ ಮಲೆನಾಡಿನ ವಾತಾವರಣ ಸೃಷ್ಟಿಸಿದೆ.

ಅವಧಿಗೂ ಮುನ್ನವೇ ಯಗಚಿ ಜಲಾಶಯ ಭರ್ತಿಯಾಗಿ ಶುಭಸೂಚನೆ ನೀಡಿದೆ. ಹೇಮಾವತಿ ಜಲಾಶಯದ ಒಳಹರಿವಿನ ಪ್ರಮಾಣ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದೆ. ಜಿಲ್ಲೆಯಲ್ಲಿ ಸಂಪೂರ್ಣ ಮೋಡ ಕವಿದ ವಾತಾವರಣ ನಡುವೆ ಪ್ರಾರಂಭವಾಗುವ ಮಳೆ ಗಂಟೆಗಟ್ಟಲೆ ಸುರಿದು ಮುಂಗಾರು ಮಳೆಯನ್ನು ನೆನಪಿಸುತ್ತಿದೆ.

ಕಳೆದ ಮೂರು ದಿನದಿಂದ ಸುರಿಯುತ್ತಿರುವ ಮಳೆಯಿಂದ ಬೇಲೂರು ತಾಲೂಕಿನ ಚಿಕ್ಕಬ್ಯಾಡಗೆರೆ ಗ್ರಾಮದಲ್ಲಿರುವ ಯಗಚಿ ಜಲಾಶಯ ಭರ್ತಿಯಾಗಿದೆ. 3.60 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿರುವ ಜಲಾಶಯದಿಂದ ಸದ್ಯ 500 ಕ್ಯುಸೆಕ್ ನೀರನ್ನು 5 ಕ್ರಸ್ಟ್‌ಗೇಟ್‌ಗಳ ಮೂಲಕ ಯಗಚಿ ನದಿಗೆ ಹಾಗೂ 70 ಕ್ಯುಸೆಕ್ ನೀರನ್ನು ಎಡದಂಡೆ ನಾಲೆಗೆ ಹರಿ ಬಿಡಲಾಗುತ್ತಿದೆ. ಜಲಾಶಯದ ಗರಿಷ್ಠ ಮಟ್ಟ 3.162.92 ಅಡಿಗಳಾಗಿದ್ದು, ಶುಕ್ರವಾರ ನೀರಿನ ಮಟ್ಟ 3.160.10 ಅಡಿಗೆ ಹೆಚ್ಚಳವಾಗಿದೆ. ಜಲಾಶಯಕ್ಕೆ 485 ಕ್ಯುಸೆಕ್ ನೀರು ಹರಿದು ಬರುತ್ತಿದೆ.

ಚಿಕ್ಕಮಗಳೂರು ಹಾಗೂ ಮೂಡಿಗೆರೆ ಭಾಗದಲ್ಲಿ ಮಳೆ ಆರ್ಭಟ ಹೆಚ್ಚಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಜೀವನಾಡಿ ಹೇಮಾವತಿ ಜಲಾಶಯಕ್ಕೆ ಒಳಹರಿವಿನ ಪ್ರಮಾಣ ಗಣನೀಯವಾಗಿ ಏರಿಕೆಯಾಗುತ್ತಿದೆ. ಮೇ 23 ರಂದು ಕೇವಲ 109 ಕ್ಯುಸೆಕ್ ಇದ್ದ ಒಳಹರಿವು , ಒಂದು ದಿನದಲ್ಲಿ 265 ಕ್ಯುಸೆಕ್‌ಗೆ ಹೆಚ್ಚಳ ಕಂಡಿದೆ.

ಜಿಲ್ಲೆಯಲ್ಲಿ ಮುಂದಿನ ನಾಲ್ಕು ದಿನ ಚದುರಿದಂತೆ ಬಿರುಗಾಳಿ ಜತೆಗೆ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹಾನುಬಾಳು ಭಾಗದಲ್ಲಿ15.2, ಹೆತ್ತೂರು ಭಾಗದಲ್ಲಿ 15 ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ.

ಶಿರಾಡಿಘಾಟಿಯಲ್ಲಿ ಶನಿವಾರ ಮಧ್ಯಾಹ್ನ ಧಾರಾಕಾರ ಮಳೆ ಸುರಿದು ಹೆದ್ದಾರಿ ಸಂಚಾರ ಸಂಪೂರ್ಣ ಅಸ್ತವ್ಯಸ್ಥಗೊಂಡಿತ್ತು. ಸಂಪೂರ್ಣ ಮೋಡಕವಿದ ವಾತಾವರಣ ಜತೆಗೆ ಅಪೂರ್ಣ ಕಾಮಗಾರಿಯಿಂದ ವಾಹನ ಚಾಲಕರನ್ನು ಹೈರಾಣಾಗಿಸಿತು. ಸಕಲೇಶಪುರ ಸೇರಿದಂತೆ ಹಾಸನ, ಆಲೂರು, ಬೇಲೂರು, ಅರಕಲಗೂಡು, ಚನ್ನರಾಯಪಟ್ಟಣ ತಾಲೂಕಿನಲ್ಲೂಉತ್ತಮ ಮಳೆಯಾಗಿದೆ.

## ದ್ವಿತೀಯ ಮಹಾಯುದ್ಧದ ಬಳಿಕ ಇದೇ ಮೊದಲ ಬಾರಿಗೆ ಹೊರದೇಶದಲ್ಲಿ ಜರ್ಮನ್ ಸೇನೆ; ಲಿಥುವೇನಿಯಾದಲ್ಲಿ 'ಬರ್ಲಿನ್ ಬ್ರಿಗೇಡ್'



**ಬರ್ಲಿನ್:** ದ್ವಿತೀಯ ಮಹಾಯುದ್ಧದ ಬಳಿಕ ಇದೇ ಮೊದಲ ಬಾರಿಗೆ, ಜರ್ಮನಿಯು ತನ್ನ ಸೈನ್ಯ ತುಕಡಿಯೊಂದನ್ನು ಬೇರೊಂದು ದೇಶಕ್ಕೆ ರವಾನಿಸಿದೆ. ನ್ಯಾಟೋದ ಪೂರ್ವ ಭಾಗವನ್ನು ರಕ್ಷಿಸಲು "ಬರ್ಲಿನ್ ಬ್ರಿಗೇಡ್" ಹೆಸರಿನ ಶಾಶ್ವತ ಸೈನ್ಯ ಪಡೆಯನ್ನು, ಲಿಥುವೇನಿಯಾದಲ್ಲಿ ನಿಯೋಜನೆ ಮಾಡಲಾಗಿದೆ.


ಜರ್ಮನ್ ಚಾನ್ಸಲರ್ ಫ್ರೆಡ್ರಿಕ್ ಮೆರ್ಜ್ ಅವರು "ಬರ್ಲಿನ್ ಬ್ರಿಗೇಡ್" ನಿಯೋಜನೆ ಸಮಾರಂಭದಲ್ಲಿ ಭಾಗವಹಿಸಲು ಲಿಥುವೇನಿಯಾಗೆ ಭೇಟಿ ನೀಡಿದ್ದಾರೆ. ಬರ್ಲಿನ್ ಬ್ರಿಗೇಡ್ ತುಕಡಿಯು ನ್ಯಾಟೋ ಪೂರ್ವ ಭಾಗವನ್ನು ರಕ್ಷಿಸುವ ಜವಾಬ್ದಾರಿ ನಿಭಾಯಿಸಲಿದೆ. ಎರಡನೇ ಮಹಾಯುದ್ಧದ ನಂತರ ಜರ್ಮನಿಯ ಮೊದಲ ಶಾಶ್ವತ ವಿದೇಶಿ ಪಡೆ ನಿಯೋಜನೆ ಇದಾಗಿದೆ.

ಲಿಥುವೇನಿಯಾದಲ್ಲಿ ಬರ್ಲಿನ್ ಬ್ರಿಗೇಡ್‌ನ್ನು ಉದ್ಘಾಟಿಸಿ ಮಾತನಾಡಿದ ಜರ್ಮನಿ ಚಾನ್ಸಲರ್ ಫ್ರೆಡ್ರಿಕ್ ಮೆರ್ಜ್, "ರಷ್ಯಾ–ಉಕ್ರೇನ್ ಯುದ್ಧದ ನಡುವೆ ಬಾಲ್ಟಿಕ್ ಮಿತ್ರರಾಷ್ಟ್ರಗಳ ಭದ್ರತೆಯು ಅತ್ಯಂತ ಮಹತ್ವ ಪಡೆದು–ಕೊಂಡಿದೆ" ಎಂದು ಹೇಳಿದ್ದಾರೆ. ಮಿತ್ರರಾಷ್ಟ್ರಗಳು ಮಾಸ್ಕೋದ ವಿರುದ್ಧ ಯುರೋಪಿಯನ್ ರಕ್ಷಣೆಯನ್ನು ಹೆಚ್ಚಿಸುವ ಪ್ರಯತ್ನಗಳನ್ನು ವಿಸ್ತರಿಸಲು ಕರೆ ನೀಡಿರುವ ಮೆರ್ಜ್, ಲಿಥುವೇನಿಯಾದಲ್ಲಿ ಬರ್ಲಿನ್ ಬ್ರಿಗೇಡ್ ಸ್ಥಾಪನೆ ಇದಕ್ಕೆ ಉದಾಹರಣೆ ಎಂದು ಹೇಳಿದ್ದಾರೆ.

ಬರ್ಲಿನ್ ಬ್ರಿಗೇಡ್ ಸೈನ್ಯ ತುಕಡಿ ನಿಯೋಜನೆ ಸಮಾರಂಭವನ್ನು "ಐತಿಹಾಸಿಕ ದಿನ" ಎಂದು ಕರೆದಿರುವ ಲಿಥುವೇನಿಯಾದ ಅಧ್ಯಕ್ಷ ಗಿಟಾನಾಸ್ ನೌಸೆಡಾ, ಬಾಲ್ಟಿಕ್ ಮಿತ್ರರಾಷ್ಟ್ರಗಳ ಭದ್ರತೆಯ ದೃಷ್ಟಿಯಿಂದ ಇದೊಂದು ಮಹತ್ವದ ತೀರ್ಮಾನ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

## ಹೆರಿಗೆ ರಜೆ ಮಹಿಳಾ ಉದ್ಯೋಗಿಯ ಬದುಕಿನ ಹಕ್ಕು; ಮೂರನೇ ಹೆರಿಗೆಗೆ ರಜೆ ನಿರಾಕರಿಸುವಂತಿಲ್ಲ, ಐತಿಹಾಸಿಕ ತೀರ್ಪು ಪ್ರಕಟ

**ಹೊಸದಿಲ್ಲಿ:** ಹೆರಿಗೆ ರಜೆ ಮಹಿಳಾ ಉದ್ಯೋಗಿಯ ಸಂತಾನೋತ್ಪತ್ತಿ



ಹಕ್ಕು ಹಾಗೂ ಸಂವಿಧಾನದ 21ನೇ ವಿಧಿಯಡಿ ಜೀವಿಸುವ ಹಕ್ಕಿನ ಭಾಗವಾಗಿದೆ. ಎರಡನೇ ಮದುವೆಯಿಂದ ಮೂರನೇ ಮಗು ಪಡೆಯಲಾಗಿದೆ ಎಂಬ ಕಾರಣಕ್ಕೆ ಹೆರಿಗೆ ರಜೆ ನಿರಾಕರಿಸುವಂತಿಲ್ಲ ಎಂದು ಸುಪ್ರೀಂ ಕೋರ್ಟ್ ಐತಿಹಾಸಿಕ ತೀರ್ಪು ನೀಡಿದೆ.

ಮೂರನೇ ಮಗುವಿನ ಹೆರಿಗೆ ರಜೆ ಕುರಿತ ತೀರ್ಪು ನೀಡಿದ ನ್ಯಾಯಮೂರ್ತಿಗಳಾದ ಅಭಯ್ ಎಸ್. ಓಕಾ ಮತ್ತು ಉಜ್ಜಲ್ ಭುಯಾನ್ ಅವರಿದ್ದ ಪೀಠ, 'ಮಹಿಳಾ ಉದ್ಯೋಗಿ ಮೂರನೇ ಮಗುವಿಗೆ ಜನ್ಮ ನೀಡುತ್ತಿದ್ದಾಳೆ ಎಂಬ ಕಾರಣಕ್ಕೆ ಹೆರಿಗೆ ರಜೆ ನಿರಾಕರಿಸುವುದು ಸಂವಿಧಾನದ 21ನೇ ವಿಧಿಯಡಿ ಮೂಲಭೂತ ಹಕ್ಕುಗಳ ಉಲ್ಲಂಘನೆಯಾಗುತ್ತದೆ,' ಎಂದು ತೀರ್ಪಿತ್ತಿದೆ.

ತಮಿಳುನಾಡು ಸರಕಾರಿ ಶಾಲಾ ಶಿಕ್ಷಕಿಯೊಬ್ಬರು 2021ರಲ್ಲಿ ಎರಡನೇ ಮದುವೆಯಾದ ಬಳಿಕ ಮೂರನೇ ಬಾರಿ ಗರ್ಭ ಧರಿಸಿದ ಸಂದರ್ಭದಲ್ಲಿ ಹೆರಿಗೆ ರಜೆ ಕೋರಿ ಅರ್ಜಿ ಸಲ್ಲಿಸಿದ್ದರು. ಮೂರನೇ ಮಗುವಿನ ಹೆರಿಗೆಗೆ ರಜೆ ನೀಡಲು ಜಿಲ್ಲಾ ಶಿಕ್ಷಣ ಕಚೇರಿ ನಿರಾಕರಿಸಿತು. ತಮಿಳುನಾಡು ಮೂಲಭೂತ ನಿಯಮಾವಳಿಯ ನಿಯಮ 101(ಎ) ಪ್ರಕಾರ ಮಹಿಳಾ ಸರಕಾರಿ ನೌಕರರಿಗೆ ಎರಡು ಮಕ್ಕಳಿಗೆ ಹೆರಿಗೆ ರಜೆ ಪಡೆಯಲು ಅವಕಾಶವಿದೆ. ಹೀಗಾಗಿ ಮೂರನೇ ಮಗು ಪಡೆಯುತ್ತಿರುವ ಅರ್ಜಿದಾರರು ಹೆರಿಗೆ ರಜೆ ಪಡೆಯಲು ಅರ್ಹರಲ್ಲ ಎಂದು ತಿಳಿಸಿತು.

ಶಿಕ್ಷಣ ಇಲಾಖೆ ಕ್ರಮ ಪ್ರಶ್ನಿಸಿ ಶಿಕ್ಷಕಿ ಹೈಕೋರ್ಟ್ ಮೆಟ್ಟಿಲೇರಿದರು. ವಿಚಾರಣೆ ನಡೆಸಿದ ಹೈಕೋರ್ಟ್ ಏಕ ಸದಸ್ಯ ಪೀಠ ಮೊದಲ ಇಬ್ಬರು ಮಕ್ಕಳು ಸೇವೆಗೆ ಸೇರುವ ಮುನ್ನ ಜನಿಸಿವೆ. ಹೀಗಾಗಿ ಇಬ್ಬರು ಮಕ್ಕಳಿಗಷ್ಟೇ ಹೆರಿಗೆ ರಜೆ ಅನ್ವಯ ಎಂಬ ನಿಯಮ ಅನ್ವಯವಾಗುವುದಿಲ್ಲ ಎಂದು ಆದೇಶ ನೀಡಿತು. ಏಕಸದಸ್ಯ ಪೀಠದ ಆದೇಶ ಪ್ರಶ್ನಿಸಿ ಸರಕಾರ ಸಲ್ಲಿಸಿದ ಮೇಲ್ಮನವಿ ವಿಚಾರಣೆ ನಡೆಸಿದ ಹೈಕೋರ್ಟ್ ವಿಭಾಗೀಯ ಪೀಠ, 'ಮಾತೃತ್ವ ರಜೆ ಮೂಲಭೂತ ಹಕ್ಕಲ್ಲ. ಸೇವಾ ಷರತ್ತಿನನ್ವಯ ದೊರೆಯುವ ಹಕ್ಕಾಗಿದೆ,' ಎಂದು ವಿವರಿಸಿ ಹೆರಿಗೆ ರಜೆ ನಿರಾಕರಿಸಿತು.

# ಶಿಗ್ಲಿಯಲ್ಲಿ ಸಂಜೀವಿನಿ ಮಾಸಿಕ ಸಂತೆಗೆ ಚಾಲನೆ ತಾಪಂ ಇಒ ಕೃಷ್ಣಪ್ಪ ಧರ್ಮರವರಿಂದ ಚಾಲನೆ



**ಲಕ್ಷ್ಮೇಶ್ವರ** : ಗ್ರಾಮೀಣ ಪ್ರದೇಶಗಳ ಸಂಜೀವಿನಿ ಮಹಿಳಾ ಗುಂಪಿನ ಸದಸ್ಯರು ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಉತ್ತೇಜನ, ಕಲ್ಪಿಸುವ ಉದ್ದೇಶದಿಂದ ಈ ಮಾಸಿಕ ಸಂತೆಗೆ ಚಾಲನೆ ನೀಡಲಾಗಿದೆ ಎಂದು ತಾಲೂಕ ಪಂಚಾಯತ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಅವರು ಹೇಳಿದರು.

ತಾಲೂಕಿನ ಶಿಗ್ಲಿ ಗ್ರಾಮ ಪಂಚಾಯತ ಆವರಣದಲ್ಲಿ ಗ್ರಾಮ ಪಂಚಾಯತ ಮತ್ತು ಗ್ರಾಮ ಪಂಚಾಯತ ಮಟ್ಟದ ಸಂಜೀವಿನಿ ಒಕ್ಕೂಟದ ಸಹಯೋಗದಲ್ಲಿ ತಾಲ್ಲೂಕ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ ಕಾರ್ಯಕ್ರಮಕ್ಕೆ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಮಾಸಿಕ ಸಂತೆಯ ಆಯೋಜನೆ ಮೂಲಕ ಮಹಿಳಾ ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಸಂಪರ್ಕ ಹಾಗೂ ಉತ್ಪಾದಕರಿಂದ ನೇರವಾಗಿ ಗ್ರಾಹಕರಿಗೆ ಉತ್ಪನ್ನಗಳನ್ನು ಪರಿಚಯಿಸುವುದು, ಹೆಚ್ಚು ಹೆಚ್ಚು ಮಹಿಳೆಯರು ಸ್ವಾವಲಂಬಿಗಳಾಗಲು ಉಪಯುಕ್ತವಾಗಿದೆ ಎಂದು ತಿಳಿಸಿದರು. ಮಹಿಳೆಯರು

ಮಾಸಿಕ ಸಂತೆಯಲ್ಲಿ ತಮ್ಮ ಉತ್ಪನಗಳ ಮಾರಾಟ ಮಾಡಲು ಮುಂದೆ ಬರಬೇಕು ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅಥಿತಿಗಳಾಗಿ ಆಗಮಿಸಿದ ಗ್ರಾಮ ಪಂಚಾಯತಿ ಸದಸ್ಯರಾದ ಯಲ್ಲಪ್ಪ ತಳವಾರ ಮಾತನಾಡಿ, ಮಹಿಳಾ ಸ್ವಸಹಾಯ ಗುಂಪುಗಳ ತಯಾರಿಸಿದ ಉತ್ಪನ್ನಗಳನ್ನು ಮಾರಾಟ ಮಾಡಲು ಮೂಲಕ ಆರ್ಥಿಕವಾಗಿ ಸಶಕ್ತರಾಗಲು ಸಹಾಯಕಾರಿ ಆಗಿದೆ ಎಂದರು.

ಗ್ರಾಮ ಪಂಚಾಯತ ಅಧ್ಯಕ್ಷೆ ಸಂಗೀತಾ ಪೂಜಾರ ಅಧ್ಯಕ್ಷತೆ ವಹಿಸಿದ್ದರು. ಗ್ರಾಮ ಪಂಚಾಯತ ಸದಸ್ಯರ ಬಸಪ್ಪ ಕರ್ಜಗಿ, ಆಕಳಂಡಪ್ಪ ಕರ್ಜಕಣ್ಣವರ, ಶೈಲಾ ಹೂಗಾರ, ರೇಣುಕಾ ಆತಡಕರ, ಸಂತೋಷ ತಾಂದಳ, ಲಲಿತಾ ತವರಿ, ಜಯಶ್ರೀ ಕರ್ಜಗಿ, ಶಿವಪ್ಪ ಕುರಿ, ಗ್ರಾಮದ ಪ್ರಮುಖರಾದ ಮಂಜುನಾಥ ಮಹೇಂದ್ರಕರ, ಕುಮಾರಸ್ವಾಮಿ ವಿಕ್ತಕಮಠ, ಗ್ರಾಪಂ ಅಭಿವೃದ್ಧಿ ಅಧಿಕಾರಿ ರವಿ ಕೊರಕನವರ, ಸಂಜೀವಿನಿ ಯೋಜನೆ ಒಕ್ಕೂಟದ ಅಧ್ಯಕ್ಷೆ ನೇತ್ರಾವತಿ ಮಹೀಂದ್ರಕರ, ವಲಯ ಮೇಲ್ವಿಚಾರಕರಾದ ಬಸವರಾಜ ಗುತ್ತೆದ್ದಾರ, ಪಿ.ಎಂ ಪಾಟೀಲ ಮತ್ತು ಸಂಜೀವಿನಿ ಯೋಜನೆ ಒಕ್ಕೂಟದ ಪದಾಧಿಕಾರಿಗಳು, ಸಿಬ್ಬಂದಿ ಮತ್ತು ಸ್ವ–ಸಹಾಯ ಗುಂಪಿನ ಸದಸ್ಯರು ಉಪಸ್ಥಿತರಿದ್ದರು.

ತಾಲೂಕ ಕಾರ್ಯಕ್ರಮ ವ್ಯವಸ್ಥಾಪಕ ಮಾರುತಿ ಕೊಡ್ಲಿ ಸ್ವಾಗತಿಸಿದರು. ತಾಲೂಕು ವ್ಯವಸ್ಥಾಪಕ ವಿರೂಪಾಕ್ಷ ಕೊನ್ನಣವರ ನಿರೂಪಿಸಿ ಮತ್ತು ವಂದಿಸಿದರು.

ಮಾರಟಕ್ಕಿರುವ ದಿನಬಳಕೆ ವಸ್ತುಗಳು...
ಹಪ್ಪಳ, ಕೊಡಬಳಿ, ಚಕ್ಕಲಿ ಉಪ್ಪಿನಕಾಯಿ, ಶೇಂಗಾ ಮತ್ತು ಅಗಸಿ ಚಟ್ನಿ, ಖಾರದ ಪುಡಿ,
ಶೇಂಗಾ ಹೋಳಿಗೆ, ಶಂಕರ ಪಾಳೆ, ಚಿಪ್ಸ್, ಸೋಯಾಬಿನ್, ಶಿಗ್ಲಿ ಸೀರೆ, ಚಿಕ್ಕ ಮಕ್ಕಳ ಉಡುಪುಗಳು, ಗೃಹೋಪಯೋಗಿ ಅಲಂಕಾರಿಕ ವಸ್ತುಗಳು, ರಂಗೋಳಿ ಅಚ್ಚುಗಳು, ಮಣ್ಣಿನ ತಯಾರಿಸಿದ ಆಹಾರ ತಯಾರಿಕ ವಸ್ತುಗಳು ಸೇರಿ ಇತರ ಉತ್ಪನ್ನಗಳು ಮಾರಟಕ್ಕೆ ಇಡಲಾಗಿದೆ.

# ಬಸಾಪುರದಲ್ಲಿ ಮಕ್ಕಳಿಗೆ ಹೂ ನೀಡಿ ಸ್ವಾಗತ



**ದಾವಣಗೆರೆ:** ಬಸಾಪುರ ವಾರ್ಡ್ ನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 2025 – 26ನೇ ಸಾಲಿನ ಶೈಕ್ಷಣಿಕ ವರ್ಷದ ಆರಂಭದ ಪ್ರಯುಕ್ತ ಮಕ್ಕಳಿಗೆ ಗುಲಾಬಿ ಹೂ ನೀಡಿ ಸ್ವಾಗತ ಕೋರಲಾಯಿತು.

ಸಂಸದರ ಆಪ್ತ ಸಹಾಯಕ ಹರೀಶ್ ಕೆ.ಎಲ್. ಬಸಾಪುರ ಮಕ್ಕಳಿಗೆ ಗುಲಾಬಿ ಹೂ ನೀಡುವ ಮೂಲಕ ಸ್ವಾಗತ ಕೋರಿದರು.ಈ ವೇಳೆ ಎಸ್ ಡಿಎಂಸಿ ಅಧ್ಯಕ್ಷ ಗುರುಸ್ವಾಮಿ ಹಾಗೂ ಶಿಕ್ಷಕವೃಂದದವರು ಉಪಸ್ಥಿತರಿದ್ದರು.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಯು.ಪಿ.ಎಸ್ ನಾಗರಿಕ ಸೇವ ಮತ್ತು ಬ್ಯಾಂಕಿಂಗ್ ಪಿ.ಓ.ಸರ್ಧಾತ್ಮಕ ಪರೀಕ್ಷೆಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2025–26 ನೇ ಸಾಲಿನಲ್ಲಿ ಉಚಿತ ಪರೀಕ್ಷಾ ಪೂರ್ವ ತರಬೇತಿಗೆ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಸಲ್ಲಿಸಲು ಜೂನ್ 15 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ <http://bcwd.karnataka.gov.in/> or sevasindhuservices.karnataka.gov.in <http://sevasindhuservices.karnataka.gov.in/> ವೆಬ್‌ಸೈಟ್ ಮೂಲಕ (ದೂ 8050370006) ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಟ್ಟೇದ ಅಂಚು ಸೀರೆಗಳು ಮತ್ತು ಬಟ್ಟೆಗಳಿಗೆ ಅಧಿಕೃತ ಬಳಕೆದಾರ ನೋಂದಣಿ ಸೌಲಭ್ಯ ಸಂಯೋಜಿಸುವ ಕುರಿತು.

**ಗದಗ** : ಪಟ್ಟೇದ ಅಂಚು ಸೀರೆಗಳು ಮತ್ತು ಬಟ್ಟೆಗಳಿಗೆ ಜಿಯಾಗ್ರಾಫಿಕಲ್ ಇಂಡಿಕೇಶನ್ ಅರ್ಜಿಯನ್ನು ಗಜೇಂದ್ರಗಡ ತಾಲ್ಲೂಕಿನ ಮೂಲ ನೇಕಾರರನ್ನು ಉಭಯ ಕಾನೂನುಬದ್ಧ ಪಾಲಕರು ಮತ್ತು ಉತ್ಪಾದಕರು ಎಂದು ಔಪಚಾರಿಕವಾಗಿ ಗುರುತಿಸಲು ಮತ್ತು ನೋಂದಾಯಿಸಲು ಅಧಿಕೃತ ಬಳಕೆದಾರ ನೋಂದಣಿಯ ಸೌಲಭ್ಯವನ್ನು 4 ಜೂನ್ 2025 ಸಮಯ: ಮಧ್ಯಾಹ್ನ 12:00 ರಿಂದ ಸಂಜೆ 6:00 ರವರೆಗೆ ಗಜೇಂದ್ರಗಡ ನೇಕಾರರ ಸಹಕಾರಿ ಉತ್ಪಾದಕ ಸಂಘ ನಿಯಮಿತದ ಆವರಣ, ಗಜೇಂದ್ರಗಡ ತಾಲ್ಲೂಕು, ಗದಗ ಜಿಲ್ಲೆ ಇಲ್ಲಿ ಸಂಯೋಜಿಸಲಾಗುತ್ತಿದೆ.

ನೋಂದಣಿಗೆ ಅಗತ್ಯವಿರುವ ದಾಖಲೆಗಳು: ಶಾಶ್ವತ ವಸತಿ ವಿಳಾಸ ಪುರಾವೆ (ಆಧಾರ ಕಾರ್ಡ್ ಅಥವಾ ಮತದಾರರ ಗುರುತಿನ ಚೀಟಿ)ಇಲಾಖೆಯಿಂದ ನೀಡಿದ ಕೈಮಗ್ಗ ನೇಕಾರ ಗುರುತಿನ ಚೀಟಿ ಪೆಹೆಚಾನ್ ಕಾರ್ಡ, ಅರ್ಜಿದಾರರ 02 ಪಾಸ್ ಪೋರ್ಟ ಸೈಜ್ ಭಾವಚಿತ್ರ ಸಲ್ಲಿಸಬೇಕು. ನೇಕಾರರು ಖುದ್ದಾಗಿ ಹಾಜರಿರಬೇಕು. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಛೇರಿ ಕೈಮಗ್ಗ ಮತ್ತು ಜವಳಿ ಇಲಾಖೆ ಕೊಠಡಿ ಸಂಖ್ಯೆ 206, 2ನೇ ಮಹಡಿ ಜಿಲ್ಲಾ ಪಂಚಾಯತ್ ಗದಗ ದೂ ಸಂ:9916582238 ಹಾಗೂ ಅಧ್ಯಕ್ಷರು/ಕಾರ್ಯದರ್ಶಿಗಳು ಗಜೇಂದ್ರಗಡ ನೇಕಾರರ ಉತ್ಪಾದಕ ಸಂಘ ನಿ. ಗಜೇಂದ್ರಗಡ ದೂ ಸಂ:9916119489 ಇವರನ್ನು ಸಂಪರ್ಕಿಸಬಹುದಾಗಿದೆ.ಗಜೇಂದ್ರಗಡ ತಾಲೂಕಿನ ಉತ್ಪಾದಕರು ಭಾಗವಹಿಸಿ ಅವಕಾಶವನ್ನು ಪಡೆದುಕೊಳ್ಳಬಹುದಾಗಿದೆ.

## ಆನವಟ್ಟಿ ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ:** ಮೆಸ್ಕಾಂ ಆನವಟ್ಟಿ ಉಪವಿಭಾಗ ಕಛೇರಿಯಲ್ಲಿ ಜೂ. 02 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನ ಸಂಪರ್ಕ ಸಭೆ ನಡೆಯಲಿದೆ. ಮೆಸ್ಕಾಂನ ಈ ಸಭೆಯಲ್ಲಿ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ. ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ ;9448998783.


## ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡಿರುವ ಮೈಸೂರು ಸಿದ್ಧಾರ್ಥನಗರದ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ) ಸಂಸ್ಥೆಯಲ್ಲಿ ಬ್ಯಾಚುಲರ್ ಆಫ್ ವಿಜ್ಯುಯಲ್ ಆರ್ಟ್ಸ್ (ನಾಲ್ಕು ವರ್ಷದ ಎಂಟು ಸೆಮಿಸ್ಟರ್‌ಗಳ ಎಸ್.ಇ.ಪಿ. ಪದ್ಧತಿ) ದೃಶ್ಯಕಲೆಯಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಬಿ.ವಿ.ಎ. ಪದವಿ ಪ್ರವೇಶಕ್ಕಾಗಿ ದ್ವಿತೀಯ ಪಿ.ಯು.ಸಿ.ಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಂದ ಆನ್‌ಲೈನ್ (ಯುಯುಸಿಎಂಎಸ್) ಮೂಲಕ ಜೂನ್ 10 ರವರೆಗೆ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಈ ಪದವಿಯು 3ನೇ ಸೆಮಿಸ್ಟರ್‌ನಿಂದ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್ ಕಲೆ (ಅಚ್ಚುಕಲೆ), ಅನ್ವಯ ಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕ ಪದವಿಯಾಗಿದೆ. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ htts;//uucms.karnataka.gov.in <http://uucms.karnataka.gov.in/> ಅಂತರ್ಜಾಲ ವಿಳಾಸದ <https://www.cavamysore.karnataka.gov.in/> ಮೂಲಕವೇ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪ್ರವೇಶಕ್ಕಾಗಿ ಅರ್ಹತಾ ಪರೀಕ್ಷೆಯ ದಿನಾಂಕ ಮತ್ತು ಇತರೆ ಮಾಹಿತಿಯನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗೆ ಕಾವಾ ಕಾರ್ಯಾಲಯದ ಸಹಾಯವಾಣಿಗೆ (0821–2438931) ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆರೆ–ತೊರೆಗಳಲ್ಲಿ ಮೀನುಗಾರಿಕೆ ನಿಷೇಧ

**ಚಿಕ್ಕಮಗಳೂರು:** ಒಳನಾಡು ಮೀನುಗಾರಿಕೆ ಜಲಸಂಪನ್ಮೂಲಗಳ ವಿಲೇವಾರಿ ಕಾರ್ಯನೀತಿಯಂತೆ ಮುಂಗಾರು ಮಳೆಗಾಲದ ಅವಧಿಯಲ್ಲಿ ಮೀನುಗಳ ವಂಶಾಭಿವೃದ್ಧಿ ಚಟುವಟಿಕೆಗಳು ನಡೆಯುವುದರಿಂದ 2025ನೇ ಜೂನ್ 1 ರಿಂದ ಜುಲೈ 31 ರವರೆಗೆ ಒಟ್ಟು 61 ದಿನ ಜಿಲ್ಲೆಯು ಎಲ್ಲಾ ಸರ್ವ ಋತು ಕರೆಗಳು, ಜಲಾಶಯಗಳು, ತೊರೆ ಮತ್ತು ನದಿಗಳಲ್ಲಿ ಮೀನು ಹಿಡಿಯುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. 2025ನೇ ಆಗಸ್ಟ್ ತಿಂಗಳಿಂದ ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆ ಚಟುವಟಿಕೆ ನಡೆಸಲು ಪರವಾನಿಗೆ ನೀಡಲಾಗುವುದು. ಜಿಲ್ಲೆಯ ಜಲಾಶಯ ಮತ್ತು ನದಿ ಭಾಗಕ್ಕೆ ಪರವಾನಿಗೆ ಪಡೆಯುವವರು ಸಂಬಂಧಪಟ್ಟ ತಾಲ್ಲೂಕುಗಳ ಮೀನುಗಾರಿಕೆ ಸಹಾಯಕ ನಿರ್ದೇಶಕರಿಗೆ ಅರ್ಜಿ ಸಲ್ಲಿಸಬಹುದು ಎಂದು ಮೀನುಗಾರಿಕೆ ಉಪನಿರ್ದೇಶಕರು (ಜಿ.ಪಂ.) ತಿಳಿಸಿದ್ದಾರೆ.

# ಕುರುಬರ ಸಂಘದ ಜಿಲ್ಲಾಧ್ಯಕ್ಷಕೆ.ಎಸ್. ಶಾಂತೇಗೌಡರಿಗೆ ನೂತನ ನಿರ್ದೇಶಕರಿಂದ ಸನ್ಮಾನ–ಅಭಿನಂದನೆ



**ಚಿಕ್ಕಮಗಳೂರು:** ಜಿಲ್ಲಾಕುರುಬರ ಸಂಘಕ್ಕೆ ನೂತನಅಧ್ಯಕ್ಷರಾಗಿಅವಿರೋಧಆಯ್ಕೆಯಾಗಿ ರುವಕೆ.ಎಸ್. ಶಾಂತೇಗೌಡಅವರನ್ನುಇಂದು ಸಂಘದ ನೂತನ ನಿರ್ದೇಶಕರುಗಳು ಸನ್ಮಾನಿಸಿ ಗೌರವಿಸಿದರು.

ಇಂದುಇಲ್ಲಿನ ಕನಕ ಭವನದಲ್ಲಿಕುರುಬರ ಸಂಘದಿಂದಏರ್ಪಡಿಸಲಾಗಿದ್ದ ಸನ್ಮಾನ ಸಮಾರಂಭದಲ್ಲಿ ನೂತನಅಧ್ಯಕ್ಷಕೆ.ಎಸ್. ಶಾಂತೇಗೌಡಅವರು ಸನ್ಮಾನ ಸ್ವೀಕರಿಸಿ ಮಾತನಾಡಿ, ಸಮಾಜದಅಭಿವೃದ್ಧಿಗೆ ಶ್ರಮಿಸುವುದಾಗಿ ವಿಶ್ವಾಸ ವ್ಯಕ್ತಪಡಿಸಿದರು.

ನೂತನ ನಿರ್ದೇಶಕರುಗಳನ್ನು ಆಯ್ಕೆಮಾಡಲಾಗಿದ್ದು, ಆ ಮೂಲಕ ಕುರುಬ ಸಮಾಜದಅಭಿವೃದ್ಧಿಗೆ ಹಾಗೂ ಸಂಘವನ್ನು ಸದೃಢವಾಗಿಕಟ್ಟಲು ನಿರ್ಧರಿಸಲಾಗಿದೆಎಂದು ಹೇಳಿದರು.

ನೂತನ ನಿರ್ದೇಶಕರುಗಳಾಗಿ ಆಯೆ ್ಕಯಾದಕಡೂರಿನಯರದಕೆರೆಓಂಕಾರಪ್ಪ, ಲಕ್ಕವಳ್ಳಿ ಮಂಜಣ್ಣ, ಕೆಂಗೇಗೌಡ, ಎಸ್. ಎಂ. ಹುಲಿಯಪ್ಪಗೌಡ ಇವರುಗಳು ನೂತನಅಧ್ಯಕ್ಷರನ್ನು ಸನ್ಮಾನಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿಕುರುಬರ ಸಂಘದ ಕಾರ್ಯದರ್ಶಿ ಡಿ.ಸಿ. ಪುಟ್ಟೇಗೌಡ, ನಿರ್ದೇಶಕರುಗಳಾದ ಎತ್ತಿನ ಮನೆ ತ್ರಿಭುವನ್, ಭದ್ರೇಗೌಡ, ಸಿ.ಎಸ್. ರೇವಣ್ಣ, ಕೆ.ವಿ. ಮಂಜುನಾಥ್, ಕೆ.ಎಸ್. ಪುಷ್ಪರಾಜ್, ಡಾ.ಚಂದ್ರಶೇಖರ್, ಎನ್. ಹೆಚ್. ಮೋಹನ್, ಹೆಚ್.ಎಸ್. ಪುಟ್ಟೇಗೌಡ, ತರೀಕೆರೆಯಧರ್ಮರಾಜ್, ಗೋಪಿಕುಮಾರ್, ಎ.ಪಿ.ಅಣ್ಣಪ್ಪಕಡೂರು, ಸಿದ್ದೇಗೌಡ ಮತ್ತಿತರರು ಉಪಸ್ಥಿತರಿದ್ದರು.

# ಭೂಕುಸಿತಗಳು ಸಂಭವಿಸುತ್ತಿರುವ ಹಿನ್ನೆಲೆಯಲ್ಲಿ ಪಶ್ಚಿಮಘಟ್ಟದ ಧಾರಣ ಸಾಮರ್ಥ್ಯದ ಅಧ್ಯಯನಕ್ಕೆ ಖಂಡ್ರೆ ಸೂಚನೆ



**ಬೆಂಗಳೂರು:** ದಕ್ಷಿಣ ಕನ್ನಡ, ಕೊಡಗು ಮೊದಲಾದ ಭಾಗದಲ್ಲಿ ಮುಂಗಾರು ಪೂರ್ವ ಮಳೆಯಲ್ಲೇ ಭೂಕುಸಿತಗಳು ಸಂಭವಿಸುತ್ತಿರುವ ಹಿನ್ನೆಲೆಯಲ್ಲಿ ಪಶ್ಚಿಮಘಟ್ಟದ ಧಾರಣಾ ಸಾಮರ್ಥ್ಯ ಅಧ್ಯಯನ ನಡೆಸಿ ವರದಿ ಸಲ್ಲಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ.ಖಂಡ್ರೆ ಸೂಚನೆ ನೀಡಿದ್ದಾರೆ.

ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಲಿಖಿತ ಸೂಚನೆ ನೀಡಿರುವ ಅವರು, ಪಶ್ಚಿಮ ಘಟ್ಟದಲ್ಲಿ ಹಲವು ರಸ್ತೆ, ಮತ್ತಿತರ ಯೋಜನೆಗಳು ಕಾರ್ಯಗತವಾಗುತ್ತಿದ್ದು, ಇದರಿಂದ ಘಟ್ಟ ಅಪಾಯಕ್ಕೆ ಸಿಲುಕಿದೆ. ಆಸ್ತಿಹಾನಿ, ಬೆಳೆ ಹಾನಿ, ಜೀವಿಹಾನಿಯ ಜೊತೆಗೆ ವನ್ಯ ಜೀವಿಗಳೂ ಸಂಕಷ್ಟ ಎದುರಿಸುವಂತಾಗಿದೆ ಎಂದು ತಜ್ಞರು ಆತಂಕ ವ್ಯಕ್ತಪಡಿಸಿರುವುದಾಗಿ ತಿಳಿಸಿದ್ದಾರೆ.

ಪಶ್ಚಿಮಘಟ್ಟ ಕ್ಷೀಣಿಸಿದರೆ ಮುಂಬರುವ ದಿನಮಾನಗಳಲ್ಲಿ ತೀವ್ರ ಜಲಕ್ಷಾಮ ಎದುರಾಗುವ ಭೀತಿ ಇದೆ ಎಂಬ ತಜ್ಞರ ಅಭಿಪ್ರಾಯ ಉಲ್ಲೇಖಿಸಿರುವ ಅವರು ಈ ನಿಟ್ಟಿನಲ್ಲಿ ಅಧ್ಯಯನ ಮಾಡಿ 3 ತಿಂಗಳೊಳಗೆ ಪಶ್ಚಿಮಘಟ್ಟದ ತಾಳಿಕೊಳ್ಳುವ ಸಾಮರ್ಥ್ಯದ ಬಗ್ಗೆ ವರದಿ ಸಲ್ಲಿಸಲು ಜೀವವೈವಿಧ್ಯ ಮಂಡಳಿಯ ಸದಸ್ಯ ಕಾರ್ಯದರ್ಶಿ, ಮೌಲ್ಯಮಾಪನ, ಕಾರ್ಯಯೋಜನೆ, ಸಂಶೋಧನೆ ಮತ್ತು ತರಬೇತಿ ಹಾಗೂ ಅರಣ್ಯ ಸಂರಕ್ಷಣೆ ವಿಭಾಗದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೂ ಸೂಚಿಸಿದ್ದಾರೆ.

ಜೀವವೈವಿಧ್ಯತೆಯ ತಾಣವಾದ ಪಶ್ಚಿಮಘಟ್ಟದಲ್ಲಿ ಕರ್ನಾಟಕದ ಅರಣ್ಯಗಳ ಪೈಕಿ ಶೇ.60ರಷ್ಟು ಅರಣ್ಯ ಪ್ರದೇಶ ಇದ್ದು, ಇದು ಸಸ್ಯಸಂಕುಲ, ಪ್ರಾಣಿ ಸಂಕುಲ, ಕೀಟ ಸಂಕುಲಗಳ ನೆಲೆವೀಡಾಗಿದೆ. ಪಶ್ಚಿಮಘಟ್ಟಗಳು ಮಳೆಯ ಮಾರುತ ತಡೆದು ಮಳೆ ಸುರಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ತಿಳಿಸಿರುವ ಈಶ್ವರ ಖಂಡ್ರೆ, ಪಶ್ಚಿಮ ಘಟ್ಟದ ಪ್ರಾಮುಖ್ಯತೆ, ಸಂರಕ್ಷಣೆಯ ಮನವರಿಕೆ ಮಾಡಿಸಿದ್ದಾರೆ.

# ಉತ್ತರ ಪ್ರದೇಶದ ಗೋರಖ್ ಪುರದಲ್ಲಿ ಹಕ್ಕಿ ಜ್ವರ ಪತ್ತೆ



**ಗೋರಖ್ ಪುರ:** ಉತ್ತರ ಪ್ರದೇಶದ ಗೋರಖ್ ಪುರ ಜಿಲ್ಲೆಯ ಐದು ಪ್ರದೇಶಗಳಲ್ಲಿ ಹಕ್ಕಿ ಜ್ವರ ಕಾಣಿಸಿಕೊಂಡಿದೆ. ಜಿಲ್ಲಾ ಆಡಳಿತವು ನಗರದ ಎಲ್ಲಾ ಜೀವಂತ ಪಕ್ಷಿ ಮಾರುಕಟ್ಟೆಗಳನ್ನು 21 ದಿನಗಳವರೆಗೆ ತಕ್ಷಣ ಮುಚ್ಚಲು ಮತ್ತು ಸೋಂಕಿತ ಪ್ರದೇಶಗಳಲ್ಲಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪಕ್ಷಿಗಳ ಕೊಲ್ಲುವ ಕಾರ್ಯಾಚರಣೆಯನ್ನು ಪ್ರಾರಂಭಿಸಲು ಆದೇಶಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಭೋಪಾಲ್‌ನಲ್ಲಿರುವ ರಾಷ್ಟ್ರೀಯ ಹೈ ಸೆಕ್ಯುರಿಟಿ ಪ್ರಾಣಿ ರೋಗಗಳ ಸಂಸ್ಥೆ ಕೋಳಿಯಲ್ಲಿ ಏವಿಯನ್ ಇನ್‌ಫ್ಲುಯೆನ್ಸ್ ಸೋಂಕು

ಇರುವಿಕೆಯನ್ನು ದೃಢಪಡಿಸಿದೆ ಎಂದು ಹೆಚ್ಚುವರಿ ಪುರಸಭೆ ಆಯುಕ್ತ ನಿರಂಕರ್ ಸಿಂಗ್ ತಿಳಿಸಿದ್ದಾರೆ. ಗೋರಖ್ ಪುರ ಆಡಳಿತದ ಪ್ರಕಾರ,

ಜುಂಗಿಯಾ ಬಜಾರ್, ಅಲ್ಯೂಮಿನಿಯಂ ಕಾರ್ಖಾನೆ ಪ್ರದೇಶ, ತಾರಾಮಂಡಲ್, ಭಗತ್ ಚೌರಾಹಾ ಮತ್ತು ಶಹೀದ್ ಅಶ್ಫಾಕುಲ್ಲಾ ಖಾನ್ ಝೂಲಾಜಿಕಲ್ ಪಾರ್ಕ್‌ನಿಂದ ಸಂಗ್ರಹಿಸಲಾದ ಮಾದರಿಗಳನ್ನು ಪರೀಕ್ಷೆ ನಡೆಸಿವೆ.ಸೋಂಕು ದೃಡಪಟ್ಟಿದೆ.

ಈ ಸೋಂಕು ಹರಡುವಿಕೆಗೆ ತ್ವರಿತ ಪ್ರತಿಕ್ರಿಯೆಯಾಗಿ, ಮುಖ್ಯ ಪಶುವೈದ್ಯಾಧಿಕಾರಿ ಜಿಲ್ಲಾ ಮಟ್ಟದ ಕ್ಷಿಪ್ರ ಪ್ರತಿಕ್ರಿಯೆ ತಂಡಗಳನ್ನು ನಿಯೋಜಿಸಿದ್ದಾರೆ ಮತ್ತು ಸರ್ದಾ ಪಶುವೈದ್ಯಕೀಯ

ಆಸ್ಪತ್ರೆಯಲ್ಲಿ ಮೀಸಲಾದ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಸೋಂಕಿತ ವಲಯಗಳ ಒಂದು ಕಿಲೋಮೀಟರ್ ವ್ಯಾಪ್ತಿಯಲ್ಲಿ ಕೋಳಿ, ಪಕ್ಷಿ ಕೊಲ್ಲುವ ಕಾರ್ಯಾಚರಣೆಗಳು ಪ್ರಾರಂಭವಾಗಿವೆ ಎಂದು ಹೆಚ್ಚುವರಿ ಪುರಸಭೆ ಆಯುಕ್ತ ನಿರಂಕರ್ ಸಿಂಗ್ ಹೇಳಿದರು. ಗೊತ್ತುಪಡಿಸಿದ ಪ್ರದೇಶಗಳೊಳಗಿನ ಎಲ್ಲಾ ಜೀವಂತ ಪಕ್ಷಿಗಳನ್ನು ಕೊಲ್ಲಲಾಗುವುದು ಮತ್ತು ವೈರಸ್ ಹರಡುವುದನ್ನು ತಡೆಯಲು ವ್ಯಾಪಕವಾದ ಸೋಂಕುನಿವಾರಕ ಅಭಿಯಾನಗಳನ್ನು ಸಕ್ರಿಯವಾಗಿ ನಡೆಸಲಾಗುತ್ತಿದೆ ಎಂದು ಸಿಂಗ್ ಹೇಳಿದರು.

## ಹನಿ ನೀರಾವರಿ ಘಟಕಕ್ಕೆ ಶೇ.90 ಸಹಾಯಧನ

**ಚಿಕ್ಕಮಗಳೂರು:** ತೋಟಗಾರಿಕೆ ಇಲಾಖಾ ವತಿಯಿಂದ ಈ ಹಿಂದೆ ಅಳವಡಿಸಿಕೊಂಡಿದ್ದ ಸೂಕ್ಷ್ಮ ನೀರಾವರಿ ಪದ್ಧತಿ ಹಾಳಾಗಿದ್ದಲ್ಲಿ, ಘಟಕ ಕಾರ್ಯ ನಿರ್ವಹಿಸದೇ ಇದ್ದಲ್ಲಿ 7 ವ?ಗಳ ನಂತರ ಅದೇ ಜಮೀನಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ (ಆರ್.ಕೆ.ವಿ.ವೈ) ಯೋಜನೆಯಡಿ ಎಲ್ಲಾ ವರ್ಗದ ರೈತರಿಗೆ ತರಕಾರಿ ಹಾಗೂ ಇತರೆ ಬಹುವಾರ್ಷಿಕ ತೋಟಗಾರಿಕೆ ಬೆಳೆಗಳಿಗೆ (ಕಾಫಿ, ಟೀ, ರಬ್ಬರ್ ಹೊರತುಪಡಿಸಿ) ಮತ್ತೊಮ್ಮೆ ಹನಿ ನೀರಾವರಿ ಘಟಕ ಅಳವಡಿಸಿಕೊಳ್ಳಲು ಸಹಾಯಧನ ನೀಡಲಾಗುವುದು.ಹನಿ ನೀರಾವರಿ ಅಳವಡಿಸಿಕೊಳ್ಳಲು ನೀಡಬೇಕಾದ ದಾಖಲಾತಿಗಳ ವಿವರ: ಹೊಸ ಪಹಣಿ ಪ್ರತಿ, ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ, ಬ್ಯಾಂಕ್ ಪಾಸ್ ಬುಕ್ ಜೆರಾಕ್ಸ್ ಪ್ರತಿ, ಎರಡು ಪಾಸ್ ಪೋರ್ಟ್ ಸೈಜ್ ಪೋಟೋ, ಮಣ್ಣು ಮತ್ತು ನೀರು ಪರೀಕ್ಷಾ ವರದಿ (ಕೃಷಿ ಇಲಾಖೆ ಪ್ರಯೋಗಾಲಯದಿಂದ), ಎಸ್.ಸಿ., ಎಸ್.ಟಿ. ಆಗಿದ್ದಲ್ಲಿ ಜಾತಿ ಪ್ರಮಾಣ ಪತ್ರ ಜೆರಾಕ್ಸ್ ಪ್ರತಿ, ಜಂಟಿ ಖಾತೆ ಹೊಂದಿದ್ದಲ್ಲಿ 100 ರೂ.ನ ಛಾಪಾ ಕಾಗದದಲ್ಲಿ ಒಪ್ಪಿಗೆ ಪತ್ರ (ನೋಟರಿ), ಕೃಷಿ ಮತ್ತು ರೇ? ಇಲಾಖೆಯಿಂದ ನಿರಾಪೇಕ್ಷಣಾ ಪ್ರಮಾಣ ಪತ್ರ ಓಔಅ (ನಮೂನೆ 2)ಒದಗಿಸಬೇಕಾದ ದಾಖಲಾತಿಗಳು: ಕಚೇರಿಯಿಂದ ಪಡೆದ ಅರ್ಜಿ ನಮೂನೆ, ಪಹಣಿ, ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ಪ್ರತಿ, ಆರ್.ಡಿ. ಸಂಖ್ಯೆಯ ಜಾತಿ ಪ್ರಮಾಣ ಪತ್ರದ ಪ್ರತಿ (ಎಸ್.ಸಿ.–ಎಸ್.ಟಿ. ಫಲಾನುಭವಿಗಳಿಗೆ ಮಾತ್ರ) ಹಾಗೂ ಇತರೆ ದಾಖಲೆಗಳನ್ನು ಸಲ್ಲಿಸುವುದು. ಎಫ್.ಐ.ಡಿ. ಹೊಂದಿರುವ ರೈತರು ಮೇಲೆ ತಿಳಿಸಿರುವ ದಾಖಲೆಗಳನ್ನು ಸಲ್ಲಿಸದೆ ಅರ್ಜಿಯಲ್ಲಿ ಎಲ್ಲಾ ವಿವರಗಳನ್ನು ನಮೂದಿಸಿ ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗೆ ತರೀಕೆರೆಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ(ಜಿ.ಪಂ.) ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಜೇನು ತುಪ್ಪಕ್ಕೆ ಝೇಂಕಾರ ಬ್ರಾಂಡ್ ಬಳಸಲು ಸಲಹೆ

**ಚಿಕ್ಕಮಗಳೂರು:** ತೋಟಗಾರಿಕೆ ಇಲಾಖೆಯ ವತಿಯಿಂದ ಮಧುವನ ಹಾಗೂ ಜೇನು ಸಾಕಾಣಿಕೆ ಅಭಿವೃದ್ಧಿ ಯೋಜನೆಯಡಿ ಸಹಾಯಧನ ಪಡೆದ ಎಲ್ಲಾ ವರ್ಗದ ಆಸಕ್ತ ರೈತರುಗಳು ತೋಟಗಾರಿಕೆ ಇಲಾಖೆ ಮಾಲೀಕತ್ವದ "ಝೇಂಕಾರ" ಎಂಬ ಜೇನುತುಪ್ಪದ ಬ್ರಾಂಡ್ ಹೆಸರು, ಲೋಗೋ ಮತ್ತು ಟ್ಯಾಗ್‌ಲೈನ್ ಅನ್ನು ಬಳಸಿಕೊಂಡು ಜೇನುತುಪ್ಪ ಉತ್ಪಾದಕರು ಜೇನುತುಪ್ಪ ಮತ್ತು ಜೇನಿನ ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗಿದೆ.ಹೆಚ್ಚಿನ ಮಾಹಿತಿಗೆ ರೈತರು ಜೇನು ಕೃಷಿ ಅನುವುಗಾರರಾದ ಸಂತೋ? 9448138401 ಅಥವಾ ತಮ್ಮ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿಗಳಾದ ಕೆ.ಎಲ್. ಅರುಣ್ ಕುಮಾರ್ (ಕಸಬಾ ಹೋಬಳಿ) 9108948434, ಎಸ್. ಗುರುರಾಜ್ (ಅಂಬಳೆ ಹೋಬಳಿ) 7892338387, ವಿ.ಎ.ಅರುಣ್ (ವಸ್ತಾರೆ ಹೋಬಳಿ) 8277038990, ಹೆಚ್.ಎ.ನಟೇಶ್ ಕುಮಾರ್ (ಜಾಗರ ಹೋಬಳಿ) 7899048055, ಕೆ.ಎಲ್.ಅರುಣ್ ಕುಮಾರ್ (ಲಕ್ಯಾ ಹೋಬಳಿ) 9108948434, ಹೆಚ್.ಎ.ಸೀಮಾ (ಖಾಂಡ್ಯ ಹೋಬಳಿ) 9380956582, ಭಾನುಶ್ರೀ (ಆಲ್ದೂರು ಹೋಬಳಿ) 9380126498, ಡಿ.ಎ.ಪೂಜಾ (ಆವತಿ ಹೋಬಳಿ) 8970550369 ಇವರನ್ನು ಸಂಪರ್ಕಿಸಬಹುದು ಎಂದು ನಗರದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಪ್ಲೋಮಾ ಕೋರ್ಸ್‌ಗೆ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನಲ್ಲಿ 02 ವರ್ಷಗಳ ಐ.ಟಿ.ಐ, ದ್ವಿತೀಯ ಪಿಯುಸಿ(ವಿಜ್ಞಾನ), ದ್ವಿತಿಯ ಪಿ.ಯು.ಸಿ (ತಾಂತ್ರಿಕ ವಿಷಯಗಳಲ್ಲಿ) ಉತ್ತೀರ್ಣರಾಗಿರುವ ಅರ್ಹ ಅಭ್ಯರ್ಥಿಗಳಿಗೆ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಗಳಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷ, 3ನೇ ಸೆಮಿಸ್ಟರ್ ಡಿಪ್ಲೊಮಾ ಕೋರ್ಸುಗಳಿಗೆ ಆಫ್–ಲೈನ್ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಜೂನ್ 14 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರಾರು, ಸರ್ಕಾರಿ ಡಿ.ಆರ್.ಆರ್ ಪಾಲಿಟೆಕ್ನಿನ್ನು ಸಂಪರ್ಕಿಸಲು ತಿಳಿಸಿದೆ.

## ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘ ಆರಂಭ

**ದಾವಣಗೆರೆ** : ಹೊರಗುತ್ತಿಗೆ ನೌಕರರು, ಕಾರ್ಮಿಕರಿಗೆ ವೇತನ ಪಾವತಿ ಮತ್ತು ಶಾಸನಾತ್ಮಕವಾಗಿ ನೀಡಬೇಕಾದ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ಜಿಲ್ಲೆಯಲ್ಲಿ ನೂತನವಾಗಿ ನಿಯೋಜಿತ ದಾವಣಗೆರೆ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಹಕಾರ ಸಂಘ ನಿಯಮಿತ., ದಾವಣಗೆರೆ ಸಂಘವನ್ನು ಪ್ರಾರಂಭಿಸಲಾಗಿದೆ.

ಸರ್ಕಾರದ ವಿವಿಧ ಇಲಾಖೆಗಳಲ್ಲಿ, ಇಲಾಖೆ ಅಧೀನದಲ್ಲಿ ಬರುವ ನಿಗಮ ಮಂಡಳಿ, ಸಂಸ್ಥೆಗಳಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರ ಅಂಕಿ ಅಂಶಗಳನ್ನು ಪಟ್ಟಿಮಾಡಿ ಮಾಹಿತಿ ಸಲ್ಲಿಸಿದ್ದಲ್ಲಿ ಸಂಘದಿಂದ ಸದಸ್ಯತ್ವ ಅರ್ಜಿಗಳನ್ನು ವಿತರಿಸಲಾಗುವುದು. ನಂತರ ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ಭರ್ತಿ ಮಾಡಿ ಪ್ರಸ್ತಾವನೆಯನ್ನು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಸಹಾಯಕ ಕಾರ್ಮಿಕ ಆಯುಕ್ತರ ಕಚೇರಿ, ಬಿ.ಎಸ್.ಎನ್.ಎಲ್ ಕಟ್ಟಡ, 2ನೇ ಮಹಡಿ, ದೇವರಾಜ್ ಅರಸ್ ಬಡಾವಣೆ, ದಾವಣಗೆರೆ ಇಲ್ಲಿಗೆ ಸಲ್ಲಿಸುವಂತೆ ದಾವಣಗೆರೆ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಹಕಾರ ಸಂಘ ನಿ., ಪ್ರವರ್ತಕರು ಹಾಗೂ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ತಿಳಿಸಿದ್ದಾರೆ.

### ಶಾಲಾ ಪ್ರಾರಂಭೋತ್ಸವ ಉದ್ಘಾಟಿಸಿದ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್

# ಶಾಲೆಗಳ ಗುಣಾತ್ಮಕ ಶಿಕ್ಷಣಕ್ಕಾಗಿ ಹಲವು ಯೋಜನೆ ಜಾರಿ



**ಚಿತ್ರದುರ್ಗ:** ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣಕ್ಕಾಗಿ ಸರ್ಕಾರದಿಂದ ಹಲವಾರು ಯೋಜನೆಗಳನ್ನು ಜಾರಿ ಮಾಡುತ್ತಿದ್ದು, ಶಿಕ್ಷಕರು ಮಕ್ಕಳು ಮತ್ತು ಪೋಷಕರು ಅದನ್ನು ಸದುಪಯೋಗಪಡಿಸಿಕೊಂಡು ಉತ್ತಮ ಶಿಕ್ಷಣ ಪಡೆಯಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಹಿರಿಯೂರು ತಾಲ್ಲೂಕಿನ ಹರಿಯಬ್ಬೆಯ ಕರ್ನಾಟಕ ಪಬ್ಲಿಕ್ ಸ್ಕೂಲ್‌ನಲ್ಲಿ ಹಮ್ಮಿಕೊಂಡಿದ್ದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಗುಣಾತ್ಮಕ ಶಿಕ್ಷಣಕ್ಕಾಗಿ ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳು, ಪಿಎಂಶ್ರೀ ಸ್ಕೂಲ್‌ಗಳು ಮತ್ತು ಮಾದರಿ ಶಾಲೆಗಳನ್ನು ನಡೆಸಲಾಗುತ್ತಿದೆ. ಈ ಶಾಲೆಗಳಲ್ಲಿ ಡಿಜಿಟಲ್ ಲರ್ನಿಂಗ್ ಮಾಡಿಸಲು ಸ್ಮಾರ್ಟ್ ಕ್ಲಾಸ್, ಕಂಪ್ಯೂಟರ್, ಟ್ಯಾಬ್‌ಗಳನ್ನು ನೀಡಲಾಗುತ್ತಿದ್ದು, ಇದನ್ನು ಸಮರ್ಪಕ ಬಳಕೆ ಮಾಡಿಕೊಳ್ಳಲು ಶಿಕ್ಷಕರಿಗೆ ಸೂಚಿಸಿದರು.

ಶಾಲೆಗಳಲ್ಲಿ ಕೊಠಡಿಗಳ ಕೊರತೆ ನಿವಾರಿಸಲು ಹೊಸದಾಗಿ 163 ಕೊಠಡಿಗಳನ್ನು ಮತ್ತು 124 ಶೌಚಾಲಯಗಳನ್ನು ಈ ವರ್ಷ ನಿರ್ಮಿಸಲಾಗುತ್ತಿದೆ. ಕಳೆದ ಸಾಲಿನಲ್ಲಿ ರೂ. 04 ಕೋಟಿ ವೆಚ್ಚದಲ್ಲಿ 40 ಶಾಲೆಗಳಿಗೆ ಸ್ಮಾರ್ಟ್ ಕ್ಲಾಸ್ ಅಳವಡಿಸಲಾಗಿತ್ತು ಎಂದು ತಿಳಿಸಿದರು. ಹಿರಿಯೂರು ತಾಲ್ಲೂಕಿನ ಇಬ್ಬರು ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿಯಲ್ಲಿ ರಾಜ್ಯಕ್ಕೆ ಮೊದಲ ಸ್ಥಾನ ಪಡೆದು ತಾಲ್ಲೂಕಿಗೆ ಹಾಗೂ ಜಿಲ್ಲೆಗೆ ಗೌರವ ಮತ್ತು ಕೀರ್ತಿ ತಂದುಕೊಟ್ಟಿದ್ದಾರೆ. ಅದೇ ರೀತಿ ಈ ವರ್ಷವೂ ಒಳ್ಳೆಯ ಫಲಿತಾಂಶ ತರಲು ಪ್ರಾಮಾಣಿಕವಾಗಿ ಶ್ರಮಿಸಬೇಕೆಂದು ಶಿಕ್ಷಕರಿಗೆ ಕಿವಿಮಾತು ಹೇಳಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ್ ಮಾತನಾಡಿ, ಜಿಲ್ಲೆಯಲ್ಲಿ ಬಡ ಮತ್ತು ಹಿಂದುಳಿದ ವಿದ್ಯಾರ್ಥಿಗಳಿಗೂ ಹೊರೆಯಾಗದಂತೆ ಶಿಕ್ಷಣ ನೀಡಲು ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ಇಂಗ್ಲಿಷ್ ಮೀಡಿಯಂ ಮತ್ತು ಕಂಪ್ಯೂಟರ್ ಶಿಕ್ಷಣ ನೀಡಲಾಗುತ್ತಿದೆ. ಇದನ್ನು ಸಾರ್ವಜನಿಕರು ಬಳಕೆ ಮಾಡಿಕೊಳ್ಳಬೇಕೆಂದು ತಿಳಿಸಿದರು. ಹಿರಿಯೂರು ತಾಲೂಕಿನಲ್ಲಿ ಶೈಕ್ಷಣಿಕ ಸಾಧನೆ ಉತ್ತಮಗೊಳ್ಳುತ್ತಿದ್ದು, ಎಲ್ಲಾ ಹಂತದ ಅಧಿಕಾರಿಗಳು ಉತ್ತಮ ಮೇಲ್ವಿಚಾರಣೆ ಮಾಡಿ ಮಕ್ಕಳ ಪ್ರಗತಿ ಉತ್ತಮಗೊಳಿಸುವಂತೆ ಸೂಚಿಸಿದರು.

ಹಿರಿಯೂರು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಂ ತಿಪ್ಪೇಸ್ವಾಮಿ ಮಾತನಾಡಿ, ಆಂಗ್ಲ ಮಾಧ್ಯಮ ಇರುವ ಸರ್ಕಾರಿ ಶಾಲೆಗಳಲ್ಲಿ ದಾಖಲಾತಿಗೆ ನೂಕು ನುಗ್ಗಲು ಉಂಟಾಗಿದ್ದು, ಈಗಾಗಲೇ ಲಭ್ಯವಿರುವ ಸೀಟುಗಳು ಭರ್ತಿಯಾಗಿವೆ ಎಂದು ತಿಳಿಸಿದರು. ಉಳಿದಂತೆ ತಾಲ್ಲೂಕಿನಲ್ಲಿರುವ ಖಾಲಿ ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಿ, ಲಭ್ಯ ಇರುವ ಹೆಚ್ಚುವರಿ ಶಿಕ್ಷಕರ ಬಳಕೆ ಮಾಡಿಕೊಂಡು ಯಾವುದೇ ಕೊರತೆ ಇಲ್ಲದಂತೆ ನೋಡಿಕೊಳ್ಳಲಾಗುವುದೆಂದು ತಿಳಿಸಿದರು.

ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದ ಅಂಗವಾಗಿ ಪೂರ್ಣ ಕುಂಭದೊಂದಿಗೆ ಜಿಲ್ಲಾ ಉಸ್ತುವಾರಿ ಸಚಿವರನ್ನು ವಿದ್ಯಾರ್ಥಿಗಳು ಮತ್ತು ಗ್ರಾಮಸ್ಥರು ಸ್ವಾಗತಿಸಿದರು. ಕಾರ್ಯಕ್ರಮದ ಸ್ವಾಗತ, ನಿರೂಪಣೆ ಸೇರಿದಂತೆ ವಿವಿಧ ಹಂತಗಳನ್ನು ಶಾಲಾ ವಿದ್ಯಾರ್ಥಿಗಳೇ ನಿರ್ವಹಣೆ ಮಾಡಿದ್ದು ಆಕರ್ಷಕವಾಗಿತ್ತು. ವಿದ್ಯಾರ್ಥಿಗಳಿಗೆ ಕನ್ನಡ ಅಕ್ಷರಭ್ಯಾಸ ಪ್ರಾರಂಭಿಸುವುದರ ಮೂಲಕ ಸಚಿವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಉಪನಿರ್ದೇಶಕರ ಕಚೇರಿಯ ಶಿಕ್ಷಣಾಧಿಕಾರಿ ಬಿ.ಸಿ. ಸಿದ್ದಪ್ಪ, ಕ್ಷೇತ್ರ ಸಮನ್ವಯಾಧಿಕಾರಿ ತಿಪ್ಪೇರುದ್ರಪ್ಪ, ಬಿಸಿ ಊಟ ಸಹಾಯಕ ನಿರ್ದೇಶಕ ಮಹೇಶ್ವರ ರೆಡ್ಡಿ ಸೇರಿದಂತೆ ಶಿಕ್ಷಣ ಸಂಯೋಜಕರು, ಸಿಆರ್‌ಪಿ ಮತ್ತಿತರರು ಹಾಜರಿದ್ದರು. ಕೆಪಿಎಸ್ ಶಾಲೆಯ ಉಪಪ್ರಾಂಶಪಾಲ ರುದ್ರಮುನಿ, ಮುಖ್ಯ ಶಿಕ್ಷಕರಾದ ಮಂಜುನಾಥ್ ಮತ್ತು ಎಲ್ಲಾ ಶಿಕ್ಷಕರು, ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು ಇದ್ದರು.

## ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಅವಧಿ ವಿಸ್ತರಣೆ

**ಚಿಕ್ಕಮಗಳೂರು, ಜೂ.1:** ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಿ ದತ್ತಾಂಶವನ್ನು (ಎಂಪೆರಿಕಲ್ ಡಾಟಾ) ಸಂಗ್ರಹಿಸಿ ಹೊಸದಾದ ಸಮೀಕ್ಷೆಯನ್ನು ನಡೆಸಲು ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಡಾ.ಹೆಚ್.ಎನ್.ನಾಗಮೋಹನ್‌ದಾಸ್ ಇವರ ಅಧ್ಯಕ್ಷತೆಯ ಏಕ ಸದಸ್ಯ ಆಯೋಗದ ಮಧ್ಯಂತರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾದ ಹಿನ್ನೆಲೆಯಲ್ಲಿ ಮೇ 5ರಿಂದ ಗಣತಿದಾರರು ಮನೆ–ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವ ಕಾರ್ಯ ಕೈಗೊಳ್ಳಲಾಗಿದೆ. ಅದರಂತೆ ರಾಜ್ಯಾದ್ಯಂತ ಈಗಾಗಲೇ ಸಮೀಕ್ಷೆ ನಡೆಯುತ್ತಿದ್ದು, ಇದೀಗ ಆ ಸಮೀಕ್ಷೆಯ ದಿನಾಂಕವನ್ನು ವಿಸ್ತರಿಸಲಾಗಿದೆ.

## ಪೌರಸೇವಾ ನೌಕರರ ಬೇಡಿಕೆ ಈಡೇರಿಕೆಗೆ ಸರ್ಕಾರ ಅಸ್ತು : ಮುಷ್ಕರ ಅಂತ್ಯ

**ಬೀರೂರು:** ಕಳೆದ 4 ದಿನಗಳಿಂದ ಪೌರ ಸೇವಾ ನೌಕರರ ಸಂಘ ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಹಿಸಿ ಪುರಸಭೆ ಮುಂಭಾಗ ಪ್ರತಿಭಟನೆ ನಡೆಸಿದ್ದರು, ಆದರೆ ರಾಜ್ಯ ಸಂಘದ ರಾಜ್ಯಧ್ಯಕ್ಷ ಪ್ರಭಾಕರ್ ರವರು ಮಾನ್ಯ ಮುಖ್ಯಂತ್ರಿಗಳೊಂದಿಗೆ ಸಭೆ ನಡೆಸಿ, ಲಿಖಿತ ರೂಪದಲ್ಲಿ ಆಶ್ವಾಸನೆ ನೀಡಿದ ಹಿನ್ನಲೆಯಲ್ಲಿ ಮುಷ್ಕರವನ್ನು ಅಂತ್ಯಗೊಳಿಸಲಾಗಿದೆ ಎಂದು ಪೌರಸೇವಾ ನೌಕರರ ಸಂಘದ ಅಧ್ಯಕ್ಷೆ ಹೆಚ್. ಜಯಮ್ಮ ತಿಳಿಸಿದರು.

ನಂತರ ಪೌರಸೇವಾ ನೌಕರರು ಈ ವಿಷಯ ತಿಳಿದು ಪುರಸಭೆ ಮುಂಭಾಗ ಪಟಾಕಿ ಸಿಡಿಸಿ ಸಂಭ್ರಮಾಚರಣೆ ನಡೆಸಿ,



ವಿವಿಧ ಘೋಷಣೆ ಕೂಗಿ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಮಹಾತ್ಮ ಗಾಂಧೀಜಿಗೆ ಮಾಲಾರ್ಪಣೆ ನಡೆಸಿ ಪುರಸಭೆಗೆ ವಾಪಾಸ್ ತೆರಳಿದರು.

ಅಧ್ಯಕ್ಷೆ ಜಯಮ್ಮ ಮಾತನಾಡಿ, ಹಲವಾರು ವರ್ಷಗಳ ಬೇಡಿಕೆಗೆ ಇಂದು ಸರ್ಕಾರ ಸ್ಪಂದಿಸಿದ್ದು ಸಂತಸ ತಂದಿದೆ. ನಮ್ಮ ಹೋರಾಟಕ್ಕೆ ಬೆಂಬಲ ನೀಡಿದ. ಸಂಘ–ಸಂಸ್ಥೆಗಳು, ಪುರಸಭಾ ಸದಸ್ಯರುಗಳು ಹಾಗೂ ಕ್ಷೇತ್ರ ಶಾಸಕರಿಗೆ ಧನ್ಯವಾದಗಳನ್ನು ತಿಳಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಪುರಸಭೆ ಅಧ್ಯಕ್ಷೆ ವನಿತಮಧು ಬಾವಿಮನೆ, ಪಟ್ಟಣವನ್ನು ಶುಚಿಗೊಳಿಸುವ ಪೌರಕಾರ್ಮಿಕರು, ಹಾಗೂ ಪೌರ ನೌಕರರು ಪುರಸಭೆಯ ಆಧಾರ ಸ್ತಂಭಗಳು, ಅವರ ಬೇಡಿಕೆಯನ್ನು ಈಡೇರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಪೌರಾಡಳಿತ ಸಚಿವರಾದ ರಹೀಂಖಾನ್ ಹಾಗೂ ಶಾಸಕ ಆನಂದ್‌ರವರಿಗೆ ಹೃದಯಪೂರ್ವಕ ಅಭಿನಂದನೆ ತಿಳಿಸಿದ ಅವರು, ತ್ಯಾಗ ಜೀವಿಗಳಿಗೆ ಸರ್ಕಾರ ಮನ್ನಣೆ ನೀಡಿ ಅವರಿಗೆ ಸಿಗಬೇಕಾದ ಸವಲತ್ತುಗಳನ್ನು ಆದಷ್ಟು ಬೇಗ ಈಡೇರಿಸಲಿ ಎಂದರು.

ಪುರಸಭೆ ಸದಸ್ಯರಾದ ಮೋಹನ್ ಕುಮಾರ್, ಪೌರ ನೌಕರರ ಸಂಘದ ಕಾರ್ಯದರ್ಶಿ ಚೆಲುವರಾಜ್, ನೂರುದ್ದೀನ್, ಗಿರಿರಾಜ್, ದೀಪಕ್, ಶಿಲ್ಪ, ಪಾರ್ವತಮ್ಮ, ಮಲ್ಲೇಶ್, ಸುಬ್ರಮಣಿ ಮತ್ತಿತರರು ಇದ್ದರು.

## ಭಾವಗೀತೆಗಳಲ್ಲಿ ಭಾವನೆಗೆ ಜೀವ ತುಂಬಿದವರು ವೆಂಕಟೇಶ್‌ಮೂರ್ತಿ



**ತರೀಕೆರೆ:** ಸಾಹಿತಿ ವೆಂಕಟೇಶಮೂರ್ತಿರವರ ಭಾವಗೀತೆಗಳಲ್ಲಿ ಭಾವನೆಗಳಿಗೆ ಜೀವ ತುಂಬಿ ಹೃದಯಕ್ಕೆ ತಟ್ಟುವಂತಹ ಸಾಹಿತ್ಯ ರಚಿಸಿದರು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸೂರಿ ಶ್ರೀನಿವಾಸ್ ಹೇಳಿದರು.

ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಆಯೋಜಿಸಿದ್ದ ಎಚ್.ಎಸ್. ವೆಂಕಟೇಶ್ ಮೂರ್ತಿ ಭಾವಪೂರ್ಣ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದರು.

ಸಮಾಜದಲ್ಲಿನ ಜನಜೀವನಕ್ಕೆ ಹತ್ತಿರವಾದ ವಿಷಯಗಳನ್ನ ತಮ್ಮ ಸಾಹಿತ್ಯದಲ್ಲಿ ಅಳವಡಿಕೊಂಡಿದ್ದರು. ಅವರು ಇಲ್ಲಿ ಬಿಟ್ಟುಹೋದ ಹೆಜ್ಜೆಗುರುತುಗಳು ವಿಶ್ವಮಾನ್ಯವಾಗಿವೆ ಎಂದರು.

ಕಸಾಪ ತಾಲ್ಲೂಕು ಅಧ್ಯಕ್ಷ ರವಿ ದಳವಾಯಿ ಮಾತನಾಡಿ, ವೆಂಕಟೇಶಮೂರ್ತಿಯವರು ರಚಿಸಿರುವ ಸಾಹಿತ್ಯಕ್ಕೆ ಬೆಲೆ ಕಟ್ಟಲಾಗದು. ಇವರು 5 ಬಾರಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಾಹಿತ್ಯವನ್ನು ಕನ್ನಡಿಗರು ಹೆಚ್ಚು ಹೆಚ್ಚು ಅಧ್ಯಯನ ಮಾಡಬೇಕು ಎಂದರು. ಕನ್ನಡಶ್ರೀ ಭಗವಾನ್, ಟಿ. ದಾದಾಪೀರ್, ಇಮ್ರಾನ್, ನಾಗಜ್ಯೋತಿ, ಅನಂತನಾಡಿಗ್, ಸುನೀತಾ ಕಿರಣ್ ಮಾತನಾಡಿದರು.

ಸಭೆಯಲ್ಲಿ ಟಿ.ಆರ್. ಶ್ರೀಧರ್, ಮಿಲ್ಟ್ರೀ ಶ್ರೀನಿವಾಸ್, ನವೀನ್ ಪೆನ್ನಯ್ಯ, ಉಮಾಮಹೇಶ್ ಮೊದಲಾದವರಿದ್ದರು.

## ಜಾನಪದ ಮಹಿಳೆಯರಲ್ಲಿ ಮುಖ್ಯ ಪಾತ್ರವಹಿಸಿದೆ : ಬಾಲಾಜಿ



**ತರೀಕೆರೆ:** ಜಾನಪದ ಮಹಿಳಾ ಪ್ರಧಾನವಾದದ್ದು ಎಂದು ಕನ್ನಡ ಜಾನಪದ ಪರಿಷತ್ ರಾಜ್ಯಾಧ್ಯಕ್ಷ ಹಾಗೂ ಭಾರತ ಸರ್ಕಾರದ ಐಸಿಸಿಆರ್ ಸದಸ್ಯ ಡಾ. ಜಾನಪದ ಎಸ್ ಬಾಲಾಜಿ ಅಭಿಪ್ರಾಯಪಟ್ಟರು.

ಅವರು ಅಜ್ಜಂಪುರ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಕನ್ನಡ ಜಾನಪದ ಪರಿಷತ್, ಅಜ್ಜಂಪುರ ತಾಲೂಕು ಮಹಿಳಾ ಘಟಕ ವತಿಯಿಂದ ಪದ ಪ್ರಧಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಜಾನಪದ ಎಲ್ಲಾ ಆಯಾಮಗಳಲ್ಲಿ ಮಹಿಳೆಯರಿಗೆ ಮುಖ್ಯ ಪಾತ್ರ ಲಭಿಸಿದೆ. ಭೌತಿಕ ಪರಂಪರೆ ಗೀತೆಗಳು ಹುಟ್ಟಿದ ಮಹಿಳೆಯರಿಂದ ಅದನ್ನು ಪೋಷಿಸುತ್ತಿರುವುದು ಮಹಿಳೆಯರೆ. ಜಾನಪದ ಆಯಾಮಗಳಲ್ಲಿ ಕೊಂಡೊಯ್ಯುವ ಕಾರ್ಯಕ್ರಮವು ಸಹ ಮಹಿಳೆಯಿಂದಲೇ ಆಗುತ್ತಿದೆ.

ಚಿಕ್ಕಮಗಳೂರು ಜಿಲ್ಲೆಯಲ್ಲಿ ರಾಜ್ಯಮಟ್ಟದ ಮಹಿಳಾ ಸಮ್ಮೇಳನವಾಗುತ್ತಿರುವುದು ಕನ್ನಡ ಜಾನಪದ ಪರಿಷತ್ತಿಗೆ ಗೌರವ ಎಂದು ತಿಳಿಸಿದರು.

ಶಿಶು ಪ್ರಾಸ ಗೀತೆಗಳು, ದೂರಿ ಪದಗಳು, ತೊಟ್ಟಿಲು ಪದಗಳು, ಇಂದು ಅಳಿವಿನಂಚಿನಲ್ಲಿವೆ. ಅವನ್ನು ತರಬೇತಿಯ ಮೂಲಕ ಮುಂದಿನ ಪೀಳಿಗೆಗೆ ಕೊಂಡೊಯ್ಯುವ ಕೆಲಸವಾಗಬೇಕಾಗಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧ್ಯಕ್ಷೆ ವಿಶಾಲಾಕ್ಷಮ್ಮ, ಚಿಕ್ಕಮಗಳೂರು ಜಿಲ್ಲೆ ಎಲ್ಲಾ ತಾಲೂಕುಗಳಲ್ಲಿ ಮಹಿಳಾ ಘಟಕಗಳು ಸ್ಥಾಪನೆಯಾಗಿದ್ದು, ಹೋಬಳಿ ಹಾಗೂ ಗ್ರಾಮ ಘಟಕಗಳನ್ನು ಅತಿ ಶೀಘ್ರದಲ್ಲಿ ಸ್ಥಾಪಿಸಿ, ಜಿಲ್ಲಾದ್ಯಂತ ಮಹಿಳಾ ಜಾಗೃತಿ ಜಾನಪದದ ಮೂಲಕ ಮೂಡಿಸಲಾಗುವುದು ತಿಳಿಸಿದರು.

ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ವಿಜಯ್ ಕುಮಾರ್ ಮಾತನಾಡಿ, ಜಾನಪದ ಸಾಹಿತ್ಯವನ್ನು ದಾಖಲೀಕರಣದ ಮೂಲಕ ಉಳಿಸುವ ಅಗತ್ಯತೆ ಬಂದಿದೆ. ಗ್ರಂಥ ರೂಪದಲ್ಲಿ ಇದನ್ನು ತರುವುದು ಬಹಳಷ್ಟು ಮುಖ್ಯವಾಗಿದೆ ಎಂದು ತಿಳಿಸಿದರು.

ಕನ್ನಡ ಜಾನಪದ ಪರಿಷತ್ ಮಹಿಳಾ ಘಟಕ ಜಿಲ್ಲಾ ಗೌರವಾಧ್ಯಕ್ಷೆ ಸವಿತಾ ಸತ್ಯನಾರಾಯಣ ಪ್ರಾಸ್ತಾವಿಕವಾಗಿ ಮಾತನಾಡಿದರು. ಪುಷ್ಪ ಅವರಿಗೆ ತಾಲೂಕು ಮಹಿಳಾ ಘಟಕದ ಅಧ್ಯಕ್ಷರಾಗಿ ಪದ ಪ್ರಧಾನ ಮಾಡಲಾಯಿತು. ನಿಕಟಪೂರ್ವ ಅಧ್ಯಕ್ಷೆ ವಿಜಯಕುಮಾರಿ ಅವರಿಗೆ ಜಿಲ್ಲಾ ಘಟಕದ ಸಂಘಟನಾ ಕಾರ್ಯದರ್ಶಿಯಾಗಿ ನೇಮಕ ಮಾಡಲಾಯಿತು. ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಕಲಾವಿದೆ ಲಕ್ಷ್ಮಿದೇವಮ್ಮ ಮಾತನಾಡಿದರು. ಮಹೇಶ್ ಅವರಿಗೆ ಜಾನಪದ ಯುವ ಬ್ರಿಗೇಡ್ ಸಂಚಾಲಕರಾಗಿ ಪದಪತ್ರ ನೀಡಲಾಯಿತು.

ಕನ್ನಡ ಜಾನಪದ ಪರಿಷತ್ ರಾಮನಗರ ಜಿಲ್ಲಾಧ್ಯಕ್ಷ ಕೆ.ಸಿ. ಕಾಂತಪ್ಪ, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷೆ ಪ್ರತಿಮ ಸೋಮಶೇಖರ್, ಜಿಲ್ಲಾ ಸಂಚಾಲಕಿ ಆಶಾ ನವೀನ್, ರಂಜಿತಾ, ಉಪಸ್ಥಿತರಿದ್ದರು.

### 6ನೇ ತರಗತಿಗೆ ಪ್ರವೇಶಕ್ಕೆ ಸೀಟು ಹಂಚಿಕೆ

**ಚಿಕ್ಕಮಗಳೂರು, ಮೇ 29:** ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಡೂರು ಗೆದ್ಲೇಹಳ್ಳಿಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ತೇಗೂರಿನ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಗಳಿಗೆ ಪ್ರಸಕ್ತ ಸಾಲಿನ 6ನೇ ತರಗತಿ ಪ್ರವೇಶ ಪರೀಕ್ಷೆ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳ ಕೌನ್ಸೆಲಿಂಗ್ ಮೂಲಕ ಸೀಟು ಹಂಚಿಕೆಯ ಪ್ರಕ್ರಿಯೆ ಮೇ 31 ರಂದು ನಡೆಯಲಿದೆ. ಅಂದು ಬೆಳಿಗ್ಗೆ ತೇಗೂರಿನ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಗೆ ದಾಖಲೆಗಳೊಂದಿಗೆ ಕಡ್ಡಾಯವಾಗಿ ಹಾಜರಾಗಬೇಕು. ಈಗಾಗಲೇ ಉತ್ತೀರ್ಣರಾದ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಪೋಷಕರ ನೋಂದಾಯಿತ ದೂರವಾಣಿ ಸಂಖ್ಯೆಗೆ ಲಿಂಕ್ ಕಳುಹಿಸುವ ಮುಖೇನ ಮತ್ತು ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಹಾಗೂ ಜಿಲ್ಲಾ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಕಚೇರಿ(ದೂರವಾಣಿ ಸಂಖ್ಯೆ: 08262–295848, ಮೊ: 6363773997, 9036958376, 9845229695, 9611094548)ಯನ್ನು ಸಂಪರ್ಕಿಸಬಹುದು ಎಂದು ಇಲಾಖೆಯ ಕಚೇರಿ ಪ್ರಕಟಣೆ ತಿಳಿಸಿದೆ.

## ಕರವೇ ಸಂಘಟಿಸುವಲ್ಲಿ ಕಾರ್ಯಕರ್ತರ ಶ್ರಮವಿದೆ : ಅಶೋಕ್

**ಚಿಕ್ಕಮಗಳೂರು:** ಕನ್ನಡ ನೆಲ, ಜಲ, ಭಾಷೆಗಾಗಿ ಪ್ರತಿಯೊಬ್ಬ ಕನ್ನಡಿಗರು ಕರವೇಯನ್ನು ಬಲಪಡಿಸಲು ಒಗ್ಗಟ್ಟಿನಿಂದ ಹೋರಾಡಬೇಕು ಹಾಗೂ ಕನ್ನಡವನ್ನು ಸಂರಕ್ಷಣೆ ಮಾಡಬೇಕು ಎಂದು ಕರವೇ ಜಿಲ್ಲಾಧ್ಯಕ್ಷ ಕೆಂಪನಹಳ್ಳಿ ಅಶೋಕ್ ಹೇಳಿದರು.

ನಗರದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕದಿಂದ ಇಂದು ನಡೆದ ಜಿಲ್ಲಾ, ತಾಲ್ಲೂಕು ಅಧ್ಯಕ್ಷರು ಮತ್ತು ಪದಾಧಿಕಾರಿಗಳ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯಾದ್ಯಂತ ಕರವೇ ಸಂಘಟಿಸುವಲ್ಲಿ ಪ್ರತಿಯೊಬ್ಬ ಕಾರ್ಯಕರ್ತರ ಶ್ರಮ ಅಡಗಿದೆ. ಕಾವೇರಿ, ಮಹದಾಯಿ ನದಿ ಹೋರಾಟದ ಭಾಗವಾಗಿ ಯಾವುದೇ ರಾಜಕೀಯ ಪಕ್ಷ ಮಾಡದ ರೀತಿಯಲ್ಲಿ ಕರವೇ ಹೋರಾಟ ಮಾಡುತ್ತಿದೆ ಎಂದು ತಿಳಿಸಿದರು.



ನಾಡಿನ ಮಣ್ಣಿನ ಋಣ ತೀರಿಸುವಲ್ಲಿ ಪ್ರತಿ ಕರವೇ ಕಾರ್ಯಕರ್ತರು, ಕನ್ನಡಿಗರು ಸ್ವಯಂ ಮುಂದಾಗಬೇಕು. ರಾಜ್ಯಾಧ್ಯಕ್ಷರ ಸಹಕಾರದಿಂದ ಇನ್ನೂ ಹೆಚ್ಚಿನ ರೀತಿಯಲ್ಲಿ ಸಂಘಟನೆ ಕಟ್ಟಲಾಗುವುದು. ಕೈಬಲಪಡಿಸಿದ ಕಾರ್ಯಕರ್ತರಿಗೆ ಚಿರಋಣಿ. ನಮ್ಮ ಸಂಘಟನೆಗೆ ಕಾರ್ಯಕರ್ತರೆ ಜೀವಾಳವಾಗಿದ್ದಾರೆ ಎಂದರು.

ಎಲ್ಲ ಪದಾಧಿಕಾರಿಗಳು ಕಾನೂನು ತಿಳುವಳಿಕೆ ಹೊಂದಿರಬೇಕು. ನಮ್ಮ ಹೋರಾಟ ಕಾನೂನು ಚೌಕಟ್ಟಿ ನಲ್ಲಿರಬೇಕು ಎಂದ ಅವರು ಕನ್ನಡಾಂಬೆಯ ಪ್ರತೀಕವಾಗಿರುವ ಶಾಲು ಪ್ರತಿಯೊಬ್ಬ ಕರವೇ ಕಾರ್ಯಕರ್ತರ ಶಕ್ತಿಯಾಗಿದ್ದು ನ್ಯಾಯಬದ್ಧ ಹೋರಾಟಗಳಲ್ಲಿ ಗಟ್ಟಿಧ್ವನಿಯಾಗಬೇಕು ಎಂದು ಹೇಳಿದರು.

ಕರವೇ ಉಪಾಧ್ಯಕ್ಷ ದಶರಥ ರಾಜ್ ಅರಸ್ ಮಾತನಾಡಿ, ಕನ್ನಡ ಕಟ್ಟುವ ನಿಟ್ಟಿನಲ್ಲಿ ನಾಗರೀಕರು ದೈನಂದಿನ ಕಾಯಕವನ್ನು ಕೆಲಸಮಯ ಬದಿಗಿರಿಸಿ ನಾಡು ಕಟ್ಟುವ ಕಾಯಕಕ್ಕೆ ಮುಂದಾಗಬೇಕು. ಜೀವನದುದ್ದಕ್ಕೂ ಸಂಸಾರ, ಕೆಲಸ, ಒತ್ತಡ ಸಾಮಾನ್ಯ. ಈ ನಡುವಿನಲ್ಲಿ ಭುವನೇಶ್ವರಿ ದೇವಿಯ ಪರಂಪರೆ ಎತ್ತಿ ಹಿಡಿಯುವ ಕೆಲಸಕ್ಕೆ ಮುಂದಾಗಿ ಎಂದರು.

ಇದೇ ವೇಳೆ ಕಡೂರು ಕರವೇ ಮಹಿಳಾ ಘಟಕಕ್ಕೆ ಅನಿತಾ ಲಕ್ಷ್ಮೀಶ್, ಜಿಲ್ಲಾ ಪ್ರಧಾನ ಸಂಚಾಲಕರಾಗಿ ಲತಾ ಸೇರಿದಂತೆ ಹತ್ತು ಮಂದಿ ಕರವೇ ಕುಟುಂಬಕ್ಕೆ ಸೇರ್ಪಡೆಯಾದರು.

ಈ ಸಂದರ್ಭದಲ್ಲಿ ಕರವೇ ಜಿಲ್ಲಾ ಗೌರವಾಧ್ಯಕ್ಷ ಪಂಚಾಕ್ಷರಿ, ಉಪಾಧ್ಯಕ್ಷ ಕೋಟೆ ಮಲ್ಲೇಶ್, ಪ್ರಧಾನ ಕಾರ್ಯದರ್ಶಿ ಕುಮಾರ್.ಆರ್.ಶೆಟ್ಟಿ, ವಕ್ತಾರ ಕೋಟೆ ಸೋಮಣ್ಣ, ಸಂಚಾಲಕ ಸಿದ್ದಪ್ಪ, ಮಹಿಳಾ ಘಟಕದ ಉಪಾಧ್ಯಕ್ಷೆ ಶೈಲಶ್ರೀ ಸಿದ್ದಪ್ಪ, ಪ್ರ. ಕಾರ್ಯದರ್ಶಿ ನಾಗಲತಾ, ತಾಲ್ಲೂಕು ಅಧ್ಯಕ್ಷ ಮನೋಜ್‌ಶೆಟ್ಟಿ, ಮಹಿಳಾ ಘಟಕದ ಅಧ್ಯಕ್ಷೆ ಪೂರ್ಣಿಮ ಮತ್ತಿತರರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ರುದ್ರೇಶ್ ಸಿಂಹಾದ್ರಿ ಸ್ವಾಗತಿಸಿದರು. ಪೂರ್ಣಿಮಾ ನಿರೂಪಿಸಿದರು. ಶೈಲಾ ಬಸವ ರಾಜ್ ಪ್ರಾರ್ಥಿಸಿದರು. ಹರಿಣಾಕ್ಷಿ ವಂದಿಸಿದರು.

## ಬಿ.ಇ.ಡಿ. ಎನ್ನುವುದು ವಿದ್ಯಾರ್ಥಿ ಜೀವನದಿಂದ ಬದುಕಿನ ಜೀವನದ ಕಡೆಗೆ ಕೊಂಡೊಯ್ಯುವ ಪರಿವರ್ತನೆಯ ಹಂತ : ಡಾ.ಅನಂತರಾಮು

**ಚಿತ್ರದುರ್ಗ:** ಬಿ.ಇ.ಡಿ. ಎನ್ನುವುದು ವಿದ್ಯಾರ್ಥಿ ಜೀವನದಿಂದ ಬದುಕಿನ ಜೀವನದ ಕಡೆಗೆ ಕೊಂಡೊಯ್ಯುವ ಪರಿವರ್ತನೆಯ ಹಂತ ಎಂದು ವೆಂಕಟೇಶ್ವರ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.ಬಿ.ಸಿ.ಅನಂತ ರಾಮು ತಿಳಿಸಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯಡಿಯಲ್ಲಿ ನಡೆಯುತ್ತಿರುವ ವೆಂಕಟೇಶ್ವರ ಶಿಕ್ಷಣ ಮಹಾವಿದ್ಯಾಲಯದಲ್ಲಿ ಶನಿವಾರ ನಡೆದ ವಿದ್ಯಾರ್ಥಿ ಸಂಘದ ಉದ್ಘಾಟನೆ ಹಾಗೂ ಪ್ರತಿಭಾ ಪುರಸ್ಕಾರ ನೆರವೇರಿಸಿ ಮಾತನಾಡಿದರು.

ಬಿ.ಇ.ಡಿ. ಶಿಕ್ಷಣ ಬದುಕು ಕಟ್ಟಿಕೊಡುವ ಶಿಕ್ಷಣವಾಗಬೇಕೆ ವಿನಃ ಶೋಕಿಯಾಗಬಾರದು. ಮನೆಯಲ್ಲಿ



ತಂದೆ–ತಾಯಿ, ಗುರು–ಹಿರಿಯರಲ್ಲಿ ಉತ್ತಮ ಬಾಂಧವ್ಯ ಬೆಸೆಯುವಂತ ಶಿಕ್ಷಣ ಮಕ್ಕಳಿಗೆ ಕಲಿಸಬೇಕಿದೆ. ಸದೃಡ ಸಮಾಜ ನಿರ್ಮಿಸುವುದೇ ಶಿಕ್ಷಕರ ಪರಮ ಧ್ಯೇಯವಾಗಬೇಕು. ಇದರ ಮುಂದೆ ಎಲ್ಲವೂ ಗೌಣ. ಮಾನವೀಯತೆ ಸತ್ಯ, ನಿಷ್ಠೆ, ಶ್ರದ್ದೆ, ಕಠಿಣ ಪರಿಶ್ರಮವಿದ್ದಾಗ ಮಾತ್ರ ಜೀವನದಲ್ಲಿ ಏನಾದರೂ ಸಾಧನೆ ಮಾಡಬಹುದು ಎಂದರು.

ಸಹಾಯಕ ಪ್ರಾಧ್ಯಾಪಕ ಡಾ.ಜಿ.ಇ.ಭೈರಸಿದ್ದಪ್ಪ ಮಾತನಾಡಿ ಶಿಕ್ಷಕ ಒಬ್ಬ ನಟ, ಕಲಾವಿದ. ಮಕ್ಕಳಿಗೆ ಪಾಠ ಹೇಳಿಕೊಡುವ ಶಿಕ್ಷಕನಿಗೆ ಕಲೆ ಅತ್ಯಗತ್ಯವಾಗಿ ಬೇಕು. ಅನೇಕ ವಿಚಾರಗಳನ್ನು ಮಕ್ಕಳ ಮನಸ್ಸಿಗೆ ಮುಟ್ಟಿಸಬೇಕಾದರೆ ಶಿಕ್ಷಕ ಸಕಲ ಕಲಾ ವಲ್ಲಭನಾಗಿರಬೇಕು. ಕಲೆ ಇದ್ದವರು ಮಾತ್ರ ಅತ್ಯುತ್ತಮವಾಗಿ ಬೋಧಿಸಲು ಸಾಧ್ಯ ಎಂದರು.

ಪ್ರತಿಯೊಬ್ಬರಲ್ಲಿಯೂ ಒಂದಲ್ಲ ಒಂದು ರೀತಿಯ ಪ್ರತಿಭೆ, ಕೌಶಲ್ಯವಿರುತ್ತದೆ. ಆದರೆ ತಮ್ಮಲ್ಲಿರುವ ಜ್ಞಾನವನ್ನು ಹೇಗೆ ಮತ್ತೊಬ್ಬರಿಗೆ ತಲುಪಿಸಬೇಕೆನ್ನುವ ಚಾಣಾಕ್ಷತನ ಮುಖ್ಯ. ಪ್ರತಿಭೆಯಿದ್ದು, ಪ್ರಯತ್ನವಿಲ್ಲದಿದ್ದರೆ ಜೀವನದಲ್ಲಿ ಯಶಸ್ಸುಗಳಿಸುವುದು ಕಷ್ಟ. ನಿರಂತರ ಅಧ್ಯಯನದಿಂದ ಉತ್ತಮ ಶಿಕ್ಷಕನಾಗಬಹುದು. ಸ್ಪರ್ಧಾತ್ಮಕ ಯುಗದಲ್ಲಿ ಸಿಕ್ಕ ಅವಕಾಶವನ್ನು ಕೈಚೆಲ್ಲಿ ಕೂರಬಾರದು ಎಂದು ಬಿ.ಇ.ಡಿ. ಪ್ರಶಿಕ್ಷಣಾರ್ಥಿಗಳಿಗೆ ಕಿವಿಮಾತು ಹೇಳಿದರು.

ಎಸ್.ಎಲ್.ವಿ. ಸ್ಕೂಲ್ ಆಫ್ ನರ್ಸಿಂಗ್ ಪ್ರಾಂಶುಪಾಲರಾದ ಡಾ.ಎಂ.ಎಂ. ಮಹಾಂತೇಶ, ಸಹಾಯಕ ಪ್ರಾಧ್ಯಾಪ ಕರುಗಳಾದ ಡಾ.ಕೆ.ಪಿ.ನಾಗಭೂಷಣಶೆಟ್ಟಿ, ಪ್ರೊ. ಆರ್.ಎಸ್. ರಾಜು, ಪ್ರೊ.ವಿ.ಪ್ರಕಾಶ್, ಡಾ.ಜಿ.ಬಿ.ರಾಜಪ್ಪ, ಡಾ.ಬಿ.ಚಂದ್ರಪ್ಪ, ಡಾ.ಲಿಂಗರಾಜ್ ಆರ್.ಹಂಚಿನಮನಿ, ಗ್ರಂಥಪಾಲಕ ಬಸವರಾಜು, ನಿವೃತ್ತ ದೈಹಿಕ ಶಿಕ್ಷಣ ನಿರ್ದೇಶಕ

ಪ್ರೊ.ಎಂ.ವಿ.ಗೋವಿಂದರಾಜು, ಸುಶ್ಮ, ಆಯಿಷಾ ಮುಸ್ಕಾನ್ ಇವರುಗಳು ವೇದಿಕೆಯಲ್ಲಿದ್ದರು.

ಬಿ.ಇ.ಡಿ.ಯಲ್ಲಿ ಹೆಚ್ಚು ಅಂಕಗಳನ್ನು ಗಳಿಸಿರುವ ಪಲ್ಲವಿ, ಕಾಂಚನ, ನಿಖಿತ ಇವರುಗಳನ್ನು ಸನ್ಮಾನಿಸಲಾಯಿತು.

### ಬಳ್ಳಾರಿ: ಸಂಡೂರಿನಲ್ಲಿ ಭೀಕರ ಅಪಘಾತ; ಮಹಿಳೆ–ಮಕ್ಕಳು ಸೇರಿ ನಾಲ್ವರು ಸ್ಥಳದಲ್ಲೇ ಸಾವು

**ಬಳ್ಳಾರಿ:** ಭೀಕರ ರಸ್ತೆ ಅಪಘಾತದಲ್ಲಿ ಸ್ಥಳದಲ್ಲೇ ನಾಲ್ವರು ದುರ್ಮರಣ ಹೊಂದಿರುವಂತಹ ಘಟನೆ ಜಿಲ್ಲೆಯ ಸಂಡೂರಿನ ಜೈಸಿಂಗಪುರ ಬಳಿ ನಡೆದಿದೆ.

ಕಬ್ಬಿಣದ ಅದಿರು ಸಾಗಿಸುತ್ತಿದ್ದ ಟಿಪ್ಪರ್ ಲಾರಿ ಕಾರಿಗೆ ಡಿಕ್ಕಿ ಹೊಡೆದು ದುರಂತ ಸಂಭವಿಸಿದೆ. ಇಬ್ಬರು ಮಹಿಳೆಯರು ಹಾಗೂ ಇಬ್ಬರು ಮಕ್ಕಳು ದುರ್ಮರಣ ಹೊಂದಿದ್ದಾರೆ.

ಸಂಡೂರು ತಾಲೂಕಿನ ಲಕ್ಷ್ಮಿಪುರ ಗ್ರಾಮದ ನಿವಾಸಿಗಳಾದ ಆಶಾ (28 )ಜಯಲಕ್ಷ್ಮಿ (21), ಒಬ್ಬ ಬಾಲಕ ಮತ್ತು ಬಾಲಕಿ ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆ.

ಕಾರು ಸಂಡೂರು ಪಟ್ಟಣದಿಂದ ಹೊಸಪೇಟೆ ಕಡೆಗೆ ತೆರಳುತ್ತಿತ್ತು. ಈ ವೇಳೆ ಹೊಸಪೇಟೆ ಕಡೆಯಿಂದ ವೇಗವಾಗಿ ಬಂದ ಅದಿರು ಲಾರಿಯು ಕಾರಿಗೆ ಡಿಕ್ಕಿ ಹೊಡೆದಿದೆ.ಕಾರಿನ ಚಾಲಕ ಗಂಭೀರವಾಗಿ ಗಾಯಗೊಂಡಿದ್ದಾನೆ. ಲಾರಿ ಚಾಲಕ ಪರಾರಿಯಾಗಿದ್ದಾನೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**